ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೪೨

**ಪಟ್ಟಿ – ೦೮**

# ಕರ್ನಾಟಕ ವಿಧಾನ ಪರಿಷತ್ತು

**ನೂರ ನಲವತ್ತೊಂದನೆಯ ಅಧಿವೇಶನ**

**ಬುಧವಾರ, ದಿನಾಂಕ : ೩೦ನೇ ಸೆಪ್ಟೆಂಬರ್, ೨೦೨೦**

---

## ಸಮೂಹ – III

೧. ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು.

೨. ಕಂದಾಯ ಸಚಿವರು.

೩. ವಸತಿ ಸಚಿವರು.

೪. ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು.

೫. ಕೃಷಿ ಸಚಿವರು.

---

## ಎಸ್.ಸಿ.ಪಿ/ಟಿ.ಎಸ್.ಪಿ ಕಾಮಗಾರಿಗಳ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೦೦೮ (೧೨೯೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ಬೀದರ್ ಜಿಲ್ಲೆಗೆ ಎಸ್.ಸಿ.ಪಿ/ ಟಿ.ಎಸ್.ಪಿ ಯೋಜನೆಯಡಿಯಲ್ಲಿ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ ; (ವಿವರ ನೀಡುವುದು)

(ಆ) ಸದರಿ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; (ಕಾಮಗಾರಿಯ ಸ್ಥಳ, ಗ್ರಾಮಗಳು, ಕಾಮಗಾರಿಗೆ ತಗುಲಿದ ವೆಚ್ಚ, ಕಾಮಗಾರಿ ನಿರ್ವಹಿಸಿದ ಗುತ್ತಿಗೆದಾರರ ಹೆಸರುಗಳೊಂದಿಗೆ ಆಯಾ ವಿಧಾನ ಸಭಾ ಕ್ಷೇತ್ರವಾರು, ವರ್ಷವಾರು ಮಾಹಿತಿ ಒದಗಿಸುವುದು)

(ಇ) ಮಂಜೂರಾದ ಕಾಮಗಾರಿಗಳನ್ನು ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡಗಳ ಕಾಲೋನಿಗಳಲ್ಲಿ ಕೈಗೊಳ್ಳದೇ ಬೇರೆ ಬೇರೆ ಕಡೆಗಳಲ್ಲಿ ಕೈಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತಹ ಅಧಿಕಾರಿ/ನೌಕರರ ವಿರುದ್ಧ ಯಾವ ಶಿಸ್ತು ಕ್ರಮ ಕೈಗೊಳ್ಳಲಾಗಿದೆ ? (ಮಾಹಿತಿ ಒದಗಿಸುವುದು)

## ಉದ್ಯಮಶೀಲತೆ ಯೋಜನೆಯಲ್ಲಿ ತಾರತಮ್ಯ ಮಾಡುತ್ತಿರುವ ಬಗ್ಗೆ

**ಶ್ರೀ ಅರವಿಂದ ಕುಮಾರ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೦೦೯ (೧೨೨೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಕಳೆದ ೨೦೧೫–೧೬ ರಿಂದ ೨೦೧೮–೧೯ನೇ ಸಾಲಿನವರೆಗೆ ಉದ್ಯಮಶೀಲತೆ ಯೋಜನೆಯಡಿ ಆಯ್ಕೆಯಾಗಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಆ) ಈ ಯೋಜನೆಯಡಿಯಲ್ಲಿ ಗುರಿಗನುಗುಣವಾಗಿ ಸಾಧನೆ ಮಾಡಲಾಗಿದೆಯೇ ; (ಫಲಾನುಭವಿಗಳ ಹೆಸರು, ವಿಳಾಸದೊಂದಿಗೆ ವರ್ಷವಾರು, ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ವಿವರ ಒದಗಿಸುವುದು)

(ಇ) ವಿವಿಧ ಯೋಜನೆಗಳಲ್ಲಿ ಆಯ್ಕೆ ಮಾಡುವಲ್ಲಿ ಅಧಿಕಾರಿಗಳು ಮಧ್ಯವರ್ತಿಗಳೊಂದಿಗೆ ಕೈಜೋಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತಹ ಅಧಿಕಾರಿ/ನೌಕರರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಸಾಲ ಸೌಲಭ್ಯ ಕಲ್ಪಿಸಿಕೊಡುವ ಬಗ್ಗೆ

**ಶ್ರೀ ಅರವಿಂದ ಕುಮಾರ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೦೧೦ (೧೨೧೦+೧೨೧೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪ರಿಂದ ೨೦೧೯–೨೦೨೦ನೇ ಸಾಲಿನವರೆಗೆ ಬೀದರ್ ಜಿಲ್ಲೆಯಲ್ಲಿ ಡಾ॥ ಬಿ.ಆರ್. ಅಂಬೇಡ್ಕರ್ ಮತ್ತು ಕರ್ನಾಟಕ ಮಹರ್ಷಿ ವಾಲ್ಮಿಕಿ ಅಭಿವೃದ್ಧಿ ನಿಗಮದ ವಿವಿಧ ಯೋಜನೆಯಡಿಯಲ್ಲಿ ಯಾವ ಯಾವ ಸಾಲ ಸೌಲಭ್ಯವನ್ನು ಎಷ್ಟು ಕುಟುಂಬಗಳಿಗೆ ಒದಗಿಸಲಾಗಿದೆ ; (ಫಲಾನುಭವಿಗಳವಾರು, ತಾಲ್ಲೂಕುವಾರು ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಡಾ॥ ಬಿ.ಆರ್. ಅಂಬೇಡ್ಕರ್ ಮತ್ತು ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಒಂದೇ ಕುಟುಂಬದಲ್ಲಿ ಒಬ್ಬರಿಗೆ ಸಾಲ ಸೌಲಭ್ಯವನ್ನು ಕಲ್ಪಿಸಿಕೊಡುವ ನಿಯಮವಿದ್ದರೂ ಒಂದು ಕುಟುಂಬದ ಒಂದಕ್ಕಿಂತ ಹೆಚ್ಚು ಸದಸ್ಯರಿಗೆ ಸಾಲ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು ;

(ಇ) ಸದರಿ ನಿಯಮಗಳನ್ನು ಉಲ್ಲಂಘಿಸಿ ಒಂದೇ ಕುಟುಂಬದ ಒಂದಕ್ಕಿಂತ ಹೆಚ್ಚು ಸದಸ್ಯರಿಗೆ ಸಾಲ ನೀಡಿದ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಜರುಗಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಒಂದು ಕುಟುಂಬದಲ್ಲಿ ಒಂದಕ್ಕಿಂತ ಹೆಚ್ಚು ಸದಸ್ಯರಿಗೆ ಸಾಲ ನೀಡಿದ ಪ್ರಕರಣಗಳೆಷ್ಟು ; ಅಂತಹ ಸಾಲ ಸೌಲಭ್ಯಗಳನ್ನು ವಾಪಸ್ಸು ಪಡೆಯಲು ಸರ್ಕಾರ ಯಾವ ಯಾವ ಕ್ರಮಕೈಗೊಳ್ಳುವುದು ; (ಮಾಹಿತಿ ನೀಡುವುದು)

(ಉ) ಬೀದರ್ ಜಿಲ್ಲೆಯಲ್ಲಿ ೨೦೧೪-೧೫ ಮತ್ತು ೨೦೨೦-೨೧ನೇ ಸಾಲಿನವರೆಗೆ ಡಾ॥ ಬಿ.ಆರ್. ಅಂಬೇಡ್ಕರ್ ಮತ್ತು ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ಯೋಜನೆಯಡಿಯಲ್ಲಿ ಎಷ್ಟು ಕುಟುಂಬಗಳಿಗೆ ಸೌಲಭ್ಯ ಒದಗಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಊ) ೨೦೧೪-೧೫ ಮತ್ತು ೨೦೨೦-೨೧ನೇ ಸಾಲಿನವರೆಗೆ ಡಾ॥ ಬಿ.ಆರ್. ಅಂಬೇಡ್ಕರ್ ಮತ್ತು ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಒಂದು ಕುಟುಂಬದಲ್ಲಿ ಒಬ್ಬರಿಗೆ ಸಾಲ ಸೌಲಭ್ಯವನ್ನು ಕಲ್ಪಿಸಿಕೊಡುವ ನಿಯಮವಿದ್ದು, ಒಂದು ಕುಟುಂಬದಲ್ಲಿ ಒಂದಕ್ಕಿಂತ ಹೆಚ್ಚು ಸದಸ್ಯರಿಗೆ ಸಾಲ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಸ್ವರ್ಣ ಕೃಷಿಗ್ರಾಮ ಯೋಜನೆಯ ಬಗ್ಗೆ

**ಶ್ರೀ ಅರವಿಂದ ಕುಮಾರ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೦೧೧ (೧೨೦೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಈ ಹಿಂದೆ ಸುವರ್ಣ ಕೃಷಿಗ್ರಾಮ ಯೋಜನೆಯಡಿ ಮಾದರಿ ಕೃಷಿ ಗ್ರಾಮಗಳನ್ನಾಗಿ ಮಾಡಲು ಉದ್ದೇಶಿಸಲಾಗಿದ್ದು, ಇದರ ಮಾರ್ಗ ಸೂಚಿಗಳೇನು ; ಈ ಕಾರ್ಯಕ್ರಮ ಯಾವ ಹಂತದಲ್ಲಿದೆ ;

(ಆ) ಯಾವ ಯಾವ ಗ್ರಾಮಗಳಲ್ಲಿ ಈ ಯೋಜನೆಯು ಪ್ರಗತಿ ಕಂಡಿದೆ ? (ಕ್ಷೇತ್ರವಾರು ವಿವರ ನೀಡುವುದು)

## ಕ್ರೈಸ್ ಸಂಸ್ಥೆಯ ನೌಕರರಿಗೆ ವಿವಿಧ ಸೌಲಭ್ಯಗಳನ್ನು ನೀಡುವ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೦೧೨ (೧೧೬೫) ಮಾನ್ಯ ಉಪ ಮುಖ್ಯಮಂತ್ರಿಯವರು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯ ಅಧೀನದ ಕ್ರೈಸ್ ಸಂಸ್ಥೆಯ ವಸತಿ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಖಾಯಂ ನೌಕರರಿಗೆ ಮರಣ ಉಪದಾನ (ಡಿ.ಸಿ.ಆರ್.ಜಿ) ಸೌಲಭ್ಯ ನೀಡದಿರುವುದಕ್ಕೆ ಕಾರಣಗಳೇನು ;

(ಆ) ಕ್ರೈಸ್ ಸಂಸ್ಥೆಯ ವಸತಿ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಖಾಯಂ ನೌಕರರಿಗೆ ಇ.ಜಿ.ಐ.ಎಸ್ (ಎಂಪ್ಲಾಯ್ ಗ್ರಾಚ್ಯೂಟಿ ಇನ್ಸ್ಯೂರೆನ್ಸ್

ಸ್ಕೀಮ್) ಮೊತ್ತ ನೀಡಲಾಗುತ್ತಿದೆಯೇ ; ಈ ಮೊತ್ತದ ಪ್ರಮಾಣ ಎಷ್ಟು ; ಇಂದಿನವರೆವಿಗೂ ಎಷ್ಟು ಮೃತ ನೌಕರರಿಗೆ ಈ ಸೌಲಭ್ಯ ನೀಡಲಾಗಿದೆ ;

(ಇ) ಕ್ರೈಸ್ ಸಂಸ್ಥೆಯ ವಸತಿ ಶಾಲೆಗಳಲ್ಲಿ ಸೇವೆ ಸಲ್ಲಿಸಿ ಇಲ್ಲಿಯವರೆಗೂ ನಿಧನರಾದ ನೌಕರರ ಸಂಖ್ಯೆ ಎಷ್ಟು ; ನಿಧನರಾದ ನೌಕರರ ಕುಟುಂಬಕ್ಕೆ ಸರ್ಕಾರ/ಕ್ರೈಸ್ ಸಂಸ್ಥೆ ನೀಡಿರುವ ಪರಿಹಾರ ಮೊತ್ತ ಎಷ್ಟು ಹಾಗೂ ಫಲಾನುಭವಿಗಳ ಸಂಖ್ಯೆ ಎಷ್ಟು ಮತ್ತು ಯಾರು ಯಾರು ; ಅನುಕಂಪದ ಆಧಾರಿತ ಸೇವೆಗೆ ಸೇರಿದವರ ವಿವರಗಳನ್ನು ನೀಡುವುದು ; ನೀಡದೇ ಇದ್ದಲ್ಲಿ, ಕಾರಣಗಳೇನು;

(ಈ) ಕ್ರೈಸ್ ಸಂಸ್ಥೆಯ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಬೋಧಕ/ಬೋಧಕೇತರರಿಗೆ ಜ್ಯೋತಿ ಸಂಜೀವಿನಿ ಯೋಜನೆ ಹಾಗೂ ನಗದು ರಹಿತ ಸೌಲಭ್ಯಗಳನ್ನು ನೀಡಲಾಗುತ್ತಿದೆಯೇ ; ಮಾಹಿತಿ ಇಲ್ಲದಿದ್ದಲ್ಲಿ, ಕಾರಣವೇನು ? (ಸಂಪೂರ್ಣ ಮಾಹಿತಿಯೊಂದಿಗೆ ವಿವರ ನೀಡುವುದು)

## ಕ್ರೈಸ್ ಸಂಸ್ಥೆಯ ಬೋಧಕರಿಗೆ ವಿಶೇಷ ವೇತನ ಬಡ್ತಿ ನೀಡುವ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೦೧೩ (೧೧೮೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯ ಕ್ರೈಸ್ ಸಂಸ್ಥೆಯ ವಸತಿ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಖಾಯಂ ಸಹ ಶಿಕ್ಷಕರಿಗೆ ಕುಮಾರ್ ನಾಯಕ್

ವರದಿಯನ್ವಯ ವಿಶೇಷ ವೇತನ ಬಡ್ತಿ ನೀಡುವಂತೆ ಪ್ರಸ್ತಾವನೆ ಎಂದಿನಿಂದ ಬಂದಿರುತ್ತದೆ ;

(ಆ) ಈ ವಿಶೇಷ ವೇತನ ಬಡ್ತಿ ನೀಡಲು ಇರುವ ಸಮಸ್ಯೆಗಳೇನು ಹಾಗೂ ಕಾರಣಗಳೇನು ; ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ಪ್ರಸ್ತಾವನೆ ಸಹಿತ ವಿವರಗಳನ್ನು ಒದಗಿಸುವುದು)

(ಇ) ವಿಶೇಷ ವೇತನ ಬಡ್ತಿ ನೀಡುವಂತೆ ನ್ಯಾಯಾಲಯದ ಆದೇಶಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಆ ಕುರಿತು ತೆಗೆದುಕೊಂಡ ಕ್ರಮಗಳೇನು ? (ನ್ಯಾಯಾಲಯಗಳ ಆದೇಶದ ಪ್ರತಿ ಹಾಗೂ ಆದೇಶದನ್ವಯ ತೆಗೆದುಕೊಂಡ ಕ್ರಮಗಳ ಕುರಿತು ಸಂಪೂರ್ಣ ಮಾಹಿತಿ ನೀಡುವುದು)

## ಮಂಡ್ಯ ಜಿಲ್ಲಾ ವ್ಯಾಪ್ತಿಯ ವಸತಿ ಶಾಲೆಗಳ ಶಿಕ್ಷಕರ ಮಾಹಿತಿ ನೀಡುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೧೪ (೧೨೭೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯ ವ್ಯಾಪ್ತಿಯಲ್ಲಿ ನಡೆಯುತ್ತಿರುವ ವಸತಿ ಶಾಲೆಗಳ ಸಂಖ್ಯೆ ಎಷ್ಟು ;

(ಆ) ಸದರಿ ಶಾಲೆಗಳಲ್ಲಿ ಅತಿಥಿ ಶಿಕ್ಷಕರಾಗಿ ಕರ್ತವ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

(ಇ) ಕೋವಿಡ್–೧೯ರ ಸಂಬಂಧ ಶಾಲೆಗಳು ಇನ್ನು ಪ್ರಾರಂಭ ವಾಗದಿರುವುದರಿಂದ ಈ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರಿಗೆ ಗೌರವ ಧನ ಅಥವಾ ವೇತನ ನೀಡಲಾಗುತ್ತಿದೆಯೇ; ವೇತನ ನೀಡದೆ ಇದ್ದಲ್ಲಿ ಸದರಿ ಅತಿಥಿ ಶಿಕ್ಷಕರ ಕುಟುಂಬ ನಿರ್ವಹಣೆ ಮಾಡಲು ಕಷ್ಟದಲ್ಲಿರುವುದರಿಂದ ಅವರಿಗೆ ವೇತನ ನೀಡಲು ತಕ್ಷಣ ಕ್ರಮ ತೆಗೆದುಕೊಳ್ಳಲಾಗುವುದೇ ?

## ನಾಗಮಂಗಲ ಮತ್ತು ಮಂಡ್ಯ ಮುಖ್ಯರಸ್ತೆಯ ಕಾಮಗಾರಿ ಪೂರ್ಣಗೊಳ್ಳದೇ ಇರುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೧೫ (೧೨೭೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆ, ನಾಗಮಂಗಲ ತಾಲ್ಲೂಕು, ನಾಗಮಂಗಲ–ಮಂಡ್ಯ ಮುಖ್ಯ ರಸ್ತೆಯ ದೇವಲಾಪುರ ಹ್ಯಾಂಡ್‌ಪೋಸ್ಟ್‌ನಿಂದ ತಾಲ್ಲೂಕಿನ ಗಡಿ (ಬಸರಾಳು) ವರೆಗೆ ರಸ್ತೆ ಕಾಮಗಾರಿ ಪ್ರಾರಂಭವಾಗಿ ೦೨ ವರ್ಷಗಳು ಕಳೆದರೂ ಕಾಮಗಾರಿ ಪೂರ್ಣಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಕಾಮಗಾರಿಯ ಅಂದಾಜು ಮೊತ್ತವೆಷ್ಟು ಹಾಗೂ ಅಂದಾಜು ಪ್ರತಿ ಮತ್ತು ಯಾವ ಗುತ್ತಿಗೆದಾರರಿಗೆ ಈ ಕಾಮಗಾರಿ ವಹಿಸಲಾಗಿದೆ; (ವಿವರ ನೀಡುವುದು)

(ಇ) ನಾಗಮಂಗಲ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ನಿಗಧಿತ ಅವಧಿಯಲ್ಲಿ ಪೂರ್ಣಗೊಳ್ಳದಿರುವ ಕಾಮಗಾರಿಗಳಾವುವು ;

ವಿಳಂಬಕ್ಕೆ ಕಾರಣವೇನು ; ಅವಧಿ ವಿಸ್ತರಣೆ ಮಾಡಲು ಸಮಯಾವಕಾಶ ನೀಡಲಾಗಿದೆಯೇ ; ನೀಡಿದ್ದಲ್ಲಿ, ಆದೇಶ ಪ್ರತಿ ನೀಡುವುದು ;

(ಈ) ಈ ಸಂಬಂಧ ಇಲಾಖಾ ಕಾರ್ಯಪಾಲಕ ಅಭಿಯಂತರರು, ನಾಗಮಂಗಲ ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು ಮತ್ತು ಗುತ್ತಿಗೆದಾರರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಮಂಡ್ಯ ಜಿಲ್ಲೆಯ ದರಕಾಸ್ತು/ಬಗರ್‌ಹುಕುಂ ಅಡಿ ಅರ್ಜಿ ಸಲ್ಲಿಸಿರುವ ಪ್ರಕರಣಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೧೬ (೧೨೭೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆ ವ್ಯಾಪ್ತಿಯಲ್ಲಿ ದರಕಾಸ್ತು/ಬಗರ್ ಹುಕುಂ ಅಡಿ ಫಾರಂ ನಂಬರ್–೫೧, ೫೩, ೫೭ರಲ್ಲಿ ಅರ್ಜಿ ಸಲ್ಲಿಸಿರುವವರಲ್ಲಿ ೫೧ ಮತ್ತು ೫೩ ರಡಿ ಅರ್ಜಿ ಸಲ್ಲಿಸಿರುವ ಪ್ರಕರಣಗಳನ್ನು ಮೊದಲು ಇತ್ಯರ್ಥಪಡಿಸದೆ ಫಾರಂ ನಂ–೫೭ ರಲ್ಲಿ ಅರ್ಜಿ ಸಲ್ಲಿಸಿರುವ ಪ್ರಕರಣಗಳನ್ನು ಇತ್ಯರ್ಥಪಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ೫೧ ಮತ್ತು ೫೩ ರಡಿ ಅರ್ಜಿ ಸಲ್ಲಿಸಿದ್ದ ಅರ್ಜಿಗಳನ್ನು ಯಾವಾಗ ಇತ್ಯರ್ಥ ಪಡಿಸಲಾಗುವುದು ; (ತಾಲ್ಲೂಕುವಾರು ೫೧, ೫೩ ಮತ್ತು ೫೭ ರಡಿ ಅರ್ಜಿ ಸಲ್ಲಿಸಿರುವವರ ವಿವರವನ್ನು ನೀಡುವುದು)

(ಆ) ಫಾರಂ ನಂಬರ್ ೫೧ ಮತ್ತು ೫೩ ರಡಿ ಅರ್ಜಿ ಸಲ್ಲಿಸಿರುವುದರಲ್ಲಿ ಈವರೆಗೆ ಎಷ್ಟು ಅರ್ಜಿಗಳನ್ನು ಇತ್ಯರ್ಥ ಪಡಿಸಿ ಪಹಣಿಗೆ ಮಂಜೂರಾತಿ ನೀಡಲಾಗಿದೆ ; ಇನ್ನೂ ಎಷ್ಟು ಅರ್ಜಿಗಳು ಇತ್ಯರ್ಥ ಆಗಿರುವುದಿಲ್ಲ ಹಾಗೂ ಕಾರಣವೇನು ? (ತಾಲ್ಲೂಕುವಾರು ವಿವರ ನೀಡುವುದು)

## ಕರ್ನಾಟಕ ಗೃಹ ಮಂಡಳಿಯಿಂದ ನಿವೇಶನ ರಹಿತರಿಗೆ ಹಂಚಿಕೆ ಮಾಡುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೧೭ (೧೨೭೩) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಗೃಹ ಮಂಡಳಿ ವತಿಯಿಂದ ನಾಗಮಂಗಲ ತಾಲ್ಲೂಕು, ಬೆಳ್ಳೂರು ಹೋಬಳಿ, ಹಾಲಾಳು ಎಲ್ಲೆ ಪರಿಮಿತಿಯಲ್ಲಿ ನಿವೇಶನ ರಹಿತರಿಗೆ ನಿವೇಶನ ಹಂಚಿಕೆ ಮಾಡಲು ಸ್ಥಳ ಆಯ್ಕೆ ಮಾಡಲಾಗಿದೆಯೇ ; ಹಾಗಿದ್ದಲ್ಲಿ, ಎಷ್ಟು ಎಕರೆ ಜಾಗ ಗುರುತಿಸಲಾಗಿದೆ ; (ಸರ್ವೆ ನಂಬರ್‌ವಾರು ವಿವರ ನೀಡುವುದು)

(ಆ) ಕರ್ನಾಟಕ ಗೃಹ ಮಂಡಳಿಯಲ್ಲಿ ಅರ್ಜಿ ಸಲ್ಲಿಸಿ, ಹಣ ಪಾವತಿ ಮಾಡಿ ಸುಮಾರು ಐದು ವರ್ಷಗಳು ಕಳೆದರೂ ಈವರೆವಿಗೂ ಫಲಾನುಭವಿಗಳಿಗೆ ನಿವೇಶನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಸಂಬಂಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ಹಾಗೂ ಫಲಾನುಭವಿಗಳಿಗೆ ಯಾವಾಗ ನಿವೇಶನ ಹಂಚಿಕೆ ಮಾಡಲಾಗುವುದು ;

(ಇ) ಮಂಡ್ಯ ಜಿಲ್ಲೆ ವ್ಯಾಪ್ತಿಯ ಗ್ರಾಮ ಪಂಚಾಯಿತಿಯಲ್ಲಿ ಮನೆ ನಿರ್ಮಾಣ ಮಾಡಲು ಆಯ್ಕೆಯಾಗಿ ಕಾರಣಾಂತರಗಳಿಂದ ನಿಗಧಿತ ಕಾಲಮಿತಿಯೊಳಗೆ ಮನೆ ನಿರ್ಮಾಣ ಮಾಡದೆ ಬ್ಲಾಕ್

ಆಗಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; ಇಂತಹ ಪ್ರಕರಣಗಳನ್ನು ಇತ್ಯರ್ಥಪಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಬ್ಲಾಕ್ ಆಗಿದ್ದು ತಳಪಾಯ ಮತ್ತು ಗೋಡೆ ನಿರ್ಮಾಣದ ಹಂತದಲ್ಲಿರುವ ಫಲಾನುಭವಿಗಳಿಗೆ ಅನುದಾನ ಮಂಜೂರು ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ?

## ಕರ್ನಾಟಕ ಗೃಹ ಮಂಡಳಿ ವತಿಯಿಂದ ಮಂಡ್ಯ ಗ್ರಾಮದ ಸರ್ವೆ ನಂ–೫೦೭ ವಸತಿ ಬಡಾವಣೆ ಕುರಿತು

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೧೮ (೧೨೭೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಗೃಹ ಮಂಡಳಿ ವತಿಯಿಂದ ಮಂಡ್ಯ ಕೆರೆ ಅಂಗಳದಲ್ಲಿ ಮಂಡ್ಯ ಗ್ರಾಮದ ಸರ್ವೆ ನಂ–೫೦೭ ರಲ್ಲಿ ವಸತಿ ಬಡಾವಣೆಯನ್ನು ಯಾವಾಗ ಅಭಿವೃದ್ಧಿಪಡಿಸಲಾಗಿದೆ ;

(ಆ) ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ಹಾಗೂ ಯಾವಾಗ; (ವಿವರ ನೀಡುವುದು)

(ಇ) ಸದರಿ ಬಡಾವಣೆಯನ್ನು ಮಂಡ್ಯ ನಗರ ಸಭೆಗೆ ಹಸ್ತಾಂತರ ಮಾಡಲಾಗಿದೆಯೇ ; (ವಿವರ ನೀಡುವುದು)

(ಈ) ಮಂಡ್ಯ ನಗರ ಸಭೆಯವರು ಈ ಬಡಾವಣೆಗೆ ಸಂಬಂಧಿಸಿದಂತೆ ಕೆ.ಹೆಚ್.ಬಿ ರವರಿಂದ ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಬರಬೇಕಾದ ೭೭ ಲಕ್ಷ ಶುಲ್ಕ ಬಂದ ನಂತರ ಹಸ್ತಾಂತರ ಮಾಡಿಕೊಳ್ಳುವುದಾಗಿ ತಿಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ,

ಈ ಶುಲ್ಕವನ್ನು ಕೆ.ಹೆಚ್.ಬಿ ಯಿಂದ ಪಾವತಿಸಿ ಸಮಸ್ಯೆಯನ್ನು ಬಗೆಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## ಉಪ ವಿಭಾಗಾಧಿಕಾರಿಗಳು, ತಹಶೀಲ್ದಾರ್‌ರ ಕರ್ತವ್ಯದ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೦೧೯ (೧೨೧೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಉಪ ವಿಭಾಗಾಧಿಕಾರಿಗಳು ಮತ್ತು ತಹಶೀಲ್ದಾರರ ಕಛೇರಿಗಳ ಸಂಖ್ಯೆ ಎಷ್ಟು ; ಪ್ರತಿ ಉಪವಿಭಾಗಾಧಿಕಾರಿ ಮತ್ತು ತಹಶೀಲ್ದಾರ್‌ಗಳ ಕಛೇರಿಗೆ ಮಂಜೂರಾತಿಯಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಕೊರತೆಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಕೊರತೆಯಿರುವ ಹುದ್ದೆಗಳನ್ನು ಯಾವಾಗ ತುಂಬಲಾಗುವುದು; (ಜಿಲ್ಲಾವಾರು, ಹುದ್ದೆವಾರು ವಿವರ ನೀಡುವುದು)

(ಆ) ಉಪ ವಿಭಾಗಾಧಿಕಾರಿ ಮತ್ತು ತಹಶೀಲ್ದಾರರವರಿಗೆ ಅರೆ ನ್ಯಾಯಿಕ ಅಧಿಕಾರವನ್ನು ಮಾಡುವ ಕಾಯ್ದೆಗಳು ಯಾವುವು ; (ಕಾಯ್ದೆವಾರು ವಿವರ ನೀಡುವುದು)

(ಇ) ಉಪ ವಿಭಾಗಾಧಿಕಾರಿ/ತಹಶೀಲ್ದಾರರವರು ಅಧ್ಯಕ್ಷರಾಗಿರುವ ಸದಸ್ಯ ಕಾರ್ಯದರ್ಶಿಯಾಗಿರುವ ಸದಸ್ಯರಾಗಿರುವ ಸಮಿತಿಗಳು ಯಾವುವು; ಇವರು ಯಾವ ಯಾವ ಇಲಾಖೆಗಳ ಯಾವ ಯಾವ ಸಮಿತಿಗಳಿಗೆ ಅಧ್ಯಕ್ಷರಾಗಿರುತ್ತಾರೆ ; ಇವರು ವಾರ್ಷಿಕವಾಗಿ ಭಾಗವಹಿಸಬೇಕಾದ ಸಮಿತಿ ಸಭೆಗಳ ಸಂಖ್ಯೆ ಎಷ್ಟು ? (ಅವುಗಳಲ್ಲಿ ಕಾರ್ಯನಿರ್ವಹಿಸಲು ಇರುವ ಮಾರ್ಗಸೂಚಿ ಸುತ್ತೋಲೆಯ ಪ್ರತಿಯನ್ನು ಒದಗಿಸುವುದು)

## ಮೀನುಗಾರರ ರಕ್ಷಣೆ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೦೨೦ (೧೨೨೦) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕನ್ನಡ ಜಿಲ್ಲೆ, ಅಂಕೋಲಾದಲ್ಲಿನ ಬೇಲೇಕೇರಿ ಬಂದರು ಪ್ರದೇಶದಲ್ಲಿ ನಿರ್ವಹಣೆ ಕೊರತೆಯಿಂದಾಗಿ ಫ್ಲಾಟ್‌ಫಾರ್ಮ್ ಇಲ್ಲದೆ ಮಹಿಳೆಯರು ಮೀನು ಒಣಗಿಸಲಾಗದೆ ಪ್ರತಿನಿತ್ಯ ಬವಣೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಬಂದರು ನಿರ್ವಹಣೆಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಇ) ಲಾಕ್‌ಡೌನ್ ಸಮಯದಲ್ಲಿ ಮೀನುಗಾರರ ರಕ್ಷಣೆ ಮಾಡಬೇಕಾದದ್ದು ಸರ್ಕಾರದ ಕರ್ತವ್ಯವಲ್ಲವೇ ; ಅವರ ಜೀವನ ನಿರ್ವಹಣೆಗೆ ಸರ್ಕಾರದ ಮಟ್ಟದಲ್ಲಿ ಕೈಗೊಂಡ ಕ್ರಮಗಳೇನು ;

(ಈ) ಮೀನುಗಾರರು ಈ ಕ್ಲಿಷ್ಟಕರ ಸನ್ನಿವೇಶವಾದ ಕೋವಿಡ್–೧೯ ಸಮಯದಲ್ಲಿ ಉದ್ಯೋಗವಿಲ್ಲದೆ ಕಷ್ಟಪಡುತ್ತಿದ್ದು, ಇವರಿಗೆ ಉದ್ಯೋಗ ಭದ್ರತೆ ನೀಡುವಲ್ಲಿ ಸರ್ಕಾರವು ಹೆಜ್ಜೆ ಇಟ್ಟಿದೆಯೇ ; ಹಾಗಿದ್ದಲ್ಲಿ, ಯಾವ ರೀತಿ ಕ್ರಮ ಕೈಗೊಂಡಿದೆ ? (ಪೂರ್ಣ ಮಾಹಿತಿ ನೀಡುವುದು)

## ಉಡುಪಿ ಜಿಲ್ಲೆಯ ಲೋಕೋಪಯೋಗಿ ಇಲಾಖಾ ರಸ್ತೆಯ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೦೨೧ (೧೨೯೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿರುವ ಲೋಕೋಪಯೋಗಿ ಇಲಾಖೆಯ ಅಧೀನದಲ್ಲಿರುವ ರಸ್ತೆಗಳು ಯಾವುವು ; ಅವುಗಳ ಉದ್ದವೆಷ್ಟು; (ರಸ್ತೆ ಮತ್ತು ಕಿಲೋಮೀಟರ್‌ಗಳ ವಿವರ ನೀಡುವುದು)

(ಆ) ಈ ರಸ್ತೆಗಳನ್ನು ಲೋಕೋಪಯೋಗಿ ಇಲಾಖೆಯ ರಸ್ತೆಗಳೆಂದು ಯಾವಾಗ ಘೋಷಣೆ ಮಾಡಲಾಗಿರುತ್ತದೆ ; ಘೋಷಣೆಯ ಪ್ರತಿಯನ್ನು ಒದಗಿಸುವುದು ;

(ಇ) ಲೋಕೋಪಯೋಗಿ ರಸ್ತೆಗಳ ನಿಗದಿಪಡಿಸಲಾದ ಗಡಿ ರೇಖೆ, ಕಟ್ಟಡ ರೇಖೆ ಮತ್ತು ನಿಯಂತ್ರಣ ರೇಖೆಗಳು ಯಾವುವು ; (ಆದೇಶದ ಪ್ರತಿ ಒದಗಿಸುವುದು)

(ಈ) ಈ ಕಟ್ಟಡ ರೇಖೆಗಳು ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ, ಪಟ್ಟಣ ಪಂಚಯತಿ, ಗ್ರಾಮ ಪಂಚಾಯತಿ ಪರಿಮಿತಿಯಲ್ಲಿ ಹಾಗೂ ಮಹಾನಗರ ಪಾಲಿಕೆಯಿಂದ ೧೫ ಕಿ.ಮೀ. ಪರಿಮಿತಿಯಲ್ಲಿ ವ್ಯತ್ಯಾಸವಿರಲು ಕಾರಣವೇನು ?

## ರಾಜ್ಯದಲ್ಲಿರುವ ನಮೂನೆ ೫೦, ೫೩ ಮತ್ತು ೫೭ರಲ್ಲಿ ಸಲ್ಲಿಕೆಯಾದ ಅರ್ಜಿಗಳ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ):–**

೧೦೨೨(೧೨೧೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಕ್ರಮ ಸಕ್ರಮ ಯೋಜನೆಯಲ್ಲಿ ನಮೂನೆ ೫೦, ೫೩ರಲ್ಲಿ ರೈತರಿಂದ ಸಲ್ಲಿಕೆಯಾದ ಅರ್ಜಿಗಳ ಸಂಖ್ಯೆ ಎಷ್ಟು ; ಸಮಿತಿಯಲ್ಲಿ ಮಂಜೂರಾತಿ ನೀಡಿದ ಅರ್ಜಿಗಳ ಸಂಖ್ಯೆ ಎಷ್ಟು; ಹಕ್ಕುಪತ್ರ ನೀಡಿದ ಪ್ರಕರಣಗಳ ಸಂಖ್ಯೆ ಎಷ್ಟು ; ಸಮಿತಿಯಲ್ಲಿ ಮಂಜೂರಾತಿ ನೀಡಿ ಹಕ್ಕುಪತ್ರ ನೀಡದೇ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; ವಿಚಾರಣೆಯ ಹಂತದಲ್ಲಿರುವ ಮತ್ತು ತಿರಸ್ಕೃತವಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು, ನಮೂನೆವಾರು ಮಾಹಿತಿಯನ್ನು ಸಲ್ಲಿಸುವುದು)

(ಆ) ರಾಜ್ಯದಲ್ಲಿ ನಮೂನೆ ೫೭ರಲ್ಲಿ ಸಲ್ಲಿಕೆಯಾದ ಅರ್ಜಿಗಳ ಸಂಖ್ಯೆ ಎಷ್ಟು ; ಶಾಸನಬದ್ಧವಾಗಿ ದಿನಾಂಕ: ೧೬.೦೫.೨೦೧೯ರವರೆಗೂ ಅರ್ಜಿಯನ್ನು ಸಲ್ಲಿಸಲು ಅವಕಾಶವಿದ್ದರೂ ಮತ್ತು ರೈತರು ಅರ್ಜಿಯನ್ನು ಸಲ್ಲಿಸಲು ಬಂದರೂ ಮತ್ತು ಅಂಚೆ ಮೂಲಕ ಸಲ್ಲಿಸಿದರೂ ಉಡುಪಿ ಜಿಲ್ಲೆಯಲ್ಲಿ ಚುನಾವಣೆ ಕಾರಣ ನೀಡಿ ೮ ದಿನಗಳು ಬಾಕಿಯಿರುವಾಗಲೇ ಅರ್ಜಿಯನ್ನು ಸ್ವೀಕರಿಸಲು ನಿರಾಕರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ರೀತಿ ಅವಕಾಶ ವಂಚಿತರಾದ ರೈತರಿಗೆ ಮತ್ತೊಮ್ಮೆ ಅವಕಾಶ ನೀಡಲು ಸರ್ಕಾರದಿಂದ ಕೈಗೊಂಡ ಕ್ರಮವೇನು ;

(ಇ) ಅಕ್ರಮ ಸಕ್ರಮ ಯೋಜನೆಯಲ್ಲಿ ಅರ್ಜಿ ಸಲ್ಲಿಸಿದ ರೈತರು ನೈಜ್ಯ ಕೃಷಿಯ ಗದ್ದೆ ತೋಟವನ್ನು ಹೊಂದಿದ್ದರೂ ಕೂಡ ಡೀಮ್ಡ್ ಫಾರೆಸ್ಟ್ ಪಟ್ಟಿಯಲ್ಲಿದೆ ಎನ್ನುವ ಕಾರಣ ನೀಡಿ ಹಕ್ಕುಪತ್ರವನ್ನು ನೀಡದೆ ಸತಾಯಿಸುತ್ತಿರುವುದರಿಂದ ರೈತರು ಮೂರು ದಶಕಗಳಿಂದ ಶೋಷಣೆಗೆ ಒಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಭೂ ಸ್ವಾಧೀನತೆಯನ್ನು ಹೊಂದಿ ಕೃಷಿಯನ್ನು ಮಾಡುತ್ತಿರುವ ರೈತರಿಗೆ ಈ ಭೂಮಿಯನ್ನು ಮಂಜೂರಾತಿ ಮಾಡಲು ಸರ್ಕಾರದ ಕ್ರಮವೇನು ?

## ಬಡವರಿಗೆ ಸೂರು ಒದಗಿಸುವ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ):–**

೧೦೨೩(೧೨೧೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರತಿಯೊಬ್ಬರಿಗೂ ಸೂರು ಎಂಬ ಕಾರ್ಯಕ್ರಮವು ಸರ್ಕಾರದ ಮಟ್ಟದಲ್ಲಿ ಜರೂರಾಗಿ ನಡೆಯುತ್ತಿದೆಯೇ;

(ಆ) ಬಡವರಿಗೆ ಸೂರು ಒದಗಿಸುವ ನಿಟ್ಟಿನಲ್ಲಿ ಸರ್ಕಾರವು ಕೈಗೆತ್ತಿಕೊಂಡಿರುವ ಕಾರ್ಯಕ್ರಮಗಳೇನು ; ಹಾಗೂ ಕಾರ್ಯಕ್ರಮಗಳನ್ನು ಮುಗಿಸಲು ನಿಗಧಿಪಡಿಸಿರುವ ಕಾಲಮಿತಿ ಎಷ್ಟು ;

(ಇ) ಇದುವರೆವಿಗೂ ರಾಜ್ಯದಲ್ಲಿ ಗುರುತಿಸಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; ವಸತಿ ಹಂಚಿಕೆ ಮಾಡಿರುವವರ ಒಟ್ಟು ಸಂಖ್ಯೆ ಎಷ್ಟು ;

(ಈ) ವಸತಿ ಇಲಾಖೆಯಡಿ ಹಂಚಿಕೆ ಮಾಡಿಕೊಡುವ ಜಾಗದಲ್ಲಿ ಮೂಲಭೂತ ಸೌಕರ್ಯಗಳು ಸೂಕ್ತ ಪ್ರಮಾಣದಲ್ಲಿ ದೊರಕುತ್ತದೆಯೇ ; ಹಾಗಿದ್ದಲ್ಲಿ, ರಾಜ್ಯದ ಆಯಾ ಭಾಗದಲ್ಲಿ ಗುರುತಿಸಿರುವ ಜಾಗಗಳೆಷ್ಟು ; ಮತ್ತು ಎಲ್ಲೆಲ್ಲಿ? (ಜಿಲ್ಲಾವಾರು ವಿವರ ನೀಡುವುದು)

## ಸಬ್‌ರಿಜಿಸ್ಟ್ರಾರ್ ಕಛೇರಿಗಳಲ್ಲಿ ದಳ್ಳಾಳಿಗಳ ಹಾವಳಿ ಕುರಿತು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೨೪ (೧೨೨೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಬ್‌ರಿಜಿಸ್ಟ್ರಾರ್ ಕಛೇರಿಗಳಲ್ಲಿ ದಳ್ಳಾಳಿಗಳ ಹಾವಳಿಯನ್ನು ತಪ್ಪಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಆ) ದಳ್ಳಾಳಿಗಳ ಮೂಲಕ ಅರ್ಜಿಗಳನ್ನು ನೀಡಿದರೆ ಮಾತ್ರ ಸಬ್‌ರಿಜಿಸ್ಟ್ರಾರ್ ಕಛೇರಿಗಳಲ್ಲಿ ಬೇಗ ಕೆಲಸಗಳನ್ನು ಮಾಡಿಕೊಡುತ್ತಿದ್ದು, ಇದು ಭ್ರಷ್ಟಾಚಾರಕ್ಕೆ ಪ್ರೋತ್ಸಾಹ ನೀಡಿದಂತಾಗುವುದಿಲ್ಲವೇ ; ಈ ಬಗ್ಗೆ ಸರ್ಕಾರ ಏನು ಕ್ರಮ ತೆಗೆದುಕೊಂಡಿದೆ ;

(ಇ) ಹಲವಾರು ವರ್ಷಗಳಿಂದ ಈ ಪದ್ಧತಿ ಮುಂದುವರೆಯುತ್ತಿದ್ದರೂ ಸರ್ಕಾರ ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ ಏಕೆ ಕಟ್ಟುನಿಟ್ಟಿನ ಕ್ರಮ ಕೈಗೊಂಡಿಲ್ಲ; ಇನ್ನು ಮುಂದಾದರೂ ಬಿಗಿ ಕ್ರಮ ಕೈಗೊಳ್ಳಲಾಗುವುದೇ ?

## ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರ ಮೇಲೆ ನಡೆದ ದೌರ್ಜನ್ಯ, ಕೊಲೆ ಇತ್ಯಾದಿಗಳ ಕುರಿತು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೨೫ (೧೨೭೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರ ಮೇಲೆ ನಡೆದಿರುವ ದೌರ್ಜನ್ಯ, ಕೊಲೆ, ಅತ್ಯಾಚಾರಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; ಎಷ್ಟು ಪ್ರಕರಣಗಳಲ್ಲಿ ಯಾವ ಯಾವ ಕಾನೂನಿನಡಿ ಪ್ರಕರಣಗಳನ್ನು ದಾಖಲಿಸಿ ಮೊಕದ್ದಮೆ ಹೂಡಲಾಗಿದೆ ;

(ಇ) ಈ ವರ್ಗದವರ ಮೇಲೆ ನಡೆಯುತ್ತಿರುವ ದೌರ್ಜನ್ಯಗಳನ್ನು ತಡೆಗಟ್ಟಲು ವಿಶೇಷವಾಗಿ ಯಾವ ಯಾವ ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗಿದೆ ?

## ವಿವಿಧ ವಸತಿ ಯೋಜನೆಗಳಲ್ಲಿ ಮಂಜೂರಾಗಿರುವ ಮನೆಗಳ ಬಗ್ಗೆ ಮಾಹಿತಿ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೨೬ (೧೨೨೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿವಿಧ ವಸತಿ ಯೋಜನೆಗಳಡಿಯಲ್ಲಿ ಮಂಜೂರಾಗಿರುವ ಮನೆಗಳಲ್ಲಿ ಎಷ್ಟು ಮನೆಗಳು ನಿರ್ಮಾಣವಾಗಿವೆ ; ಉಳಿದ ಮನೆಗಳ ಕಾರ್ಯ ಯಾವ ಹಂತದಲ್ಲಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಮಂಜೂರಾಗಿರುವ ಮನೆಗಳ ನಿರ್ಮಾಣಕ್ಕೆ ಅನುವಾಗುವಂತೆ ಹಣವನ್ನು ಸಂಬಂಧಪಟ್ಟವರ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡದೇ ಇರಲು ಕಾರಣಗಳೇನು ; ಯಾವಾಗ ಜಮಾ ಮಾಡಲಾಗುವುದು;

(ಇ) ಫಲಾನುಭವಿಗಳ ವಾರ್ಷಿಕ ಆದಾಯ ಮಿತಿ ಹೆಚ್ಚಿಸಲು ಸರ್ಕಾರ ಚಿಂತಿಸಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ಯಾವ ಕಾಲಮಿತಿಯಲ್ಲಿ ಕ್ರಮ ಕೈಗೊಳ್ಳಲಾಗುವುದು?

## ಕೃಷಿ ಇಲಾಖೆಗೆ ನಿಗಧಿಪಡಿಸಿದ ಹಣದ ಬಗ್ಗೆ ಮಾಹಿತಿ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೨೭ (೧೨೨೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೨೦-೨೦೨೧ ನೇ ಸಾಲಿನ ಆಯವ್ಯಯದಲ್ಲಿ ಕೃಷಿ ಇಲಾಖೆಗೆ ನಿಗಧಿಪಡಿಸಿದ್ದ ಹಣ ಎಷ್ಟು ; ಇದರಲ್ಲಿ ಕೃಷಿ ಭಾಗ್ಯ ಯೋಜನೆಗೆ ಮೀಸಲಿರಿಸಿದ್ದ ಹಣ ಎಷ್ಟು ;

(ಆ) ಈ ಹಣದಲ್ಲಿ ಬಿಡುಗಡೆಯಾದ ಮತ್ತು ಖರ್ಚಾದ ಹಣ ಎಷ್ಟು;

(ಇ) ಈ ಸಾಲಿನಲ್ಲಿ ರೈತರಿಗೆ ನೀಡಬೇಕಾದ ಎಲ್ಲಾ ಸಹಾಯಧನವನ್ನು ನಿಗಧಿತ ಸಮಯದಲ್ಲಿ ವಿತರಿಸಲಾಗಿದೆಯೇ ? (ವಿವರಗಳನ್ನು ನೀಡುವುದು)

## ಸಂಯುಕ್ತ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸುವ ಕುರಿತು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೦೨೮ (೧೨೨೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪರಿಶಿಷ್ಟ ಜಾತಿ /ಪರಿಶಿಷ್ಟ ವರ್ಗ /ಹಿಂದುಳಿದ ವರ್ಗ/ ಅಲ್ಪಸಂಖ್ಯಾತರು ಮತ್ತು ಸಾಮಾನ್ಯ ವರ್ಗದ ಎಲ್ಲಾ ವಿದ್ಯಾರ್ಥಿಗಳಿಗೆ ಜಿಲ್ಲೆಗೆ ಒಂದರಂತೆ ೩೦ ಸಂಯುಕ್ತ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲಾಗುವುದೆಂದು ಘೋಷಿಸಿದ್ದು, ಸರ್ಕಾರ ಈ ಬಗ್ಗೆ ಗಮನ ಹರಿಸಿದೆಯೇ ;

(ಆ) ಎಷ್ಟು ಜಿಲ್ಲೆಗಳಲ್ಲಿ ಸಂಯುಕ್ತ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲಾಗಿದೆ ; ಪ್ರಾರಂಭಿಸದಿದ್ದಲ್ಲಿ, ಅದಕ್ಕೆ ಕಾರಣಗಳೇನು;

(ಇ) ಈ ವಿಚಾರದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ವರದಿ ನೀಡುವುದು)

## ಹಳೆಯ ರಸ್ತೆಗಳನ್ನು ಅಗೆಯದೆ ಟಾರ್/ವೈಟ್ ಟಾಪಿಂಗ್ ಹಾಕುತ್ತಿರುವ ಕುರಿತು

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೨೯ (೧೧೩೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಲ್ಲಾ ನಗರಗಳು ಸೇರಿದಂತೆ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಕಿಲೋಮೀಟರ್ ಉದ್ದದ ರಸ್ತೆಗಳಿಗೆ ಟಾರ್/ವೈಟ್ ಟಾಪಿಂಗ್ ಹಾಕಲಾಗಿದೆ; (ಜಿಲ್ಲಾವಾರು ಸಂಪೂರ್ಣ ವಿವರಗಳನ್ನು ಒದಗಿಸುವುದು)

(ಆ) ಇತ್ತೀಚಿನ ವರ್ಷಗಳಲ್ಲಿ ಅವೈಜ್ಞಾನಿಕವಾಗಿ ಪದೇ ಪದೇ ಟಾರ್ ಹಾಕುವ ಸಂದರ್ಭಗಳಲ್ಲಿ ರಸ್ತೆಗಳನ್ನು ಅಗೆಯದೆ ಹಳೆಯ ರಸ್ತೆಗಳ ಮೇಲೆಯೇ ಟಾರ್/ವೈಟ್ ಟಾಪಿಂಗ್ ಹಾಕಿ ರಸ್ತೆಗಳು ಕಟ್ಟಡಗಳಿಗಿಂತ ಎತ್ತರವಾಗುತ್ತಿರುವುದರಿಂದ ಮಳೆ, ಒಳಚರಂಡಿ ನೀರು ಕಟ್ಟಡಗಳಿಗೆ ಹರಿಯುತ್ತಿರುವ ಮಾಹಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅದರ ಬದಲಾಗಿ ಆಧುನಿಕ ಮಾರ್ಗೋಪಾಯಗಳನ್ನು ಕಂಡು ಹಿಡಿಯಲಾಗಿದೆಯೇ ? (ಸಂಪೂರ್ಣ ವಿವರಗಳನ್ನು ಒದಗಿಸುವುದು)

## ತಿರುಪತಿಯಲ್ಲಿ ರಾಜ್ಯದ ಭಕ್ತಾದಿಗಳ ವಾಸ್ತವ್ಯಕ್ಕೆ ಭವನ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೩೦ (೧೧೯೩) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಭಕ್ತಾದಿಗಳು ನೆರೆಯ ರಾಜ್ಯದ ತಿರುಪತಿಗೆ ಪ್ರತಿ ವರ್ಷ ಭೇಟಿ ನೀಡುವ ಅಂದಾಜು ಸಂಖ್ಯೆಯ ಬಗ್ಗೆ ಮಾಹಿತಿ ಇದೆಯೇ; ಹಾಗಿದ್ದಲ್ಲಿ, ಸಂಪೂರ್ಣ ವಿವರ ಒದಗಿಸುವುದು ;

(ಆ) ರಾಜ್ಯದ ಭಕ್ತಾದಿಗಳ ವಾಸ್ತವ್ಯಕ್ಕೆ ಪ್ರಸ್ತುತ ಲಭ್ಯವಿರುವ ಕೊಠಡಿಗಳು ಎಷ್ಟು ; ಭೇಟಿ ನೀಡುವ ಭಕ್ತಾದಿಗಳಿಗೂ ವಾಸ್ತವ್ಯಕ್ಕೆ ಇರುವ ಕೊಠಡಿಗಳಿಗೆ ಅಜಗಜಾಂತರ ವ್ಯತ್ಯಾಸವಿದ್ದು ಈ ಸಮಸ್ಯೆ ನಿವಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ಒದಗಿಸುವುದು)

## ಆಧುನಿಕ ಯಂತ್ರಗಳಿಂದ ಮರಗಳನ್ನು ಕಿತ್ತು ಬೇರೆಡೆ ನೆಡುವ ಬಗ್ಗೆ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೩೧ (೧೧೩೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಎಲ್ಲಾ ನಗರಗಳೂ ಸೇರಿದಂತೆ ರಸ್ತೆ ಅಗಲೀಕರಣ, ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿ ನಿರ್ಮಾಣ ಕಾಮಗಾರಿ ಸಂದರ್ಭದಲ್ಲಿ ಎಷ್ಟು ಮರಗಳನ್ನು ಕಡಿದು ಹಾಕಲಾಗಿದೆ ; (ಜಿಲ್ಲಾವಾರು ಸಂಪೂರ್ಣ ವಿವರಗಳನ್ನು ಒದಗಿಸುವುದು)

(ಆ) ವರ್ಷಾನುಗಟ್ಟಲೆ ಬೆಳೆದ ಮರಗಳನ್ನು ಕಡಿಯುವ ಬದಲು, ದೇಶಾದ್ಯಂತ ಉಪಯೋಗಿಸುತ್ತಿರುವಂತೆಯೇ ರಾಜ್ಯದಲ್ಲಿಯೂ ಆಧುನಿಕ ಯಂತ್ರಗಳಿಂದ ಅಂತಹ ಮರಗಳನ್ನು ಸ್ಥಳಾಂತರ ಮಾಡಲಾಗುತ್ತಿದೆಯೇ ; ಹಾಗಿದ್ದಲ್ಲಿ, ಎಷ್ಟು ಆಧುನಿಕ ಯಂತ್ರಗಳನ್ನು ಖರೀದಿಸಿ ಎಷ್ಟು ಮರಗಳನ್ನು ಸ್ಥಳಾಂತರಿಸಲಾಗಿದೆ ? (ಜಿಲ್ಲಾವಾರು ಸಂಪೂರ್ಣ ಮಾಹಿತಿ ಒದಗಿಸುವುದು)

## ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಹಾಸ್ಟೆಲ್‌ಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೩೨ (೧೯೯೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು ಮತ್ತು ಯಾವುವು ಹಾಗೂ ಅವುಗಳ ಸಾಮರ್ಥ್ಯವೆಷ್ಟು ; ಸ್ವಂತ ಕಟ್ಟಡ ಹೊಂದಿರುವ ಹಾಸ್ಟೆಲ್‌ಗಳೆಷ್ಟು; ಬಾಡಿಗೆ ಕಟ್ಟಡಗಳಲ್ಲಿರುವ ಹಾಸ್ಟೆಲ್‌ಗಳೆಷ್ಟು; (ತಾಲ್ಲೂಕುವಾರು ಮತ್ತು ಹಾಸ್ಟೆಲ್‌ವಾರು ಮಾಹಿತಿ ನೀಡುವುದು)

(ಆ) ಕಳೆದೆರಡು ವರ್ಷಗಳಿಂದ ಹಾಸನ ಜಿಲ್ಲೆಯ ಪ್ರತಿ ಹಾಸ್ಟೆಲ್‌ಗೆ ದಾಖಲಾತಿ ಕೋರಿ ಸ್ವೀಕೃತವಾಗಿರುವ ಅರ್ಜಿಗಳೆಷ್ಟು ; ಇದರಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ದಾಖಲಾತಿ ನೀಡಲಾಗಿದೆ ; (ತಾಲ್ಲೂಕುವಾರು ಮತ್ತು ಹಾಸ್ಟೆಲ್‌ವಾರು ಮಾಹಿತಿ ನೀಡುವುದು)

(ಇ) ಹಾಸ್ಟೆಲ್ ಸೀಟು ಪಡೆಯಲು ಸಾಧ್ಯವಾಗದ ವಿದ್ಯಾರ್ಥಿಗಳಿಗೆ ಸರ್ಕಾರವು ಕಲ್ಪಿಸಿರುವ ಸೌಲಭ್ಯಗಳೇನು ; (ವಿವರ ನೀಡುವುದು)

(ಈ) ಈ ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳಿಗೆ ಕಲ್ಪಿಸಿರುವ ಸೌಲಭ್ಯಗಳೇನು; ಖಾಸಗಿ ಕಟ್ಟಡಗಳಲ್ಲಿರುವ ಹಾಸ್ಟೆಲ್‌ಗಳ ಬದಲಿಗೆ ಸ್ವಂತ ಕಟ್ಟಡ ಹೊಂದಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಮೀನುಮರಿ ಉತ್ಪಾದನಾ ಕೇಂದ್ರ ಸ್ಥಾಪಿಸುವ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೩೩ (೧೧೯೨) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯಲ್ಲಿ ಮೀನುಗಾರಿಕೆ ನಡೆಸಲು ಲಭ್ಯವಿರುವ ಮೀನುಗಾರಿಕೆ ಇಲಾಖೆ ಮತ್ತು ಗ್ರಾಮ ಪಂಚಾಯಿತಿ ವ್ಯಾಪ್ತಿಗೊಳಪಡುವ ಜಲಸಂಪನ್ಮೂಲಗಳು ಯಾವುವು; (ಮಾಹಿತಿ ನೀಡುವುದು) ಸದರಿ ಜಲಸಂಪನ್ಮೂಲಗಳನ್ನು ಯಾವ ರೀತಿ ಅಭಿವೃದ್ಧಿ ಪಡಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಜಲಸಂಪನ್ಮೂಲಗಳನ್ನು ಅಭಿವೃದ್ಧಿಪಡಿಸಲು ವಾರ್ಷಿಕವಾಗಿ ಅಗತ್ಯವಿರುವ ಮೀನುಮರಿಗಳ ಪ್ರಮಾಣ ಎಷ್ಟು ಮತ್ತು ಹಾಸನ ಜಿಲ್ಲೆಗೆ ಇಲಾಖೆಯಿಂದ ವಾರ್ಷಿಕವಾಗಿ ಸರಬರಾಜು ಆಗುತ್ತಿರುವ ಮೀನುಮರಿ ಪ್ರಮಾಣವೆಷ್ಟು ; (ಕಳೆದ ೩ ವರ್ಷಗಳ ಮಾಹಿತಿ ನೀಡುವುದು)

(ಇ) ಹಾಸನ ಜಿಲ್ಲೆಯಲ್ಲಿ ಮೀನುಮರಿಗಳಿಗೆ ಬಹಳ ಬೇಡಿಕೆ ಇದ್ದು, ಮೀನುಮರಿ ಉತ್ಪಾದನೆ ಮಾಡಲು ಅನುಕೂಲಕರ ಸ್ಥಳಗಳಿದ್ದರೂ ಸಹ ಜಿಲ್ಲೆಯಲ್ಲಿ ಮೀನುಮರಿ ಉತ್ಪಾದನಾ ಕೇಂದ್ರ ಸ್ಥಾಪನೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಪ್ರದೇಶದಲ್ಲಿ ಮೀನುಮರಿ ಉತ್ಪಾದನಾ ಕೇಂದ್ರ ಸ್ಥಾಪನೆ ಮಾಡಲಾಗುವುದು; ಯಾವ ಕಾಲಮಿತಿಯೊಳಗೆ ಉತ್ಪಾದನಾ ಕೇಂದ್ರ ಸ್ಥಾಪನೆ ಮಾಡಿ ರೈತರಿಗೆ ಮೀನುಮರಿ ಸರಬರಾಜು ಮಾಡಲಾಗುವುದು ? (ವಿವರ ನೀಡುವುದು)

## ಸರ್ಕಾರಿ ಗೋಮಾಳಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೩೪ (೧೧೮೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯಲ್ಲಿರುವ ಗೋಮಾಳಗಳ ಸಂಪೂರ್ಣ ಮಾಹಿತಿ ಸರ್ಕಾರಕ್ಕೆ ಇದೆಯೇ ; ಇದ್ದಲ್ಲಿ, ಎಲ್ಲಾ ಗೋಮಾಳಗಳ ವಿವರ ಅವುಗಳ ವಿಸ್ತೀರ್ಣದ ಮಾಹಿತಿಯನ್ನು ತಾಲ್ಲೂಕುವಾರು ಮತ್ತು ಗ್ರಾಮವಾರು ನೀಡುವುದು ;

(ಆ) ಹಾಸನ ಜಿಲ್ಲೆಯಲ್ಲಿ ಗೋಮಾಳಗಳ ಅತಿಕ್ರಮಣ ಮತ್ತು ಗೋಮಾಳ ರದ್ಧತಿಯ ಎಷ್ಟು ಪ್ರಕರಣಗಳು ದಾಖಲಾಗಿವೆ; ಇಂತಹ ಪ್ರಕರಣಗಳಿದ್ದಲ್ಲಿ ಈ ಸಂಬಂಧ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಸರ್ಕಾರವು ಗೋಮಾಳಗಳನ್ನು ನಿರ್ಮಾಣ ಮಾಡಿರುವ ಉದ್ದೇಶಗಳೇನು; ಈ ಉದ್ದೇಶಗಳು ಕಾರ್ಯರೂಪದಲ್ಲಿ ಅನುಷ್ಠಾನಗೊಳಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)

## ಮುಜರಾಯಿ ದೇವಸ್ಥಾನಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೩೫ (೧೧೯೦) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯಲ್ಲಿರುವ ಮುಜರಾಯಿ ದೇವಾಲಯಗಳ ಸಂಖ್ಯೆ ಹಾಗೂ ಇವುಗಳ ಸ್ಥಿರಾಸ್ತಿ ಎಷ್ಟು ; (ತಾಲ್ಲೂಕುವಾರು ಮತ್ತು ದೇವಸ್ಥಾನವಾರು ವಿವರ ನೀಡುವುದು)

(ಆ) ಈ ದೇವಾಲಯುಗಳಿಗೆ ಸಂಬಂಧಿಸಿದ ಜಮೀನುಗಳು ಒತ್ತುವರಿಯಾಗಿರುವ ಪ್ರಕರಣಗಳೆಷ್ಟು ; ಈ ಒತ್ತುವರಿಯಾಗಿರುವ ಜಮೀನುಗಳನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಪ್ರಕರಣವಾರು ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿರುವ ಮಜರಾಯಿ ದೇವಾಲಯಗಳಿಂದ ಸರ್ಕಾರಕ್ಕೆ ಬಂದ ಆದಾಯವೆಷ್ಟು ; ಈ ದೇವಸ್ಥಾನಗಳ ಉಸ್ತುವಾರಿ ಮತ್ತು ರಕ್ಷಣಾ ಕಾರ್ಯಗಳಿಗಾಗಿ ಖರ್ಚಾಗಿರುವ ಮೊತ್ತವೆಷ್ಟು ? (ಪ್ರತಿ ದೇವಸ್ಥಾನದ ವಿವರ ನೀಡುವುದು)

## ನೆರೆ ಹಾವಳಿಯಿಂದ ತೋಟಗಾರಿಕೆ ಬೆಳೆಗಾರರಿಗೆ ಆಗಿರುವ ನಷ್ಟದ ಕುರಿತು

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೦೩೬ (೧೨೭೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನೆರೆ ಹಾವಳಿಯಿಂದ ತೋಟಗಾರಿಕೆ ಬೆಳೆಗಾರರಿಗೆ ಆಗಿರುವ ನಷ್ಟ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಎಷ್ಟು ನಷ್ಟವಾಗಿದೆ ಹಾಗೂ ರೈತರಿಗೆ ಪರಿಹಾರ ಹಣವನ್ನು ನೀಡಲಾಗಿದೆ ;

(ಇ) ಲಾಕ್‌ಡೌನ್ ಸಂದರ್ಭದಲ್ಲಿ ತೊಟಗಾರಿಕೆ ಬೆಳೆಗಳನ್ನು ಮಾರುಕಟ್ಟೆಗಳಲ್ಲಿ ಮಾರಾಟ ಮಾಡಲು ಸಾಧ್ಯವಾಗದೇ ಅಪಾರ ನಷ್ಟ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಎಷ್ಟು ರೈತರಿಗೆ ಪರಿಹಾರವನ್ನು ನೀಡಲಾಗಿದೆ ?

## ನೆರೆ ಪ್ರವಾಹ ಮತ್ತು ಭೂಕುಸಿತದ ಬಗ್ಗೆ

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೩೭ (೧೧೩೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರತಿ ವರ್ಷ ಎದುರಾಗುವ ನೆರೆ ಪ್ರವಾಹ, ಭೂಕುಸಿತ ತಪ್ಪಿಸಲು ಸರ್ಕಾರ ಯೋಜನೆ ರೂಪಿಸಿದೆಯೇ ;

(ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ? (ಮಾಹಿತಿ ನೀಡುವುದು)

## ಸರ್ಕಾರಿ ಪಿಂಚಣಿ/ಸಂಧ್ಯಾ ಸುರಕ್ಷಾ ವಿಧವಾ ವೇತನ ಇತ್ಯಾದಿ ನಿರ್ವಹಣೆ ಕುರಿತು

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೩೮ (೧೧೩೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಾಶಾಸನ (ಪಿಂಚಣಿ) ಸಂಧ್ಯಾ ಸುರಕ್ಷಾ ವಿಧವಾ ವೇತನ ಇತ್ಯಾದಿ ಪಡೆಯುತ್ತಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಆ) ಕಳೆದ ಕೆಲವು ತಿಂಗಳುಗಳಿಂದ ಸರ್ಕಾರ ನೀಡುತ್ತಿರುವ ಪಿಂಚಣಿ ನಿಂತು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದರಿಂದ ಬಡವರಿಗೆ ಹಿರಿಯ ನಾಗರಿಕರಿಗೆ ತುಂಬಾ ತೊಂದರೆಯಾಗಿದ್ದು, ಈ ಬಗ್ಗೆ ಸರ್ಕಾರದ ನಿಲುವುಗಳೇನು ?

## ರಾಜ್ಯದಲ್ಲಿರುವ ನಿವೇಶನ ರಹಿತರು/ವಸತಿ ರಹಿತರ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೩೯ (೧೧೬೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ನಿವೇಶನ ರಹಿತರು ಹಾಗೂ ವಸತಿ ರಹಿತರು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ನಿವೇಶನ ಹಾಗೂ ವಸತಿ ರಹಿತರ ಸಂಖ್ಯೆ ಎಷ್ಟು ;

(ಇ) ನಿವೇಶನ ರಹಿತರಿಗೆ ಭೂಮಿ ಒದಗಿಸುವ ಹಾಗೂ ವಸತಿರಹಿತರಿಗೆ ಮನೆ ಒದಗಿಸುವ ಉದ್ದೇಶ ಸರ್ಕಾರಕ್ಕಿದೆಯೇ ;

(ಈ) ಹಾಗಿದ್ದಲ್ಲಿ, ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ ; ಮಂಜೂರು ಮಾಡಲಾಗುವುದು ಯಾವಾಗ ?

## ರಾಜ್ಯದಲ್ಲಿರುವ ಸಾವಯವ ಕೃಷಿ ಬೆಳೆಯ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೪೦ (೧೧೬೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಾವಯವ ಕೃಷಿ ಬೆಳೆ ಬೆಳೆಯುವ ಭೂಮಿಯ ವಿಸ್ತೀರ್ಣ ಎಷ್ಟು ; ಇದರಲ್ಲಿ ಯಾವ ಯಾವ ಸಾವಯವ ಬೆಳೆಗಳಿಗೆ ಉತ್ತೇಜನ ನೀಡಲಾಗುತ್ತಿದೆ ;

(ಆ) ಸಾವಯವ ಬೆಳೆಗಳನ್ನು ಬೆಳೆಯುವ ರೈತರಿಗೆ ಹಾಗೂ ಇತರೆ ಬೆಳೆಗಳನ್ನು ಬೆಳೆಯುವ ರೈತರಿಗೆ ನೀಡುವ ಪ್ರೋತ್ಸಾಹ/ಸಹಾಯ ಧನಗಳಲ್ಲಿ ವ್ಯತ್ಯಾಸವಿದೆಯೇ ; ಹಾಗಿದ್ದಲ್ಲಿ, ಕಾರಣಗಳೇನು ; (ವಿವರ ನೀಡುವುದು)

(ಇ) ಶೂನ್ಯ ಬಂಡವಾಳ ಹಾಗೂ ಸಹಜ ಕೃಷಿ ಬೆಳೆ ಪದ್ಧತಿಯಲ್ಲಿ ಬೆಳೆಯುವ ಬೆಳೆಗಳ ಭೂಮಿಯ ವಿಸ್ತೀರ್ಣ ಹಾಗೂ ಉತ್ಪಾದಕತೆ ಎಷ್ಟು; ಸಾಮಾನ್ಯ ಬೇಸಾಯ ಹಾಗೂ ಶೂನ್ಯ ಬಂಡವಾಳ ಸಹಜ ಕೃಷಿ ಪದ್ಧತಿಗೆ ಉತ್ಪಾದಕತೆಯಲ್ಲಿರುವ ವ್ಯತ್ಯಾಸವೇನು ;

(ಈ) ಸಾವಯುವ ಹಾಗೂ ಶೂನ್ಯ ಬಂಡವಾಳ ಸಹಜ ಕೃಷಿ ಪದ್ಧತಿ ಬೇಸಾಯ ಮಾಡುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಪ್ರತ್ಯೇಕ ಪಟ್ಟಿಯನ್ನು ನೀಡುವುದು)

(ಉ) ಈ ಎರಡು ಪದ್ಧತಿಗಳಿಗೆ ೨೦೨೦-೨೧ರಲ್ಲಿ ನಿಗದಿಪಡಿಸಿದ ಅನುದಾನವೆಷ್ಟು ; ಎಷ್ಟು ಖರ್ಚಾಗಿದೆ ? (ವಿವರ ನೀಡುವುದು)

## ವಸತಿ ಶಾಲೆಗಳ ಮೇಲ್ವಿಚಾರಣಾ ಸಮಿತಿಯ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೪೧ (೧೧೬೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ನಡೆಸಲಾಗುತ್ತಿರುವ ವಸತಿ ಶಾಲೆಗಳನ್ನು ಪರಿಣಾಮಕಾರಿಯಾಗಿ ನಡೆಸಲು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಮೇಲ್ವಿಚಾರಣಾ ಸಮಿತಿ ರಚಿಸಲಾಗುವುದೆಂದು ೨೦೨೦-೨೧ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದ್ದು, ಮೇಲ್ವಿಚಾರಣಾ ಸಮಿತಿ ರಚಿಸಲಾಗಿದೆಯೇ ;

(ಆ) ಮೇಲ್ವಿಚಾರಣಾ ಸಮಿತಿಯನ್ನು ಇದುವರೆಗೂ ರಚಿಸದಿರಲು ಕಾರಣವೇನು ;

(ಇ) ಯಾವಾಗ ಸಮಿತಿ ರಚಿಸಲಾಗುವುದು ? (ಸಂಪೂರ್ಣ ವರದಿ ನೀಡುವುದು)

## ಲೋಕೋಪಯೋಗಿ ಇಲಾಖೆಯ ವತಿಯಿಂದ ರಸ್ತೆಗಳ ಕಾಮಗಾರಿಗಳ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೪೨ (೧೧೧೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ರಾಜ್ಯದ ವಿವಿಧ ಜಿಲ್ಲೆಗಳ ರಸ್ತೆಗಳ ದುರಸ್ತಿಗಾಗಿ ಸರ್ಕಾರ ನಿಗದಿಪಡಿಸಿದ ಬಿಡುಗಡೆ ಮಾಡಿದ ವೆಚ್ಚ ಮಾಡಿರುವ ಮೊತ್ತವೆಷ್ಟು ; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಆ) ಅನುದಾನದ ಕೊರತೆಯಿಂದಾಗಿ ಲೋಕೋಪಯೋಗಿ ರಸ್ತೆಗಳು ದುರಸ್ತಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಹೆಚ್ಚಿನ ಅನುದಾನವನ್ನು ನೀಡಿ ತ್ವರಿತವಾಗಿ ರಸ್ತೆಗಳನ್ನು ದುರಸ್ತಿಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಈ) ರಸ್ತೆಗಳ ದುರಸ್ತಿ ಕಾಮಗಾರಿಯನ್ನು ಯಾವಾಗ ಕೈಗೆತ್ತಿಕೊಳ್ಳಲಾಗುವುದು ? (ಜಿಲ್ಲಾವಾರು ವಿವರ ನೀಡುವುದು)

## ಮೀನುಗಾರಿಕೆ ಇಲಾಖೆಯಲ್ಲಿರುವ ಯೋಜನೆಗಳ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೪೩ (೧೨೮೦) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೀನುಗಾರಿಕೆ ಇಲಾಖೆಯಲ್ಲಿ ಹಾಲಿ ಜಾರಿಯಲ್ಲಿರುವ ಯೋಜನೆಗಳಾವುವು ; (ಮಾಹಿತಿ ನೀಡುವುದು)

(ಆ) ೨೦೧೯–೨೦ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆಯಲ್ಲಿ ಮೂಲಭೂತ ಸೌಕರ್ಯ ನಿರ್ಮಾಣಕ್ಕಾಗಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; ಖರ್ಚಾಗಿರುವುದು ಎಷ್ಟು ; ಮತ್ತು ಉಳಿದಿರುವುದು ಎಷ್ಟು ;

(ಇ) ಕಳೆದ ೩ ವರ್ಷಗಳಲ್ಲಿ ತುಮಕೂರು ಜಿಲ್ಲೆಗೆ ಮೀನುಗಾರಿಕೆ ಇಲಾಖೆಯಲ್ಲಿ ಮೂಲಭೂತ ಸೌಕರ್ಯ ನಿರ್ಮಾಣಕ್ಕಾಗಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; (ತಾಲ್ಲೂಕುವಾರು, ಕಾಮಗಾರಿವಾರು ವಿವರವಾದ ಮಾಹಿತಿ ನೀಡುವುದು)

(ಈ) ಮತ್ಸಾಶ್ರಯ ಯೋಜನೆಯಡಿ ಒಂದು ಮನೆಯ ಘಟಕ ವೆಚ್ಚ ಎಷ್ಟು ; ತುರುವೇಕೆರೆ ಮತ್ತು ಗುಬ್ಬಿ ತಾಲ್ಲೂಕುಗಳಿಗೆ ಕಳೆದ ೩ ವರ್ಷಗಳಿಂದ ಎಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ ; (ಗ್ರಾಮ ಪಂಚಾಯ್ತಿವಾರು ವಿವರವಾದ ಮಾಹಿತಿ ನೀಡುವುದು)

(ಉ) ಮೀನುಗಾರಿಕೆ ಇಲಾಖೆಯಡಿಯಲ್ಲಿ ಎಷ್ಟು ಮೀನುಗಾರಿಕಾ ಸಹಕಾರ ಸಂಘಗಳಿವೆ ; ಅವುಗಳ ವಿಧಗಳಾವುವು ; ಇವುಗಳಿಗೆ ಕಳೆದ ಸಾಲಿನಲ್ಲಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ? (ವಿಳಾಸದೊಂದಿಗೆ ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ ನಿರ್ಮಿತಿ ಕೇಂದ್ರಗಳ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೪೪ (೧೨೭೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಜಿಲ್ಲಾ ನಿರ್ಮಿತಿ ಕೇಂದ್ರಗಳಿವೆ ; ಇವುಗಳನ್ನು ಯಾವಾಗ ಸ್ಥಾಪನೆ ಮಾಡಲಾಯಿತು ; ಇವುಗಳ ಧ್ಯೇಯೋದ್ದೇಶಗಳೇನು ; (ವಿವರವಾದ ಮಾಹಿತಿ ನೀಡುವುದು)

(ಆ) ತುಮಕೂರು ಜಿಲ್ಲಾ ನಿರ್ಮಿತಿ ಕೇಂದ್ರದಲ್ಲಿ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ನೌಕರರ ಹೆಸರು, ಹುದ್ದೆಯ ಪದನಾಮ, ವೇತನ ಶ್ರೇಣಿ, ತಿಂಗಳಿಗೆ ಪಡೆಯುತ್ತಿರುವ ಸಂಬಳದೊಂದಿಗೆ ವಿವರವಾದ ಮಾಹಿತಿ ನೀಡುವುದು)

(ಇ) ಇಲ್ಲಿನ ಸಿಬ್ಬಂದಿಗಳು ಎಷ್ಟು ವರ್ಷಗಳಿಂದ ಕೆಲಸ ನಿರ್ವಹಿಸುತ್ತಿದ್ದಾರೆ ; (ಹುದ್ದೆವಾರು ವಿವರ ನೀಡುವುದು)

(ಈ) ಕಳೆದ ಐದು ವರ್ಷಗಳಿಂದ ತುಮಕೂರು ಜಿಲ್ಲಾ ನಿರ್ಮಿತಿ ಕೇಂದ್ರವು ಯಾವ ಯಾವ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿ ಪೂರ್ಣಗೊಳಿಸಿದೆ ; (ಇಲಾಖೆ, ಕಾಮಗಾರಿ ವಿವರ ಹಾಗೂ ಖರ್ಚು ಮಾಡಿದ ಮೊತ್ತದೊಂದಿಗೆ ಮಾಹಿತಿ ನೀಡುವುದು)

(ಉ) ಹಾಲಿ ಬಾಕಿ ಇರುವ ಕಾಮಗಾರಿಗಳು ಎಷ್ಟು ; ಇವುಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ; ಇಲ್ಲಿಯವರೆಗೆ ಬಾಕಿ ಉಳಿಸಿಕೊಳ್ಳಲು ಕಾರಣಗಳೇನು ? (ವಿವರವಾದ ಮಾಹಿತಿ ನೀಡುವುದು)

## ಯಲಹಂಕ ಹೋಬಳಿ ಗಸ್ತಿಕೆಂಪನಹಳ್ಳಿ ಗ್ರಾಮದ ಸರ್ವೆ ನಂ. ೪ ಮತ್ತು ೮ರಲ್ಲಿನ ನಿವೇಶನಗಳ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೪೫ (೧೨೭೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಲಹಂಕ ಬೆಂಗಳೂರು ಗಸ್ತಿಕೆಂಪನಹಳ್ಳಿ ಗ್ರಾಮದ ಸರ್ವೆ ನಂಬರ್ ೪ ಮತ್ತು ೮ರಲ್ಲಿನ ನಿವೇಶನ ಸಂಖ್ಯೆ ೧ ರಿಂದ

೧೯೦ರ ವರೆಗಿನ ಎಷ್ಟು ನಿವೇಶನಗಳನ್ನು ಅಭಿವೃದ್ಧಿಗಾರರು ಯಾವ ಸಂಘದ ಪರವಾಗಿ ನೋಂದಣಿ ಮಾಡಿಕೊಟ್ಟಿರುತ್ತಾರೆ ; (ನಿವೇಶನಗಳ ಸಂಖ್ಯೆ, ಕ್ರಯದಾರರ ಹೆಸರು ಮತ್ತು ವಿಳಾಸ, ನೋಂದಣಿ ದಿನಾಂಕ ಸಮೇತ ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಬಡಾವಣೆ ಹಾಗೂ ಅದರ ಪಕ್ಕದ ಅಗ್ರಹಾರ ಗ್ರಾಮದ ಸರ್ವೆ ನಂ. ೫/೧ಪಿ, ೫/೨. ೧೨/೨, ೧೪/೨ ಹಾಗೂ ೩/೪ಪಿ, ೩/೨ಪಿ ಮತ್ತು ೧೯ ಹಾಗೂ ಇತರೆಗಳಲ್ಲಿ ಎಷ್ಟು ನಿವೇಶನಗಳನ್ನು ಸಂಘದ ಸದಸ್ಯರಿಗೆ ನೋಂದಣಿ ಮಾಡಿಸಿ ಕೊಟ್ಟಿರುತ್ತಾರೆ. ಅಭಿವೃದ್ಧಿಗಾರರಿಂದ ನೇರವಾಗಿ ಎಷ್ಟು ನಿವೇಶನಗಳನ್ನು ಖಾಸಗಿದಾರರಿಗೆ ನೋಂದಣಿ ಮಾಡಿಕೊಟ್ಟಿರುತ್ತಾರೆ ; (ವಿವರವಾದ ಮಾಹಿತಿ ನೀಡುವುದು)

(ಇ) ಯಲಹಂಕ ಹೋಬಳಿ ಗಸ್ತಿಕೆಂಪನಹಳ್ಳಿ ಗ್ರಾಮದ ಸರ್ವೆ ನಂಬರ್ ೪ ಮತ್ತು ೮ರಲ್ಲಿನ ನಿವೇಶನ ಸಂಖ್ಯೆ ೨೧೦ನ್ನು ೨೦೧೦–೧೧ನೇ ಸಾಲಿನಲ್ಲಿ ಯಾರು ಯಾರಿಂದ ಪಡೆದಿರುತ್ತಾರೆ ; (ವಿವರವಾದ ಮಾಹಿತಿ ನೀಡುವುದು)

(ಈ) ಸದರಿ ನೋಂದಣಿದಾರರ ಹೆಸರಿನಲ್ಲಿ ಬೆಂಗಳೂರು ಉತ್ತರ ತಾಲ್ಲೂಕಿನಲ್ಲಿ ನೋಂದಣಿಯಾಗಿರುವ ಜಮೀನುಗಳು ಹಾಗೂ ನಿವೇಶನಗಳಾವುವು ? (ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದ ಭೂ ಮಾಪಕರ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೪೯ (೧೧೯೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಭೂಮಿ, ಜಮೀನು, ಸೈಟು ಖರೀದಿ ಮಾಡಲು ವಿವಿಧ ನಿಯಮಾವಳಿಗಳನ್ನು ರೂಪಿಸಿದ್ದು, ಅದರಲ್ಲಿ ಭೂಮಾಪನ ಕೂಡ ಒಂದಾಗಿದ್ದು, ಸದರಿಯಾದ ಸಮಯದಲ್ಲಿ ಭೂ ಮಾಪನವಾಗದಿರುವ ಹಿನ್ನೆಲೆಯಲ್ಲಿ ಆಸ್ತಿಗಳ ನೋಂದಣಿಗೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಒಟ್ಟು ಮಂಜೂರಾಗಿರುವ ಭೂಮಾಪಕರ ಸಂಖ್ಯೆ ಎಷ್ಟು ; ಇವರಲ್ಲಿ ಸರ್ಕಾರಿ ಹಾಗೂ ಪರವಾನಗಿ ಭೂ ಮಾಪಕರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಹಾಲಿ ಕಾರ್ಯನಿರ್ವಹಿಸುತ್ತಿರುವ ಭೂಮಾಪಕರ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಈ) ಖಾಲಿ ಇರುವ ಹುದ್ದೆಗಳಿಂದ ಆಸ್ತಿಗಳ ನೋಂದಣಿ ಹಾಗೂ ಇತರೆ ವ್ಯವಹಾರಗಳಿಗೆ ತೊಂದರೆಯಾಗುತ್ತಿದ್ದು ಈ ಬಗ್ಗೆ ಸರ್ಕಾರ ಕೈಗೊಂಡಿರುವ ಪರಿಹಾರದ ಕ್ರಮಗಳೇನು ?

## ಪಹಣಿ ತಿದ್ದುಪಡಿ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೪೭ (೧೧೭೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಂದಾಯ ಇಲಾಖೆಯಲ್ಲಿ ಪಹಣಿ ತಿದ್ದುಪಡಿ ಪ್ರಕ್ರಿಯೆಯು ಬಹಳ ನಿಧಾನವಾಗಿದ್ದು, ಇದರಿಂದ ಆಸ್ತಿ ನೋಂದಣಿ ಮಾಡಲು ಹಾಗೂ ಮತ್ತಿತರ ದಾಖಲಾತಿಗಾಗಿ ಜನರು ಸಮಸ್ಯೆ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪಹಣಿ ತಿದ್ದುಪಡಿ ವಿಳಂಬದಿಂದಾಗಿ ೧೧೩ ನಕ್ಷೆಗಳು, ವಿತರಣೆಗಾಗಿ ಎಷ್ಟು ಬಾಕಿ ಉಳಿದಿವೆ ;

(ಇ) ಪಹಣಿ ತಿದ್ದುಪಡಿ ವಿಳಂಬದಿಂದಾಗಿ ಖರೀದಿ ವ್ಯವಹಾರಗಳಿಗೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಪಹಣಿ ತಿದ್ದುಪಡಿಗಾಗಿ ಬಾಕಿ ಇರುವ ಪ್ರಕರಣಗಳ ಕುರಿತು ಕ್ರಮ ತೆಗೆದುಕೊಳ್ಳಲು ಎಷ್ಟು ಸಮಯದ ಅವಶ್ಯಕತೆ ಇದೆ ;

(ಉ) ರಾಜ್ಯದಲ್ಲಿ ಪಹಣಿ ತಿದ್ದುಪಡಿಗಾಗಿ ಬಾಕಿ ಉಳಿದಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ತಿದ್ದುಪಡಿಗಳನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ? (ಮಾಹಿತಿಯನ್ನು ಒದಗಿಸುವುದು)

## ಪ್ರಧಾನಮಂತ್ರಿ ಫಸಲು ಭೀಮಾ ಯೋಜನೆ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೪೮ (೧೧೭೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರವು ಪ್ರಧಾನ ಮಂತ್ರಿ ಫಸಲು ಭೀಮಾ ಯೋಜನೆ ಜಾರಿಗೆ ತಂದಿದ್ದು, ರಾಜ್ಯದಲ್ಲಿ ಇದನ್ನು ಅನುಷ್ಠಾನಗೊಳಿಸಲಾಗಿದಯೇ ;

(ಆ) ಈ ಪ್ರಧಾನಮಂತ್ರಿ ಫಸಲು ಭೀಮಾ ಯೋಜನೆಯಡಿಯಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ೨೦೧೭–೧೮, ೨೦೧೮–೧೯, ೨೦೧೯–೨೦೨೦ರಲ್ಲಿ ಎಷ್ಟು ಜನ ರೈತರು ನೋಂದಾಯಿಸಿಕೊಂಡಿದ್ದಾರೆ ;

(ಇ) ಈ ನೋಂದಾಯಿತ ರೈತರು ಪಾವತಿ ಮಾಡಿದ ಕಂತಿನ ಮೊತ್ತವೆಷ್ಟು ;

(ಈ) ಬೆಳೆ ಹಾನಿಯಾದ ಸಂದರ್ಭದಲ್ಲಿ ಮೂರು ವರ್ಷಗಳ ಅವಧಿಯಲ್ಲಿ ವಿಮಾ ಸಂಸ್ಥೆಗಳು ಹಾನಿಗೊಳಗಾದ ರೈತರಿಗೆ ನೀಡಿದ ಪರಿಹಾರದ ಮೊತ್ತವೆಷ್ಟು ;

(ಉ) ವಿಮೆಯ ಪರಿಹಾರಕ್ಕಾಗಿ ರೈತರು ಮನವಿ ಮಾಡಿದ್ದರೂ ವಿವಿಧ ಕಾರಣಗಳಿಗಾಗಿ ಬಾಕಿ ಉಳಿಸಿಕೊಂಡಿರುವ ಪ್ರಕರಣಗಳೆಷ್ಟು ;

(ಊ) ಸಕಾಲಕ್ಕೆ ರೈತರಿಗೆ ಕಾರಣ ನೀಡಿ ಪರಿಹಾರ ಪಾವತಿ ಮಾಡದಿರುವ ವಿಮಾ ಸಂಸ್ಥೆಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಸಮಾಜ ಕಲ್ಯಾಣ ಇಲಾಖೆಯಲ್ಲಿ ವಿವಿಧ ಜಾತಿ ಜನಾಂಗದ ಅಭಿವೃದ್ಧಿಗಾಗಿ ವಿಶೇಷ ಅನುದಾನ ಮೀಸಲಿಡುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೪೯ (೧೧೭೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯಲ್ಲಿ ವಿವಿಧ ಜಾತಿ ಜನಾಂಗಗಳ ಅಭಿವೃದ್ಧಿಗಾಗಿ ವಿಶೇಷ ಅನುದಾನವನ್ನು ಮೀಸಲಿಸಡಲಾಗಿದ್ದು, ಅದರ ವಿನಿಯೋಗದಲ್ಲಿ ಕಾಲಹರಣವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ೨೦೧೭–೧೮ ರಿಂದ ೨೦೧೯–೨೦ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಎಷ್ಟು ಹಣವನ್ನು ಹಂಚಿಕೆ ಮಾಡಲಾಗಿದೆ ;

(ಇ) ಹಂಚಿಕೆ ಮಾಡಲಾದ ಮೊತ್ತದಲ್ಲಿ ಎಷ್ಟು ಹಣವನ್ನು ವ್ಯಯಿಸಲಾಗಿದೆ ;

(ಈ) ವಿವಿಧ ಶೀರ್ಷಿಕೆಗಳಡಿಯಲ್ಲಿ ಖರ್ಚಾಗದೇ ಉಳಿದ ಹಣದ ವಿವರ ನೀಡುವುದು ?

## ರಾಜ್ಯದಲ್ಲಿ ಅಗಸ ಹಾಗೂ ಕ್ಷೌರಿಕ ವೃತ್ತಿಯಲ್ಲಿ ತೊಡಗಿದವರಿಗೆ ಸರ್ಕಾರದ ಪರಿಹಾರ ಮೊತ್ತ ಸಿಗದಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೫೦ (೧೨೬೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋವಿಡ್–೧೯ ಕಾರಣಕ್ಕಾಗಿ ದೇಶದಲ್ಲಿ ವಿಧಿಸಿದ ಲಾಕ್‌ಡೌನ್ ಸಂದರ್ಭದಲ್ಲಿ ಅಗಸ ಹಾಗೂ ಕ್ಷೌರಿಕ ವೃತ್ತಿಯಲ್ಲಿ ತೊಡಗಿರುವ ಅಸಂಘಟಿತ ವಲಯದ ಕಾರ್ಮಿಕರಿಗೆ ಒಂದು ಬಾರಿ ಪರಿಹಾರ ನೀಡಲು ಸರ್ಕಾರ ವಾಗ್ದಾನ ಮಾಡಿದ್ದು, ಈವರೆಗೆ ರಾಜ್ಯದಲ್ಲಿ ಪರಿಹಾರ ಪಡೆದ ಕಾರ್ಮಿಕರ ಸಂಖ್ಯೆ ಎಷ್ಟು ;

(ಆ) ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು ಇರುವ ಅಗಸ ಹಾಗೂ ಕ್ಷೌರಿಕ ವೃತ್ತಿ ನಡೆಸುತ್ತಿರುವ ಅಸಂಘಟಿತ ವಲಯದ ಕಾರ್ಮಿಕರ ಸಂಖ್ಯೆ ಎಷ್ಟು ;

(ಇ) ಕಾರ್ಮಿಕರಿಗೆ ಪರಿಹಾರದ ಮೊತ್ತ ಇನ್ನೂ ತಲುಪಿಲ್ಲವೆಂಬ ಕೂಗು ಕೇಳಿಬರುತ್ತಿದ್ದು, ಇದನ್ನು ಪರಿಹರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ವಸತಿ ಶಿಕ್ಷಣ ಸಂಸ್ಥೆಯ ಸಿಬ್ಬಂದಿಗಳಿಗೆ ಸೌಲಭ್ಯ ಕಲ್ಪಿಸುವ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೦೫೧ (೧೧೫೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕ್ರೈಸ್ಟ್ ಸಂಸ್ಥೆಯ (ವಸತಿ ಶಿಕ್ಷಣ ಸಂಸ್ಥೆ) ವಸತಿ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಖಾಯಂ ಸರ್ಕಾರಿ ನೌಕರರಿಗೆ ಡಿ.ಸಿ.ಆರ್.ಜಿ. ಜ್ಯೋತಿ ಸಂಜೀವಿನಿ, ಕೆ.ಜಿ.ಐ.ಡಿ ಹಾಗೂ ಎ.ಜಿ.ಐ.ಎಸ್. ಸೌಲಭ್ಯಗಳನ್ನು ಕಲ್ಪಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಸೌಲಭ್ಯಗಳನ್ನು ನೀಡದಿರಲು ಕಾರಣಗಳೇನು ; (ವಿವರ ನೀಡುವುದು)

(ಇ) ಯಾವ ಕಾಲಮಿತಿಯಲ್ಲಿ ಸದರಿ ಸೌಲಭ್ಯಗಳನ್ನು ಕಲ್ಪಿಸಲಾಗುವುದು ;

(ಈ) ಸದರಿ ಶಿಕ್ಷಕರಿಗೆ ಪ್ರಾಂಶುಪಾಲರ ಹುದ್ದೆಗೆ ಮುಂಬಡ್ತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ಇದುವರೆವಿಗೂ ಮುಂಬಡ್ತಿ ನೀಡದಿರಲು ಕಾರಣಗಳೇನು ; (ವಿವರ ನೀಡುವುದು)

(ಊ) ಯಾವ ಕಾಲಮಿತಿಯಲ್ಲಿ ಅವರಿಗೆ ಮುಂಬಡ್ತಿಯನ್ನು ನೀಡಲಾಗುವುದು ?

## ಗೋಮಾಳ ಜಮೀನಿನ ಅತಿಕ್ರಮಣದ ಕುರಿತು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೦೫೨ (೧೧೩೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆ, ನಾಗಮಂಗಲ ತಾಲ್ಲೂಕು, ಹೊಣಕೆರೆ ಹೋಬಳಿಯ ಮರಡಿಪುರ ಗ್ರಾಮ ಹಾಗೂ ಹೊಣಕೆರೆ ಹೋಬಳಿಯಲ್ಲಿ ಇರುವ ಗ್ರಾಮಗಳಲ್ಲಿ ಇರುವಂತಹ ಸರ್ಕಾರಿ ಗೋಮಾಳಗಳು ಎಷ್ಟು ; (ಗ್ರಾಮಗಳವಾರು ಸಂಪೂರ್ಣ ಮಾಹಿತಿ ನೀಡುವುದು)

ಮರಡಿಪುರ ಗ್ರಾಮದಲ್ಲಿರುವ ಶ್ರೀ ರಂಗನಾಥ ಸ್ವಾಮಿ ಬೆಟ್ಟ ಹಾಗೂ ಸುತ್ತಮುತ್ತಲಿನಲ್ಲಿರುವ ಗೋಮಾಳಗಳ ಎಷ್ಟು ಎಕರೆ ಜಾಗವಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಶ್ರೀ ರಂಗನಾಥ ಸ್ವಾಮಿ ಬೆಟ್ಟಕ್ಕೆ ಸೇರಿರುವ ಎಷ್ಟು ಜಾಗವಿದೆ ಹಾಗೂ ಬೆಟ್ಟದ ಪಕ್ಕದಲ್ಲಿರುವ ಗೋಮಾಳ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಶ್ರೀ ರಂಗನಾಥ ಸ್ವಾಮಿ ಬೆಟ್ಟದಲ್ಲಿ ಗೋಮಾಳವನ್ನು ಕೆಲವು ಜನರು ಉಪಯೋಗಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ; (ಗೋಮಾಳವನ್ನು ಉಪಯೋಗಿಸುತ್ತಿರುವ ರೈತರ ಹೆಸರು ವಿಳಾಸ ಹಾಗೂ ಅವರು ಗೋಮಾಳದಲ್ಲಿ ಬೆಳೆಯುತ್ತಿರುವ ಆಹಾರ ಪದಾರ್ಥಗಳ ಸಂಪೂರ್ಣ ಮಾಹಿತಿ ನೀಡುವುದು)

(ಈ) ಮರಡಿಪುರ ಗ್ರಾಮದಿಂದ ಕೆಂಪನಕೊಪ್ಪಲಿಗೆ ಹೋಗುವ ರಸ್ತೆಯನ್ನು ಸಂಪೂರ್ಣವಾಗಿ ರೈತರು ಉಪಯೋಗಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೆಂಪನಕೊಪ್ಪಲು ಗ್ರಾಮಕ್ಕೆ ಸಾರ್ವಜನಿಕರು ಹಾಗೂ ಎತ್ತಿನ ಬಂಡಿಗಳು ಹೋಗಲು ಈ ರಸ್ತೆಯನ್ನು ಯಾವಾಗ ತೆರವುಗೊಳಿಸಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ವಸತಿ ಇಲಾಖೆಯ ನಿವೇಶನ/ಮನೆ ಹಂಚಿಕೆ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೦೫೩ (೧೧೫೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೯–೨೦ನೇ ಸಾಲಿನಲ್ಲಿ ವಸತಿ ಇಲಾಖೆಯಿಂದ ವಿವಿಧ ಯೋಜನೆಗಳಡಿಯಲ್ಲಿ ಎಷ್ಟು ನಿವೇಶನ/ಮನೆಗಳನ್ನು ಹಂಚಿಕೆ ಮಾಡಲಾಗಿದೆ ; (ಜಿಲ್ಲಾವಾರು ಪ್ರತ್ಯೇಕವಾಗಿ ವಿವರಗಳನ್ನು ಒದಗಿಸುವುದು)

(ಆ) ಸದರಿ ಯೋಜನೆ ಅಂದಾಜು ಮೊತ್ತವೆಷ್ಟು ; (ವಿವರ ನೀಡುವುದು)

(ಇ) ೨೦೨೦–೨೧ನೇ ಸಾಲಿನಲ್ಲಿ ಸದರಿ ಯೋಜನೆಗಳಲ್ಲಿ ನಿವೇಶನ/ಮನೆಗಳನ್ನು ಹಂಚಿಕೆ ಮಾಡಲು ಯೋಜನೆ ರೂಪಿಸಲಾಗಿದೆಯೇ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಯೋಜನೆಯ ಅಂದಾಜು ಮೊತ್ತವೆಷ್ಟು ?

## ಮುಜರಾಯಿ ದೇವಾಲಯಗಳ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೦೫೪ (೧೧೫೭) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವರಮಾನದ ಆಧಾರದ ಮೇಲೆ ದೇವಾಲಯಗಳನ್ನು ಎಷ್ಟು ದರ್ಜೆಗಳಾಗಿ ವರ್ಗೀಕರಿಸಲಾಗಿದೆ ; (ವಿವರ ನೀಡುವುದು)

(ಆ) ಸದರಿ ವರ್ಗೀಕೃತ ದೇವಾಲಯಗಳಲ್ಲಿ ಅರ್ಚಕರಿಗೆ ನೀಡುತ್ತಿರುವ ಮಾಸಿಕ ತಸ್ತೀಕ್ ಭತ್ಯೆ ಎಷ್ಟು ; (ಪ್ರತ್ಯೇಕವಾಗಿ ವರ್ಗವಾರು ವಿವರ ನೀಡುವುದು)

(ಇ) ತಸ್ತೀಕ್ ಭತ್ಯೆ ನೀಡುವಲ್ಲಿ ಅನುಸರಿಸುತ್ತಿರುವ ಮಾನದಂಡಗಳೇನು ; (ವಿವರ ನೀಡುವುದು)

(ಈ) ತಸ್ತೀಕ್ ಭತ್ಯೆಯನ್ನು ಪರಿಷ್ಕರಣೆ ಮಾಡಲು ಅನುಸರಿಸುತ್ತಿರುವ ಮಾನದಂಡಗಳೇನು ? (ವಿವರ ನೀಡುವುದು)

# ಸರ್ಕಾರದ ವಿವಿಧ ವಸತಿ ಯೋಜನೆಯಲ್ಲಿ ಮಂಜೂರಾದ ಮನೆಗಳ & ನಿವೇಶನದ ಪ್ರಗತಿಯ ಬಗ್ಗೆ

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು):–**

೧೦೫೫ (೧೨೫೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಸರ್ಕಾರದ ವಿವಿಧ ಗ್ರಾಮೀಣ ವಸತಿ ಯೋಜನೆಗಳಲ್ಲಿ ಸರ್ಕಾರದಿಂದ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು ; ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ ಎಷ್ಟು ; ಭೌತಿಕವಾಗಿ ಪ್ರಗತಿಯಾದರೂ ಹಣ ಬಿಡುಗಡೆಯಾಗದಿರುವ ಪ್ರಕರಣಗಳೆಷ್ಟು ; ಬಿಡುಗಡೆಯಾದ ಅನುದಾನವೆಷ್ಟು ; ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು ; (ವರ್ಷವಾರು, ಯೋಜನೆವಾರು, ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಸರ್ಕಾರದಿಂದ ನಿವೇಶನ ರಹಿತರಿಗೆ ಹಂಚಲಾದ ನಿವೇಶನಗಳ ಸಂಖ್ಯೆ ಎಷ್ಟು ; ಇವುಗಳ ಅಭಿವೃದ್ಧಿಗೆ ಬಿಡುಗಡೆಯಾದ ಅನುದಾನವೆಷ್ಟು ; ಈ ನಿವೇಶನಗಳಲ್ಲಿ ನಿರ್ಮಿಸಲಾದ ಮನೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ನಿವೇಶನ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು, ರಸ್ತೆ ಬೀದಿ ದೀಪ ಮುಂತಾದವುಗಳಿಲ್ಲದೇ ಫಲಾನುಭವಿಗಳು ಮನೆ ನಿರ್ಮಿಸಲು ಹಿಂದೇಟು ಹಾಕುತ್ತಿರುವುದರಿಂದ ನಿವೇಶನ ಕಾಲೋನಿಗಳ ಸಮಗ್ರ ಅಭಿವೃದ್ಧಿಗೆ ಸರ್ಕಾರದ ಯೋಜನೆಗಳೇನು ?

## ಪಹಣಿ ದಾಖಲೆಗಳ ಸಂದರ್ಭದಲ್ಲಿ ೧೧ಇ ನಕ್ಷೆ ಕುರಿತು

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು):–**

೧೦೫೬ (೧೨೫೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೧೧ಇ ನಕ್ಷೆಯನ್ನು ಯಾವ ಯಾವ ಉದ್ದೇಶಗಳಿಗೆ ಬಳಸಲಾಗುತ್ತಿದೆ ; ೧೧ಇ ನಕ್ಷೆಯನ್ನು ಪಡೆಯಲು ಅಗತ್ಯವಾದ ದಾಖಲೆಗಳು ಯಾವುವು ; ೧೧ಇ ನಕ್ಷೆಯನ್ನು ಪಡೆಯಲು ಅನುಸರಿಸುವ ಕ್ರಮಗಳಾವುವು ; (ಆದೇಶದ ಪ್ರತಿಯನ್ನು ಒದಗಿಸುವುದು)

(ಆ) ಯಾವ ಯಾವ ಸಂದರ್ಭದಲ್ಲಿ ಭೂ ಸ್ವಾಧೀನತೆಯ ಮ್ಯೂಟೇಶನ್ ಮಾಡಲು ೧೧ಇ ನಕ್ಷೆಯಿಂದ ವಿನಾಯಿತಿಯನ್ನು ನೀಡಲಾಗಿದೆ ; (ಆದೇಶದ ಪ್ರತಿಯನ್ನು ನೀಡುವುದು) ಈ ಕುರಿತು ತಂತ್ರಾಂಶದಲ್ಲಿ ಅಗತ್ಯವಾದ ಮಾರ್ಪಾಡನ್ನು ಮಾಡಲಾಗಿದೆಯೇ ;

(ಇ) ರಾಜ್ಯದ ಸಿವಿಲ್ ನ್ಯಾಯಾಲಯದ ಡಿಕ್ರಿ ಆದೇಶದ ಮೂಲಕ ಪಹಣಿ ಮತ್ತು ಖಾತಾ ಮ್ಯೂಟೇಶನ್ ಸಂದರ್ಭದಲ್ಲಿ ನ್ಯಾಯಾಲಯವು ಅನುಮೋದಿಸಿದ ಜಾಗದ ನಕ್ಷೆಯ ಬದಲು ಹೊಸದಾಗಿ ೧೧ಇ ನಕ್ಷೆಯನ್ನು ಕೋರುತ್ತಿರುವುದರಿಂದ ಅರ್ಜಿದಾರರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಅರ್ಜಿದಾರರು ನ್ಯಾಯಾಂಗ ನಿಂದನೆ ಅರ್ಜಿ ದಾಖಲಿಸಿರುವುದರಿಂದ ಸರ್ಕಾರದ ಕ್ರಮವೇನು ?

## ಜಿಲ್ಲಾಧಿಕಾರಿಗಳು ಮತ್ತು ಅವರ ಕರ್ತವ್ಯದ ಕುರಿತು

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು):–**

೧೦೫೭ (೧೨೫೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಜಿಲ್ಲಾಧಿಕಾರಿಗಳ ಕಛೇರಿಗಳ ಸಂಖ್ಯೆ ಎಷ್ಟು ; ಪ್ರತಿ ಜಿಲ್ಲಾಧಿಕಾರಿಗಳ ಕಛೇರಿಗೆ ಮಂಜೂರಾತಿಯಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಕೊರತೆಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಕೊರತೆಯಿರುವ ಹುದ್ದೆಗಳನ್ನು ಯಾವಾಗ ತುಂಬಲಾಗುವುದು ; (ಜಿಲ್ಲಾವಾರು, ಹುದ್ದೆವಾರು ವಿವರ ನೀಡುವುದು)

(ಆ) ಜಿಲ್ಲಾಧಿಕಾರಿಯವರಿಗೆ ಅರೆ ನ್ಯಾಯಿಕ ಅಧಿಕಾರವನ್ನು ಪ್ರಸಕ್ತ ಮಾಡುವ ಕಾಯಿದೆಗಳು ಯಾವುವು ; (ಕಾಯಿದೆವಾರು ವಿವರ ನೀಡುವುದು)

(ಇ) ಜಿಲ್ಲಾಧಿಕಾರಿಯುವರು ಅಧ್ಯಕ್ಷರಾಗಿರುವ ಸದಸ್ಯ ಕಾರ್ಯದರ್ಶಿಯಾಗಿರುವ ಸದಸ್ಯರಾಗಿರುವ ಸಮಿತಿಗಳು ಯಾವುವು ; ಜಿಲ್ಲಾಧಿಕಾರಿಗಳು ಯಾವ ಯಾವ ಇಲಾಖೆಗಳ ಯಾವ ಯಾವ ಸಮಿತಿಗಳಿಗೆ ಅಧ್ಯಕ್ಷರಾಗಿರುತ್ತಾರೆ ; ಜಿಲ್ಲಾಧಿಕಾರಿಗಳು ವಾರ್ಷಿಕವಾಗಿ ಕನಿಷ್ಠ ಭಾಗವಹಿಸಬೇಕಾದ ಈ ಸಮಿತಿಗಳ ಸಭೆಗಳ ಸಂಖ್ಯೆ ಎಷ್ಟು ? (ಅವುಗಳಲ್ಲಿ ಕಾರ್ಯನಿರ್ವಹಿಸಲು ಇರುವ ಮಾರ್ಗಸೂಚಿ ಸುತ್ತೋಲೆಯ ಪ್ರತಿಯನ್ನು ಒದಗಿಸುವುದು)

## ಜಿಲ್ಲಾಧಿಕಾರಿಗಳ ಸಂಕೀರ್ಣ ಮತ್ತು ಮಿನಿ ವಿಧಾನಸೌಧದಲ್ಲಿ ಕಾರ್ಯನಿರ್ವಹಿಸುತ್ತಿರುವ ಕಛೇರಿಗಳ ಕುರಿತು

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು):–**

೧೦೫೮ (೧೨೫೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಜಿಲ್ಲಾಧಿಕಾರಿಗಳ ಕಛೇರಿ ಸಂಕೀರ್ಣಗಳ ಸಂಖ್ಯೆ ಎಷ್ಟು ; ಇದರ ನಿರ್ಮಾಣಕ್ಕೆ ತಗುಲಿದ ವೆಚ್ಚವೆಷ್ಟು ; ಅವುಗಳಲ್ಲಿರುವ ಜಿಲ್ಲಾ ಮಟ್ಟದ ಕಛೇರಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಕಛೇರಿವಾರು ಮಾಹಿತಿಯನ್ನು ಒದಗಿಸುವುದು)

(ಆ) ರಾಜ್ಯದಲ್ಲಿರುವ ಮಿನಿ ವಿಧಾನಸೌಧ ಕಟ್ಟಡಗಳ ಸಂಖ್ಯೆ ಎಷ್ಟು ; ಇದರ ನಿರ್ಮಾಣಕ್ಕೆ ತಗುಲಿದ ವೆಚ್ಚವೆಷ್ಟು ; ಅವುಗಳಲ್ಲಿರುವ ತಾಲ್ಲೂಕು ಮಟ್ಟದ ಕಛೇರಿಗಳ ಸಂಖ್ಯೆ ಎಷ್ಟು ; ಸ್ವಂತ ಕಟ್ಟಡದಲ್ಲಿರುವ ಮತ್ತು ಬಾಡಿಗೆ ಕಟ್ಟಡದಲ್ಲಿರುವ ತಾಲ್ಲೂಕು ಮಟ್ಟದ ಕಛೇರಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಕಛೇರಿವಾರು ಮಾಹಿತಿಯನ್ನು ಒದಗಿಸುವುದು)

(ಇ) ಸ್ವಾತಂತ್ರ್ಯ ದೊರೆತು ೭೫ ವರ್ಷಗಳಾದರೂ ಕೆಲವು ಇಲಾಖೆಗಳು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವುದಕ್ಕೆ ಕಾರಣಗಳೇನು /ಇದನ್ನು ಸರಿಪಡಿಸಲು ಯಾವ ಕ್ರಮ ಕೈಗೊಳ್ಳಲಾಗುವುದು ?

## ರಾಜೀವ್ ಗಾಂಧಿ ನಿಗಮದಿಂದ ಮನೆ ಹಂಚಿಕೆ ಮಾಡಿರುವ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೫೯ (೧೨೦೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೫ ವರ್ಷಗಳಲ್ಲಿ ಗದಗ, ಧಾರವಾಡ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತದ ವತಿಯಿಂದ ಎಷ್ಟು ಫಲಾನುಭವಿಗಳಿಗೆ ಮನೆಗಳನ್ನು ನೀಡಲಾಗಿದೆ ;

(ಆ) ಕಳೆದ ೫ ವರ್ಷಗಳಲ್ಲಿ ಗದಗ, ಧಾರವಾಡ ಹಾಗೂ ಹಾವೇರಿ ಜಿಲ್ಲೆಯಲ್ಲಿ ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತದ ವತಿಯಿಂದ ಮನೆಗಳನ್ನು ನಿರ್ಮಿಸಲು ಫಲಾನುಭವಿಗಳಿಗೆ ನೀಡಲಾದ ಒಟ್ಟು ಮೊತ್ತವೆಷ್ಟು ;

(ಇ) ಕಳೆದ ೩ ವರ್ಷಗಳಲ್ಲಿ ಗದಗ, ಧಾರವಾಡ ಹಾಗೂ ಹಾವೇರಿ ಜಿಲ್ಲೆಯಲ್ಲಿ ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತದ ವತಿಯಿಂದ ಎಷ್ಟು ಫಲಾನುಭವಿಗಳಿಗೆ ಮನೆಗಳನ್ನು ನಿರ್ಮಿಸಲು ನೀಡಬೇಕಾದ ಸಹಾಯಧನ ಬಾಕಿ ಉಳಿಯಲು ಕಾರಣಗಳೇನು ;

(ಈ) ಬಾಕಿ ಮೊತ್ತವನ್ನು ಯಾವಾಗ ಬಿಡುಗಡೆಗೊಳಿಸಲಾಗುವುದು ?

## ಹಾವೇರಿ, ಧಾರವಾಡ, ಗದಗ ಜಿಲ್ಲೆಯ ಖಾಸಗಿ ಮಾಲೀಕತ್ವದ ಜಾಗಗಳಲ್ಲಿರುವ ಕೊಳಗೆರೆ ಪ್ರದೇಶದ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೬೦ (೧೨೦೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾವೇರಿ, ಧಾರವಾಡ ಹಾಗೂ ಗದಗ ಜಿಲ್ಲೆಗಳಲ್ಲಿ, ಖಾಸಗಿ ಮಾಲೀಕತ್ವದ ಜಾಗಗಳಲ್ಲಿರುವ ಕೊಳಗೇರಿ ಪ್ರದೇಶಗಳ ಸಂಖ್ಯೆ ಎಷ್ಟು ;

(ಆ) ಹಾವೇರಿ, ಧಾರವಾಡ ಹಾಗೂ ಗದಗ ಜಿಲ್ಲೆಗಳಲ್ಲಿ, ಖಾಸಗಿ ಮಾಲೀಕತ್ವದ ಜಾಗಗಳಲ್ಲಿ ವಾಸಿಸುತ್ತಿರುವ ಒಟ್ಟು ಕೊಳಚೆ ಪ್ರದೇಶಗಳ ನಿವಾಸಿ ಕುಟುಂಬಗಳು ಹಾಗೂ ಜನ ಸಂಖ್ಯೆ ಎಷ್ಟು ;

(ಇ) ಹಾವೇರಿ, ಧಾರವಾಡ ಹಾಗೂ ಗದಗ ಜಿಲ್ಲೆಗಳಲ್ಲಿ, ಖಾಸಗಿ ಮಾಲೀಕತ್ವದ ಜಾಗಗಳನ್ನು ಕೊಳಗೇರಿ ಪ್ರದೇಶ ಅಭಿವೃದ್ಧಿ ಮಂಡಳಿಯ ವಶಕ್ಕೆ ಪಡೆದುಕೊಳ್ಳುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಈ) ಹಾವೇರಿ, ಧಾರವಾಡ ಹಾಗೂ ಗದಗ ಜಿಲ್ಲೆಗಳಲ್ಲಿ, ಖಾಸಗಿ ಮಾಲೀಕತ್ವದ ಜಾಗಗಳನ್ನು ಕೊಳಗೇರಿ ಪ್ರದೇಶ ಅಭಿವೃದ್ಧಿ ಮಂಡಳಿಯ ವಶಕ್ಕೆ ಪಡೆದುಕೊಂಡು, ಸದರಿ ಜಾಗದಲ್ಲಿ ವಾಸವಿರುವ ನಿವಾಸಿಗಳಿಗೆ ಕ್ರಯಪತ್ರ/ಹಕ್ಕುಪತ್ರ ನೀಡಲು ಸರ್ಕಾರ ಮುಂದಾಗಬಹುದೇ ; ಇದಕ್ಕೆ ಬೇಕಾಗುವ ಕಾಲಾವಕಾಶವೆಷ್ಟು ?

## ಧಾರವಾಡ, ಗದಗ, ಹಾವೇರಿ ಜಿಲ್ಲೆಗಳ ರೈತರಿಗೆ ಬೆಳೆ ವಿಮೆ ಪಾವತಿ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೬೧ (೧೯೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಸನ್ ೨೦೧೯ನೇ ಸಾಲಿನಲ್ಲಿ ಒಟ್ಟು ಎಷ್ಟು ರೈತರು ಬೆಳೆ ವಿಮೆಯನ್ನು ಪಾವತಿಸಿದ್ದಾರೆ ; ಪಾವತಿಸಲಾದ ಒಟ್ಟು ಮೊತ್ತವೆಷ್ಟು ;

(ಆ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ೨೦೧೯ನೇ

ಸಾಲಿನಲ್ಲಿ ಎಷ್ಟು ರೈತರಿಗೆ ಬೆಳೆ ವಿಮೆಯನ್ನು ಪಾವತಿಸಲಾಗಿದೆ ; ಹಾಗೂ ಪಾವತಿಸಲಾದ ಒಟ್ಟು ಮೊತ್ತವೆಷ್ಟು ;

(ಇ) ಒಂದು ವೇಳೆ ವಿಮೆ ಕಂಪನಿಗಳು ರೈತರಿಗೆ ಬೆಳೆ ವಿಮೆ ಪಾವತಿಸುವುದು ವಿಳಂಬವಾಗಿದ್ದರೆ, ವಿಳಂಬಕ್ಕೆ ಕಾರಣಗಳೇನು ; ಹಾಗೂ ರೈತರಿಗೆ ವಿಮೆ ಕಂಪನಿಗಳು ಪಾವತಿಸಬೇಕಾದ ಬೆಳೆ ವಿಮೆ ಪಾವತಿಸುವಂತೆ ಸರ್ಕಾರ ವಿಮೆ ಕಂಪನಿಗಳಿಗೆ ನಿರ್ದೇಶನ ನೀಡುವುದೇ ಇದಕ್ಕೆ ಬೇಕಾದ ಕಾಲಾವಕಾಶವೆಷ್ಟು ?

## ರಾಜ್ಯಾದ್ಯಂತ ಅವಶ್ಯವಿದ್ದ ರಸಗೊಬ್ಬರ ಪ್ರಮಾಣದ ವಿವರ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೬೨ (೧೧೯೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸನ್ ೨೦೧೯–೨೦ ಹಾಗೂ ೨೦೨೦–೨೧ನೇ ಸಾಲಿನಲ್ಲಿ ರಾಜ್ಯಾದ್ಯಂತ ಅವಶ್ಯವಿದ್ದ ರಸಗೊಬ್ಬರದ ಒಟ್ಟು ಪ್ರಮಾಣವೆಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಸನ್ ೨೦೧೯–೨೦ ಹಾಗೂ ೨೦೨೦–೨೧ನೇ ಸಾಲಿನಲ್ಲಿ ಸರ್ಕಾರದಿಂದ, ರಾಜ್ಯಾದ್ಯಂತ ಪೂರೈಸಲಾಗಿರುವ ಒಟ್ಟು ರಸಗೊಬ್ಬರದ ಪ್ರಮಾಣವೆಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ರಾಜ್ಯಾದ್ಯಂತ ೨೦೧೯–೨೦ ಹಾಗೂ ೨೦೨೦–೨೧ನೇ ಸಾಲಿನಲ್ಲಿ ರೈತರಿಗೆ ಪೂರೈಸಲಾಗಿರುವ ರಸಗೊಬ್ಬರ ಕೊರತೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ರೈತರಿಗೆ ಸಮರ್ಪಕ ರಸಗೊಬ್ಬರ ಪೂರೈಸಲು ವಿಫಲವಾಗಿರುವುದಕ್ಕೆ ಕಾರಣಗಳೇನು ?

## ಬಸವ ವಸತಿ ಯೋಜನೆ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೬೩ (೧೨೩೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ೨೦೧೭–೧೮ ರಿಂದ ೨೦೨೦–೨೧ರ ಸಾಲಿನಲ್ಲಿ ಬಸವ ವಸತಿ ಯೋಜನೆಯಡಿ ಮಂಜೂರು ಮಾಡಲಾದ ಮನೆಗಳ ಸಂಖ್ಯೆ ಎಷ್ಟು ;

(ಆ) ಎಷ್ಟು ಮನೆಗಳು ಪೂರ್ಣಗೊಂಡಿವೆ ;

(ಇ) ಬಿಡುಗಡೆ ಮಾಡಲಾದ ಅನುದಾನ ಎಷ್ಟು ; ಬಾಕಿ ಎಷ್ಟು ಅನುದಾನವನ್ನು ಬಿಡುಗಡೆ ಮಾಡಬೇಕಾಗಿದೆ ? (ಕ್ಷೇತ್ರವಾರು, ವರ್ಷವಾರು, ಜಾತಿವಾರು, ಸಮುದಾಯವಾರು ವಿವರ ನೀಡುವುದು)

## ಬೆಂಗಳೂರು ಗ್ರಾಮಾಂತರ ಜಿಲ್ಲೆಯ ರೈತರ ಸಮಸ್ಯೆಗಳ ಕುರಿತು

**ಶ್ರೀ ನಸೀರ್ ಅಹ್ಮದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೬೪ (೧೧೪೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಉಪ ವಿಭಾಗಾಧಿಕಾರಿ ಕಛೇರಿಯಿಂದ ರೈತರಿಗೆ ಆಗುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಜಮೀನಿನ ದಾಖಲಾತಿಗಳನ್ನು ಕೆಳಹಂತದ ಗ್ರಾಮ ಲೆಕ್ಕಿಗರು, ರಾಜಸ್ವ ನಿರೀಕ್ಷಕರು, ಉಪ ತಹಶೀಲ್ದಾರ್ ಮತ್ತು ತಹಶೀಲ್ದಾರರ ಮುಖಾಂತರ ಪರಿಶೀಲಿಸಿ ಉಪ ವಿಭಾಗಾಧಿಕಾರಿ ಕಛೇರಿಗೆ ಸಲ್ಲಿಸಿದ ನಂತರವೂ ಉಪ ವಿಭಾಗಾಧಿಕಾರಿಗಳು, ತಹಶೀಲ್ದಾರರ ಕಛೇರಿಗೆ ಕಳುಹಿಸುತ್ತಿರುವುದು ನಿಜವೇ ; ಹಾಗಿದ್ದಲ್ಲಿ, ಇದಕ್ಕೆ ಕಾರಣವೇನು ; ಇದರಿಂದ ರೈತರಿಗೆ ತೊಂದರೆಯಾಗುತ್ತಿಲ್ಲವೇ ;

(ಇ) ತಹಶೀಲ್ದಾರರುಗಳು ಪುನಃ ಪರಿಶೀಲನೆಗೆ ಕೆಳಹಂತದ ಅಧಿಕಾರಿಗಳಿಗೆ ಕಳುಹಿಸುತ್ತಿರುವುದು ನಿಜವೇ ; ಇದರಿಂದ ರೈತರಿಗೆ ಸರ್ಕಾರದಿಂದ ಸಿಗಬೇಕಾದ ಸವಲತ್ತುಗಳು ಸಿಗದೇ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರದ ಕ್ರಮವೇನು ;

(ಈ) ಈ ಅವ್ಯವಸ್ಥೆಗಳನ್ನು ಸರಿಪಡಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ? (ವಿವರಗಳನ್ನು ನೀಡುವುದು)

## ಕರ್ನಾಟಕ ಭೂ ಸುಧಾರಣಾ ಕಾಯ್ದೆ ೧೯೬೧ ಕಲಂ ೭೯ಎ ಮತ್ತು ಬಿ ವಿಚಾರ ಕುರಿತು

**ಶ್ರೀ ನಸೀರ್ ಅಹ್ಮದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೬೫ (೧೧೩೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಭೂ ಸುಧಾರಣಾ ಕಾಯ್ದೆ ೧೯೬೧ ಕಲಂ ೭೯ಎ ಮತ್ತು ಬಿ ಗೆ ಸಂಬಂಧಿಸಿದಂತೆ ರಾಜ್ಯದಲ್ಲಿ ಒಟ್ಟು ಎಷ್ಟು ಪ್ರಕರಣಗಳು ದಾಖಲಾಗಿವೆ ;

(ಆ) ರಾಜ್ಯ ಸರ್ಕಾರದಿಂದ ಪ್ರಕರಣಗಳನ್ನು ಹಿಂಪಡೆಯಲು ಆದೇಶಿಸಿದ ಮೇಲೆ ಸಹಾಯುಕ ಕಮೀಷನರ್ ಕಛೇರಿಯಿಂದ ಮುಕ್ತಗೊಳಿಸಲಾದ ಪ್ರಕರಣಗಳೆಷ್ಟು ;

(ಇ) ಈ ಪ್ರಕರಣಗಳಿಗೆ ಸಂಬಂಧಿಸಿದಂತೆ ರಾಜ್ಯಾದ್ಯಂತ ಪಹಣಿ ಕಾಲಂ ೧೧ರಲ್ಲಿ ನಮೂದಾಗಿದ್ದ ೭೯ಎ ಮತ್ತು ಬಿ ಪ್ರಕರಣಗಳ ನಮೂದನ್ನು ತೆಗೆದಿರುವ ಪ್ರಕರಣಗಳೆಷ್ಟು ;

(ಈ) ಸಹಾಯಕ ಕಮೀಷನರ್‌ರವರ ಕಛೇರಿಗಳಲ್ಲಿ ಹಾಲಿ ಬಾಕಿ ಇರುವ ಪ್ರಕರಣಗಳೆಷ್ಟು ;

(ಉ) ಸರ್ಕಾರದಿಂದ ಆದೇಶವಾಗಿದ್ದರೂ, ಸಹಾಯಕ ಕಮೀಷನರ್‌ರವರ ಕಛೇರಿಗಳಲ್ಲಿ ೭೯ಎ ಮತ್ತು ಬಿ ಪ್ರಕರಣಗಳನ್ನು ಬಾಕಿ ಇಡಲು ಕಾರಣವೇನು ?

## ರಾಜ್ಯದಲ್ಲಿ ಪೋಡಿಗೆ ಸಂಬಂಧಿಸಿದ ಪ್ರಕರಣಗಳ ವಿವರ

**ಶ್ರೀ ನಸೀರ್ ಅಹ್ಮದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೬೬ (೧೧೪೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಒಟ್ಟು ಪೋಡಿ ಮಾಡಲು ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; ಪೋಡಿ ಮಾಡಬೇಕಾದ ಸರ್ವೆ ನಂಬರ್‌ಗಳ ಸಂಖ್ಯೆ ಹಾಗೂ ಖಾತೆದಾರರ ಸಂಖ್ಯೆ ಎಷ್ಟು ; ಹಾಗೂ ಯಾವುವು ;

(ಆ) ಪೋಡಿ ಮಾಡಲು ಲಭ್ಯವಿರುವ ಮೂಲ ಕಡತಗಳೆಷ್ಟು ;

(ಇ) ಪೋಡಿ ಮಾಡಲು ಅಲಭ್ಯವಿರುವ ಕಡತಗಳೆಷ್ಟು ; ಲಭ್ಯವಿಲ್ಲದೆ ಇರಲು ಕಾರಣಗಳೇನು ;

(ಈ) ಪೋಡಿ ಮಾಡಲು ಇರುವ ನಮೂನೆ ೧ ರಿಂದ ೫ ರ ಪ್ರಕರಣಗಳ ಸಂಖ್ಯೆ ಎಷ್ಟು ; ನಮೂನೆ ೧ ರಿಂದ ೧೦ರ ಪ್ರಕರಣಗಳ ಸಂಖ್ಯೆ ಎಷ್ಟು ;

(ಉ) ಈ ಹಿಂದೆ ಪೋಡಿಯಾಗಿದ್ದು, ಹೊಸ ಸರ್ವೆ ನಂಬರ್ ಪಹಣಿ ನಮೂದಿಸದೆ ಇರುವ ಪ್ರಕರಣಗಳೆಷ್ಟು ;

(ಊ) ಪೋಡಿ ಮಾಡಲು ಎ.ಡಿ.ಎಲ್.ಆರ್.ರವರ ಕಛೇರಿಯಿಂದ ಸರ್ವೆ ಕಾರ್ಯ ನಡೆಸಿರುವ ಪ್ರಕರಣಗಳೆಷ್ಟು ?

(ಋ) ತಹಶೀಲ್ದಾರ್‌ರವರ ಕಛೇರಿಯಿಂದ ಸಹಾಯಕ ಕಮೀಷನರ್‌ರವರ ಕಛೇರಿಗೆ ಸಹಾಯಕ ಕಮೀಷನರ್‌ರವರ ಕಛೇರಿಯಿಂದ ಡಿ.ಎಲ್.ಆರ್. ಕಛೇರಿಗೆ ಸಲ್ಲಿಸಲಾಗಿರುವ ಪ್ರಕರಣಗಳೆಷ್ಟು ;

(ಎ) ಪೋಡಿ ಮಾಡಿ ಹೊಸ ಸರ್ವೆ ನಂಬರ್ ನೀಡಲಾಗಿರುವ ಪ್ರಕರಣಗಳೆಷ್ಟು ?

## ಅಂತರ್ಜಲ ಸಂರಕ್ಷಣೆ ಬಗ್ಗೆ

**ಶ್ರೀ ನಸೀರ್ ಅಹ್ಮದ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೦೬೭ (೧೨೫೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಅಂತರ್ಜಲ ಸಂರಕ್ಷಣೆ ದೃಷ್ಟಿಯಿಂದ ಯಾವ್ಯಾವ ಮರಗಳನ್ನು ಬೆಳೆಯಬಾರದೆಂದು ಸರ್ಕಾರ ಕಾಯ್ದೆ ಅಥವಾ ಷರತ್ತು ವಿಧಿಸಿದೆ; (ಪ್ರತಿ ನೀಡುವುದು)

(ಆ) ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲ್ಲೂಕು, ಸೋಂಪುರ ಹೋಬಳಿ ವ್ಯಾಪ್ತಿಯ ಗ್ರಾಮಗಳಲ್ಲಿ ಎಷ್ಟು ಎಕರೆ ವಿಸ್ತೀರ್ಣದಲ್ಲಿ ಇಂತಹ ಮರಗಳನ್ನು ಬೆಳೆಯಲಾಗಿದೆ; (ಗ್ರಾಮ ಮತ್ತು ವಿಸ್ತೀರ್ಣವಾರು ವಿವರ ನೀಡುವುದು)

(ಇ) ಸೋಂಪುರ ಹೋಬಳಿಯ ಕಾಸರಘಟ್ಟ ಗ್ರಾಮ ವ್ಯಾಪ್ತಿಯ ಎಷ್ಟು ಎಕರೆ ವಿಸ್ತೀರ್ಣದಲ್ಲಿ ಇಂತಹ ಮರಗಳನ್ನು ಬೆಳೆಯಲಾಗಿದೆ; (ಹೆಸರು ಮತ್ತು ವಿಸ್ತೀರ್ಣವಾರು ವಿವರ ನೀಡುವುದು) ಕಳೆದ ಮಾರ್ಚ್‌ನಿಂದ ಈ ದಿನಾಂಕದವರೆಗೂ ಯಾವ ರೈತರ ಎಷ್ಟು ಎಕರೆ ವಿಸ್ತೀರ್ಣದ ಜಮೀನುಗಳಲ್ಲಿ ಇಂತಹ ಮರಗಳನ್ನು ತೆಗೆಯಲಾಗಿದೆ; ಇನ್ನೂ ಯಾವ ರೈತರ ಎಷ್ಟು ವಿಸ್ತೀರ್ಣದ ಜಮೀನುಗಳಲ್ಲಿ ಮರಗಳನ್ನು ತೆಗೆಯಬೇಕಾಗಿದೆ; (ಹೆಸರು, ವಿಸ್ತೀರ್ಣವಾರು ವಿವರ ನೀಡುವುದು)

(ಈ) ಸದರಿ ಗ್ರಾಮ ವ್ಯಾಪ್ತಿಯಲ್ಲಿ ಇಂತಹ ಮರಗಳನ್ನು ಕಡ್ಡಾಯವಾಗಿ ತೆರವುಗೊಳಿಸಿ ರೈತರಿಗೆ ಅಂತರ್ಜಲದ ಅನುಕೂಲ ಕಲ್ಪಿಸಲು ಈವರೆಗೂ ಕೈಗೊಂಡಿರುವ ಕ್ರಮಗಳಾವುವು ? (ವಿವರ ಮತ್ತು ಯಾವ ನಿಗಧಿತ ದಿನಾಂಕದೊಳಗೆ ಮರಗಳನ್ನು ತೆರವುಗೊಳಿಸಲಾಗುವುದು)

## ತಾಲ್ಲೂಕು ಕಛೇರಿಗೆ ರೈತರ ಅನಗತ್ಯ ಅಲೆದಾಟ ಕುರಿತು

**ಶ್ರೀ ನಸೀರ್ ಅಹ್ಮದ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೦೬೮ (೧೧೪೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನೆಲಮಂಗಲ ತಾಲ್ಲೂಕಿನ ಸೋಂಪುರ ಹೋಬಳಿಯ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳ ರೈತರು ಸಣ್ಣಪುಟ್ಟ ಕೆಲಸಗಳಿಗೆ ಅನಗತ್ಯವಾಗಿ ತಾಲ್ಲೂಕು ಕಛೇರಿಗೆ ಅಲೆದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸೋಂಪುರ ಹೋಬಳಿಯ ವ್ಯಾಪ್ತಿಯಲ್ಲಿ ಬರುವ ಕಾಸರಘಟ್ಟ ಗ್ರಾಮದ ಎಷ್ಟು ರೈತರು ಕಂದಾಯ ಕೆಲಸಗಳಿಗೆ ಅರ್ಜಿ ಸಲ್ಲಿಸಿದ್ದಾರೆ; (ಮಾಹಿತಿ ನೀಡುವುದು)

(ಇ) ಕಾಸರಘಟ್ಟ ಗ್ರಾಮದ ಸರ್ವೆ ನಂ. ೩೭/೧, ೩೮/೩, ೪೮/೧, ೪೮/೩ ಮತ್ತು ಇತರೆ ಸರ್ವೆ ನಂಬರ್‌ಗಳ ಕೆಲಸಗಳಿಗೆ ಸಂಬಂಧಪಟ್ಟಂತೆ ಯಾವ ದಿನಾಂಕದಂದು ಅರ್ಜಿ ಸಲ್ಲಿಸಿದ್ದಾರೆ; ಇಲ್ಲಿಯವರೆಗೂ ದಾಖಲೆ ಮಾಡಿಕೊಡದಿರಲು ಕಾರಣವೇನು;

(ಈ) ಸದರಿ ಸರ್ವೆ ನಂಬರ್‌ಗಳಿಗೆ ಸಂಬಂಧಪಟ್ಟ ಕಡತವು ಅಸಿಸ್ಟೆಂಟ್ ಕಮಿಷನರ್‌ರವರಿಂದ ಯಾವ ದಿನಾಂಕದಂದು ತಹಶೀಲ್ದಾರರ ಕಛೇರಿಗೆ ಬಂದಿದೆ; ಇಲ್ಲಿಯವರೆಗೂ ಖಾತೆ ಆಗದೇ ರೈತರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ನಿಗಧಿತ ಕಾಲಮಿತಿಯೊಳಗೆ ಖಾತೆ ಮಾಡಿಕೊಡಲಾಗುವುದು ?

## ಕ್ರೈಸ್ ಅಧೀನದ ವಸತಿ ಶಾಲೆಗಳಲ್ಲಿ ಖಾಲಿಯಿರುವ ಪ್ರಾಂಶುಪಾಲರ ಹುದ್ದೆಗಳ ನೇಮಕಾತಿ ಕುರಿತು

**ಶ್ರೀ ನಿರಾಣಿ ಹಣಮಂತ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೧೦೬೯ (೧೨೪೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯ ಕ್ರೈಸ್ ಸಂಸ್ಥೆಯ ಅಧೀನದ ವಸತಿ ಶಾಲೆಗಳಲ್ಲಿ ಖಾಲಿಯಿರುವ ಪ್ರಾಂಶುಪಾಲರ ಹುದ್ದೆಗಳೆಷ್ಟು;

(ಆ) ಸದರಿ ಖಾಲಿಯಿರುವ ಪ್ರಾಂಶುಪಾಲರ ಹುದ್ದೆಗಳಲ್ಲಿ ವಸತಿ ಶಾಲಾ ಶಿಕ್ಷಕರುಗಳಿಗೆ ಯಾವ ನಿಯಮದಡಿಯಲ್ಲಿ ಪ್ರಭಾರದಲ್ಲಿರಿಸಲಾಗುವುದು; (ಮಾಹಿತಿ ಒದಗಿಸುವುದು)

(ಇ) ಪ್ರಭಾರದಲ್ಲಿರಿಸಿದ ಸಿಬ್ಬಂದಿಗಳಿಗೆ ಇದುವರೆಗೆ ಮಂಜೂರಾದ ಪ್ರಭಾರ ಭತ್ಯೆ ಎಷ್ಟು; (ವಿವರ ನೀಡುವುದು)

(ಈ) ಇಲ್ಲವಾದಲ್ಲಿ ಪ್ರಭಾರ ಭತ್ಯೆಯನ್ನು ನೀಡದಿರಲು ಕಾರಣಗಳೇನು; ಸದರಿ ವಸತಿ ಶಾಲೆಗಳಿಗೆ ಪೂರ್ಣ ಕಾಲಿಕ ಪ್ರಾಂಶುಪಾಲರ ಅವಶ್ಯಕತೆಯಿಲ್ಲವೇ; ಅವಶ್ಯಕತೆಯಿದ್ದಲ್ಲಿ ಯಾವ ಕಾಲಮಿತಿಯಲ್ಲಿ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು ?

## ಕ್ರೈಸ್ ಸಂಸ್ಥೆಯ ಖಾಯಂ ಸಿಬ್ಬಂದಿಗಳಿಗೆ ಮುಂಬಡ್ತಿ ನೀಡುವ ಬಗ್ಗೆ

**ಶ್ರೀ ನಿರಾಣಿ ಹಣಮಂತ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೧೦೭೦ (೧೨೪೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯ ಕ್ರೈಸ್ ಸಂಸ್ಥೆಯ ಖಾಯಂ ಸಿಬ್ಬಂದಿಗಳಿಗೆ ಮಾನ್ಯ ಉಚ್ಚ ನ್ಯಾಯಾಲಯದ ಧಾರವಾಡ ಪೀಠ ಮತ್ತು ಸರ್ಕಾರವು ಜಾರಿ ಮಾಡಿದ ಆದೇಶದಂತೆ ಮುಂಬಡ್ತಿ ನೀಡಲು ವಿಳಂಬ ಮಾಡುತ್ತಿರುವುದಕ್ಕೆ ಕಾರಣಗಳೇನು;

(ಆ) ಕರ್ನಾಟಕ ನಾಗರಿಕ ಸೇವಾ ನಿಯಮ–೧೯೫೭ರ ಸೇವಾ ಜ್ಯೇಷ್ಠತಾ ನಿಯಮಗಳು ಕ್ರೈಸ್ ನೌಕರರಿಗೆ ಅನ್ವಯಿಸುತ್ತವೆಯೇ; (ವಿವರ ನೀಡುವುದು)

(ಇ) ಕ್ರೈಸ್ ಸಂಸ್ಥೆಯ ವಸತಿ ಶಾಲೆಗಳ ಜೇಷ್ಠತಾ ಪಟ್ಟಿಗಳು ಎಷ್ಟು ವಿಧಗಳಲ್ಲಿವೆ ? (ಅವುಗಳ ವಿವರವನ್ನು ಹುದ್ದೆ ಮತ್ತು ವೃಂದವಾರು ವಿವರ ನೀಡುವುದು)

## ಬಾಗಲಕೋಟೆ ಜಿಲ್ಲೆಯ ರಸ್ತೆಗಳ ಅಭಿವೃದ್ಧಿ ಕಾಮಗಾರಿಗಳ ಕುರಿತು

**ಶ್ರೀ ನಿರಾಣಿ ಹಣಮಂತ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೧೦೭೧ (೧೨೪೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಜಿಲ್ಲೆಯಲ್ಲಿ ಕಳೆದ ೦೨ ವರ್ಷಗಳಿಂದ ಯಾವ ಯಾವ ರಸ್ತೆಗಳನ್ನು (ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿಗಳನ್ನೊಳಗೊಂಡಂತೆ ಎಲ್ಲಾ ರಸ್ತೆಗಳು) ಅಭಿವೃದ್ಧಿ ಪಡಿಸಲಾಗುತ್ತಿದೆಯೇ; ಅದಕ್ಕಾಗಿ ಮಂಜೂರಾದ ಅನುದಾನವೆಷ್ಟು; (ವಿವರ ನೀಡುವುದು)

(ಆ) ಸದರಿ ರಸ್ತೆಯ ಕಾಮಗಾರಿಗಳು ಪ್ರಸ್ತುತ ಯಾವ ಹಂತದಲ್ಲಿವೆ;

(ಇ) ಯಾವ ಕಾಲಮಿತಿಯಲ್ಲಿ ಸದರಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು ?

## ವಸತಿ ಯೋಜನೆ ಫಲಾನುಭವಿಗಳ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೭೨ (೧೨೦೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿವಿಧ ವಸತಿ ಯೋಜನೆ ಅಡಿಯಲ್ಲಿ ಮನೆ ನಿರ್ಮಿಸಿಕೊಂಡವರಿಗೆ ಹಣ ನೀಡಿಲ್ಲದಿರುವುದು ಮತ್ತು ಹಲವು ಮನೆಗಳ ನಿರ್ಮಾಣ ಅರ್ಧಕ್ಕೆ ನಿಂತು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಇದರ ಬಗ್ಗೆ ಏನು ಕ್ರಮ ಜರುಗಿಸಲಾಗಿದೆ;

(ಇ) ವಲಸೆ ಕಾರ್ಮಿಕರಿಗೆ ಕಡಿಮೆ ದರದಲ್ಲಿ ಮನೆ ಕಟ್ಟಿಸಿ ಕೊಡುತ್ತೇವೆಂದು ಸರ್ಕಾರ ಘೋಷಣೆ ಮಾಡಿದ್ದು, ಈ ಮನೆಗಳ ನಿರ್ಮಾಣಕ್ಕೆ ಸ್ಥಳ ನಿಗಧಿಯಾಗಿದೆಯೇ;

(ಈ) ಹಾಗಿದ್ದಲ್ಲಿ, ಯಾವ ಯಾವ ಪ್ರದೇಶವನ್ನು ಆಯ್ಕೆ ಮಾಡಿ ಮನೆ ನಿರ್ಮಾಣ ಮಾಡಲಾಗುತ್ತಿದೆ ?

## ಮಹಾದೇವಪುರದ ನಿವೇಶನಗಳನ್ನು / ಮನೆಗಳನ್ನು ಅವ್ಯವಹಾರವಾಗಿ ಮಾರಾಟ ಮಾಡುತ್ತಿರುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೭೩ (೬೦೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಪೂರ್ವ ತಾಲ್ಲೂಕು ಕೆ.ಆರ್. ಪುರಂ ವಿಧಾನ ಸಭಾ ಕ್ಷೇತ್ರದ ಮಹಾದೇವಪುರ ಸರ್ವೆ ನಂ. ೧೮೭ರ ಸರ್ಕಾರಿ ಜಮೀನಿನಲ್ಲಿ ಸ್ಥಳೀಯ ನಗರ ಪಾಲಿಕೆ ಸದಸ್ಯರು ಮತ್ತು ಇನ್ನಿತರರು ಸೇರಿಕೊಂಡು ನಿವೇಶನಗಳನ್ನು ಮತ್ತು ಮನೆಗಳನ್ನು ಬೇಕಾದವರಿಗೆ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಲವು ಬಾರಿ ದೂರು ನೀಡಿದ್ದರೂ ಈ ಬಗ್ಗೆ ಕ್ರಮ ಕೈಗೊಳ್ಳದಿರಲು ಕಾರಣವೇನು; (ವಿವರ ನೀಡುವುದು)

(ಇ) ಇದರಲ್ಲಿ ಇಲಾಖೆಯ ಅಧಿಕಾರಿಗಳು ಶಾಮೀಲಾಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತಿದ್ದು ಈ ಬಗ್ಗೆ ಸೂಕ್ತ ತನಿಖೆ ಮಾಡಲಾಗಿದೆಯೇ;

(ಈ) ಸರ್ಕಾರಿ ಜಾಗಗಳನ್ನು ಮಾರಾಟ ಮಾಡುತ್ತಿದ್ದರೂ ಈ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳದೆ ಇರಲು ಕಾರಣವೇನು ?

## ಯಲಹಂಕ ವಿಧಾನ ಸಭಾ ಕ್ಷೇತ್ರದ ಮನೆ ಹಂಚಿಕೆ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೭೪ (೧೨೦೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಲಹಂಕ ವಿಧಾನ ಸಭಾ ಕ್ಷೇತ್ರದ ದಾಸನಪುರ ಹೋಬಳಿ ದಾಸನಪುರ ಗ್ರಾಮ ಪಂಚಾಯತಿ ವ್ಯಾಪ್ತಿಗೆ ಬರುವ ಶಿವನಪುರ ಗ್ರಾಮದಲ್ಲಿ ವಸತಿ ಇಲಾಖೆಯಿಂದ ಯಾವ ಯಾವ ಯೋಜನೆಯಡಿ ಸನ್ ೨೦೦೦ ದಿಂದ ಈಚೆಗೆ ಎಷ್ಟು ಆಶ್ರಯ ಮನೆಗಳನ್ನು ನಿರ್ಮಾಣ ಮಾಡಲಾಗಿದೆ;

(ಆ) ಎಷ್ಟು ಮನೆಗಳನ್ನು ಹಂಚಿಕೆ ಮಾಡಿ ಹಕ್ಕು ಪತ್ರಗಳನ್ನು ನೀಡಲಾಗಿದೆ;

(ಇ) ಹಂಚಿಕೆಯಾಗದೇ ಉಳಿದಿರುವ ಮನೆಗಳ ಸಂಖ್ಯೆ ಎಷ್ಟು ಮತ್ತು ಅವು ಯಾವುವು;

(ಈ) ಫಲಾನುಭವಿಗಳ ಪ್ರತಿ ಹಾಗೂ ಅವರಿಗೆ ಹಂಚಿಕೆ ಮಾಡಲಾಗಿರುವ ನಿವೇಶನ/ಮನೆಯ ಸಂಖ್ಯೆಯ ಪಟ್ಟಿಯನ್ನು ವಿವರದೊಂದಿಗೆ ನೀಡುವುದು;

(ಉ) ಸಿ.ಎ. ಸೈಟ್‌ಗಳ ಸಂಖ್ಯೆ ಎಷ್ಟು; ಹಂಚಿಕೆ ಮಾಡಲಾದ ಸೈಟ್‌ಗಳ ಸಂಖ್ಯೆ ಎಷ್ಟು;

(ಊ) ಹಂಚಿಕೆಯಾಗದೆ ಉಳಿದಿರುವ ಸೈಟ್‌ಗಳ ಸಂಖ್ಯೆ ಎಷ್ಟು ? (ಪ್ರತಿಯೊಂದರ ವಿವರಗಳನ್ನು ಸೈಟ್‌ಗೆ ನಿಗಧಿಪಡಿಸಿದ ಸಂಖ್ಯೆಯೊಂದಿಗೆ ಒದಗಿಸುವುದು)

## ಬುಡಕಟ್ಟು ಜನಾಂಗದ ಜನಗಣತಿ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೭೫ (೧೨೭೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಬುಡಕಟ್ಟು ಜನಾಂಗದ ಸಂಪೂರ್ಣ ಜನಗಣತಿ ನಡೆಸಲಾಗಿದೆಯೇ; (ವಿವರ ನೀಡುವುದು)

(ಆ) ಬುಡಕಟ್ಟು ಜನಾಂಗದ ಮಕ್ಕಳ ಶಿಕ್ಷಣಕ್ಕೆ ಸರ್ಕಾರ ಕೈಗೊಂಡಿರುವ ಯೋಜನೆಗಳು ಯಾವುವು;

(ಇ) ಬುಡಕಟ್ಟು ಜನಾಂಗದವರಿಗೆ ಯಾವ ರೀತಿ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ; (ಪ್ರಾಂತ್ಯವಾರು ವಿವರ ನೀಡುವುದು)

(ಈ) ಕೊರೋನ ಸಂದರ್ಭದಲ್ಲಿ ಬುಡಕಟ್ಟು ಜನಾಂಗದವರಿಗೆ ಪ್ರತ್ಯೇಕ ಪ್ಯಾಕೇಜ್ ಘೋಷಿಸಲಾಗಿತ್ತೆ; ಹಾಗಿದ್ದಲ್ಲಿ, ಸಂಪೂರ್ಣ ವಿವರ ನೀಡುವುದು ?

## ೨೦೧೮ ರಿಂದ ೨೦೨೦–೨೧ನೇ ಸಾಲಿನಲ್ಲಿ ಸಾವನ್ನಪ್ಪಿದ ಜನಗಳ ಬಗ್ಗೆ

**ಶ್ರೀ ಪ್ರಕಾಶ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೧೦೭೬ (೧೧೨೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೧೮–೧೯ ರಿಂದ ೨೦೨೦–೨೧ನೇ ಸಾಲಿನಲ್ಲಿ ಸಾವನ್ನಪ್ಪಿದ ಜನ ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ಹಾಗೂ ತಿಂಗಳವಾರು ಮಾಹಿತಿ ನೀಡುವುದು)

(ಆ) ಸಾವಿನ ಸಂಖ್ಯೆ ಕಡಿಮೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಜ್ಯದಲ್ಲಿರುವ ಕುಗ್ರಾಮಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೧೦೭೭ (೧೧೨೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಕುಗ್ರಾಮ (ಹ್ಯಾಮಲೇಟ್) ಗಳಿವೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕುಗ್ರಾಮಗಳನ್ನು ಕಂದಾಯ ಗ್ರಾಮಗಳನ್ನಾಗಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳು ಏನು ; ಎಷ್ಟು ಹಣ ಮೀಸಲಿಡಲಾಗಿದೆ ; (ವಿವರ ನೀಡುವುದು)

(ಇ) ೨೦೧೮–೧೯ ರಿಂದ ೨೦೨೦–೨೧ನೇ ಸಾಲಿನಲ್ಲಿ ಅತಿವೃಷ್ಟಿ, ಅನಾವೃಷ್ಟಿಗೆ ಗುರಿಯಾದಂತಹ ಗ್ರಾಮಗಳು ಎಷ್ಟು; ಅವು ಯಾವುವು ; (ವಿವರ ನೀಡುವುದು)

(ಈ) ಯಾವ ಯಾವ ಗ್ರಾಮಗಳಲ್ಲಿ ಅತಿವೃಷ್ಟಿ, ಅನಾವೃಷ್ಟಿ ಯಿಂದ ಪ್ರಾಣ ಹಾನಿ, ಜನ–ಜಾನುವಾರುಗಳ ನಷ್ಟ ಆಸ್ತಿ–ಪಾಸ್ತಿಗಳು, ಬೆಳೆ ಹಾನಿ ನಷ್ಟ ಹಾಗೂ ಮನೆಗಳು ನಷ್ಟ ಆಗಿರುತ್ತವೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಉ) ಇಲ್ಲಿಯವರೆಗೆ ನೀಡಿದ ಪರಿಹಾರ ಎಷ್ಟು ; ಪರಿಹಾರ ನೀಡಲು ಅನುಸರಿಸಿರುವ ಮಾನದಂಡಗಳೇನು ?

## ಗುತ್ತಿಗೆದಾರರಿಗೆ ಹಣ ಪಾವತಿಸುವಾಗ ಜೇಷ್ಠತೆ ಪಾಲಿಸುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೧೦೭೮ (೧೧೨೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗುತ್ತಿಗೆದಾರರಿಗೆ ಹಣ ಪಾವತಿಸುವಾಗ ಜೇಷ್ಠತಾ ನಿಯಮ ಪಾಲಿಸಲಾಗುತ್ತಿದೆಯೇ ;

(ಆ) ಕಳೆದ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ ೩೦೫೪, ೨೦೫೯, ೫೦೫೪ ರಲ್ಲಿ ಒಟ್ಟು ಎಷ್ಟು ಕಾಮಗಾರಿಗಳು ಪೂರ್ಣಗೊಂಡಿರುತ್ತದೆ ; (ಕಾಮಗಾರಿವಾರು ವಿವರ ನೀಡುವುದು)

(ಇ) ಇದರಲ್ಲಿ ಎಷ್ಟು ಗುತ್ತಿಗೆದಾರರಿಗೆ ಹಣ ಪಾವತಿಸಲಾಗಿದೆ ? (ಜೇಷ್ಠತಾ ಪಟ್ಟಿಯ ವಿವರ ನೀಡುವುದು)

## ಕರಾವಳಿ ಭಾಗದಲ್ಲಿ ರಸ್ತೆ ದುರಸ್ಥಿ ಕುರಿತು

**ಶ್ರೀ ಕೆ. ಪ್ರತಾಪ್ ಸಿಂಹ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೦೭೯ (೧೧೬೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಕರಾವಳಿ ಭಾಗದಲ್ಲಿ ಮಳೆಗಾಲದಲ್ಲಿ ಸುರಿಯುವ ಮಳೆಯಿಂದಾಗಿ ಇಲ್ಲಿನ ಲೋಕೋಪಯೋಗಿ ಇಲಾಖೆ ವ್ಯಾಪ್ತಿಯ ರಸ್ತೆಗಳು ಕೆಟ್ಟು ಹೋಗುತ್ತಿರುವುದು ಮತ್ತು ಆ ರಸ್ತೆಗಳು ಮತ್ತೆ ಮತ್ತೆ ದುರಸ್ಥಿ ಮಾಡಬೇಕಾದ ಸಮಸ್ಯೆ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕರಾವಳಿ ರಸ್ತೆಗಳನ್ನು ಸಮರ್ಪಕವಾಗಿ ನಿರ್ಮಾಣ ಮಾಡಿ ವಿಪರೀತ ಮಳೆಯಿಂದಾಗಿ ಪದೇ ಪದೇ ದುರಸ್ಥಿ ತಡೆಯಲು ರಸ್ತೆ ನಿರ್ಮಾಣದ ಸಮಯದಲ್ಲಿ ಕರಾವಳಿ ರಸ್ತೆಗಳಿಗಾಗಿ ವಿಶೇಷ ಮಾನದಂಡಗಳನ್ನು ರಚಿಸುವ ಕುರಿತು ಸರ್ಕಾರದ ಮುಂದಿರುವ ಸಲಹೆಗಳೇನು ?

## ರಾಜ್ಯದ ಮೂಲಗೇಣಿದಾರರ ಹಕ್ಕುಗಳ ಕುರಿತು

**ಶ್ರೀ ಕೆ. ಪ್ರತಾಪ್ ಸಿಂಹ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೦೮೦ (೧೧೭೮) ಮಾನ್ಯ ಕಂದಾಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ರಾಜ್ಯದ ಮೂಲಗೇಣಿದಾರರ ಹಕ್ಕುಗಳನ್ನು ಖಾಯಂ ಮಂಜೂರಾತಿ ಮಾಡುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ? (ವಿವರ ನೀಡುವುದು)

## ರಾಜ್ಯದ ದೇವಸ್ಥಾನಗಳಲ್ಲಿ ಆಡಳಿತ ಮಂಡಳಿ ಮೂಲಕ ಶಿಕ್ಷಣ ನಡೆಸುತ್ತಿರುವ ಬಗ್ಗೆ

**ಶ್ರೀ ಕೆ. ಪ್ರತಾಪ್ ಸಿಂಹ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೦೮೧ (೧೧೭೭) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಧಾರ್ಮಿಕದತ್ತಿ ಇಲಾಖೆಯು ಎಷ್ಟು ದೇವಸ್ಥಾನಗಳಲ್ಲಿ ದೇವಸ್ಥಾನದ ಆಡಳಿತ ಮಂಡಳಿ ಮೂಲಕ ಶಾಲಾ ಕಾಲೇಜುಗಳನ್ನು ನಡೆಸಲಾಗುತ್ತಿದೆ ; (ವಿವರ ನೀಡುವುದು)

(ಆ) ಧಾರ್ಮಿಕದತ್ತಿ ಇಲಾಖೆಯ ದೇವಸ್ಥಾನಗಳು ನಡೆಸಲ್ಪಡುತ್ತಿರುವ ಶಾಲಾ ಕಾಲೇಜುಗಳ ಶಿಕ್ಷಕ, ಉಪನ್ಯಾಸಕ ಮತ್ತು ಸಿಬ್ಬಂದಿಗಳಿಗೆ ನೀಡುವ ವೇತನ ಹಾಗೂ ಇತರ ಸೌಲಭ್ಯಗಳ ಕುರಿತು ಇರುವ ಮಾನದಂಡಗಳೇನು ; ಈ ಮಾನದಂಡಗಳಲ್ಲಿ ವ್ಯತ್ಯಾಸವಿರಲು ಕಾರಣವೇನು ;

(ಇ) ಧಾರ್ಮಿಕದತ್ತಿ ಇಲಾಖೆಯ ದೇವಸ್ಥಾನಗಳು ನಡೆಸುತ್ತಿರುವ ಶಿಕ್ಷಣ ಸಂಸ್ಥೆಗಳಲ್ಲಿ ಅನುದಾನ ಸಂಹಿತೆಯಂತೆ (Grant in Aid code) ಸೌಲಭ್ಯಗಳನ್ನು ನೀಡುವ ಯೋಚನೆ ಸರ್ಕಾರದ ಮುಂದಿದೆಯೇ ;

(ಈ) ಧಾರ್ಮಿಕದತ್ತಿ ಇಲಾಖೆಯ ಅಧೀನದಲ್ಲಿರುವ ಸಂಸ್ಥೆಗಳಲ್ಲಿನ ಸಿಬ್ಬಂದಿಗಳಿಗೆ ವೇತನ ಮತ್ತು ಇತರ ಸೌಲಭ್ಯಗಳನ್ನು ಸಮಾನವಾಗಿ ನೀಡಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ?

## ಆರ್.ಟಿ.ಸಿ ಸಮಸ್ಯೆಗಳ ಕುರಿತು

**ಶ್ರೀ ಕೆ. ಪ್ರತಾಪ್ ಸಿಂಹ ನಾಯಕ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೦೮೨ (೧೧೭೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಜನ ಸಾಮಾನ್ಯರಿಗೆ ಅಗತ್ಯವಿರುವ ಕಂದಾಯ ಇಲಾಖೆಯು ದಾಖಲೆಗಳನ್ನು ಪಡೆಯುವಲ್ಲಿ ಅನೇಕ ಸಮಸ್ಯೆಗಳಿರುವುದು ಸರ್ಕಾರದ ಗಮನದಲ್ಲಿದೆಯೇ ; (ವಿಶೇಷವಾಗಿ ಆರ್.ಟಿ.ಸಿ)

(ಆ) ಕಂದಾಯ ಇಲಾಖೆಯು ಗ್ರಾಮ ಮಟ್ಟದಲ್ಲಿ ತಳಸ್ಪರ್ಶಿಯಾಗಿ ಕಂದಾಯದ ದಾಖಲೆಗಳನ್ನು ಸಿದ್ಧಪಡಿಸಿ ನಾಗರಿಕರಿಗೆ ಕೂಡಲೇ ಲಭ್ಯವಾಗುವಂತೆ ಮಾಡಲು ಕೈಗೊಳ್ಳಲಿರುವ ಕ್ರಮವೇನು ; (ವಿವರ ನೀಡುವುದು)

(ಇ) ಈ ಸಮಸ್ಯೆಗೆ ಕಾರಣಗಳೇನು ?

## ರಾಜ್ಯದಲ್ಲಿ ವಸತಿ ರಹಿತ ಹಾಗೂ ಬಡವರ್ಗದವರಿಗೆ ಕೂಲಿ ಕಾರ್ಮಿಕರಿಗೆ ಮನೆಗಳು ಮಂಜೂರು ಮಾಡುವ ಕುರಿತು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೮೩ (೧೨೪೪) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಸತಿ ರಹಿತರಿಗೆ ಬಡವರಿಗೆ ಹಾಗೂ ಕೂಲಿ ಕಾರ್ಮಿಕರಿಗೆ ವಿವಿಧ ವಸತಿ ಯೋಜನೆಗಳ ಅಡಿ ಮನೆಗಳನ್ನು ಮಂಜೂರು ಮಾಡುವ ಯೋಜನೆಗಳಿವೆಯೇ ;

(ಆ) ಹಾಗಿದ್ದಲ್ಲಿ ಯಾವ ಯಾವ ಯೋಜನೆಗಳಡಿ ಯಾವ ನಿಗಮದಿಂದ ಮನೆಗಳನ್ನು ಮಾಡಲಾಗುತ್ತದೆ ;

(ಇ) ೨೦೧೮–೧೯ ರಿಂದ ೨೦೨೦–೨೧ರಲ್ಲಿ ಎಷ್ಟು ಫಲಾನುಭವಿಗಳಿಗೆ ಮನೆ ಹಂಚಿಕೆ ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಮನೆ ಮಂಜೂರಾತಿ ನೀಡಲು ನಿಗಧಿಪಡಿಸಿದ ಮಾನದಂಡಗಳೇನು ; (ಸಂಪೂರ್ಣ ವಿವರ ನೀಡುವುದು)

(ಉ) ಈ ಹಿಂದೆ ಮಂಜೂರಾದ ಮನೆಗಳಿಗೆ ಹಣ ಬಿಡುಗಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಹಣ ಬಿಡುಗಡೆ ಮಾಡಲು ಯಾವ ಕ್ರಮ ಕೈಗೊಂಡಿದೆ ?

## ರಾಜ್ಯದಲ್ಲಿ ಮುಜರಾಯಿ ಇಲಾಖಾ ವ್ಯಾಪ್ತಿಗೆ ಬರುವ ದೇವಾಲಯಗಳ ಸಂಖ್ಯೆ ಎಷ್ಟು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೮೪ (೧೨೪೬) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ರಾಜ್ಯದಲ್ಲಿರುವ ಮುಜರಾಯಿ ಇಲಾಖೆ ದೇವಾಲಯಗಳ ಸಂಖ್ಯೆ ; ಎಷ್ಟು ಹಾಗೂ ಇವುಗಳ ಸ್ಥಿರಾಸ್ತಿ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ದೇವಾಲಯಗಳಿಗೆ ಸಂಬಂಧಿಸಿದ ಜಮೀನು ಎಷ್ಟು ಎಕರೆ ಇದೆ ; ಇದರಲ್ಲಿ ಒತ್ತುವರಿಯಾದ ಜಮೀನೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಒತ್ತುವರಿಯಾದ ಜಮೀನುಗಳನ್ನು ತೆರವುಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿ ಕಿಸಾನ್ ಸಮ್ಮಾನ್ ಯೋಜನೆಯಲ್ಲಿ ರೈತರಿಗೆ ಅನುದಾನ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೮೫ (೧೧೪೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಯಡಿಯಲ್ಲಿ ರಾಜ್ಯದ ರೈತರಿಗೆ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ; ಈ ಅನುದಾನದಲ್ಲಿ ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ ಅನುದಾನ ಎಷ್ಟು; ರಾಜ್ಯ ಸರ್ಕಾರ ಬಿಡುಗಡೆ ಮಾಡಿದ ಅನುದಾನ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ರೈತರ ಖಾತೆಗೆ ಹಣ ಜಮಾ ಆಗಿರುತ್ತದೆಯೇ; (ವಿವರ ನೀಡುವುದು)

(ಇ) ರಾಜ್ಯ ಸರ್ಕಾರದಿಂದ ಕಿಸಾನ್ ಸಮ್ಮಾನ್ ಯೋಜನೆಯಲ್ಲಿ ಪ್ರತಿ ರೈತರಿಗೆ ಎಷ್ಟು ಹಣ ನೀಡಲಾಗಿದೆ; ಹಾಗೂ ಒಟ್ಟು ಎಷ್ಟು ರೈತರಿಗೆ ಹಣ ನೀಡಲಾಗಿದೆ?

## ಕೃಷಿ ಹೊಂಡ ನಿರ್ಮಾಣಕ್ಕೆ ಬಿಡುಗಡೆಯಾದ ಅನುದಾನ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೦೮೬ (೧೧೮೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಎರಡು ವರ್ಷಗಳಿಂದ ಕೃಷಿ ಇಲಾಖೆಯಿಂದ ಕೃಷಿ ಹೊಂಡ ನಿರ್ಮಾಣಕ್ಕಾಗಿ ಬಿಡುಗಡೆಯಾದ ಅನುದಾನವೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕೃಷಿ ಹೊಂಡದ ಸಹಾಯಧನ ಸಮರ್ಪಕವಾಗಿ ರೈತರಿಗೆ ಸೇರುತ್ತಿದೆಯೇ ; (ವಿವರ ನೀಡುವುದು)

(ಇ) ಕಳೆದ ಎರಡು ವರ್ಷಗಳಿಂದ ಎಷ್ಟು ಫಲಾನುಭವಿಗಳಿಗೆ ಸಹಾಯಧನ ವಿತರಣೆಯಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಕೃಷಿ ಇಲಾಖೆಯ ನೂತನ ಆಪ್ ಎಷ್ಟು ಸಮರ್ಪಕವಾಗಿ ಕೆಲಸ ಮಾಡುತ್ತಿದೆ ; ಆಪ್ ಬಳಕೆಯ ಕುರಿತಾಗಿ ರೈತರಿಗೆ ತರಬೇತಿ ನೀಡಲಾಗಿದೆಯೇ ? (ವಿವರ ನೀಡುವುದು)

## ನಿಜಶರಣ ಶ್ರೀ ಅಂಬಿಗರ ಚೌಡಯ್ಯ ಒಳನಾಡು ಮೀನುಗಾರಿಕೆ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೦೮೭ (೧೧೮೪) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಿಜಶರಣ ಶ್ರೀ ಅಂಬಿಗರ ಚೌಡಯ್ಯ ಒಳನಾಡು ಮೀನುಗಾರಿಕಾ ಅಭಿವೃದ್ಧಿ ಕೇಂದ್ರವನ್ನು ಬಾಗಲಕೋಟೆಯಲ್ಲಿ ಸ್ಥಾಪನೆ ಮಾಡಿರುವ ಮೂಲ ಉದ್ದೇಶವೇನು ;

(ಆ) ಈ ಕೇಂದ್ರದ ಮೂಲಕ ಇದುವರೆಗೆ ಯಾವುದೇ ಯೋಜನೆಗಳನ್ನು ಅನುಷ್ಠಾನ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಮೀನುಗಾರರ ಶ್ರೇಯೋಭಿವೃದ್ಧಿ ಕೇಂದ್ರವನ್ನು ಸದೃಢಗೊಳಿಸುವಲ್ಲಿ ಸರ್ಕಾರ ವಿಫಲವಾಗುವುದೇ ; ಈ ಕೇಂದ್ರದ ಅಭಿವೃದ್ಧಿಗಾಗಿ ಯಾವ ಕ್ರಮ ಕೈಗೊಳ್ಳಲಾಗುವುದು ;

(ಈ) ಒಳನಾಡು ಮೀನುಗಾರಿಕೆ ಅಭಿವೃದ್ಧಿ ಕೇಂದ್ರದಲ್ಲಿ ಪ್ರಾರಂಭವಾದಾಗಿನಿಂದ ವೇತನಕ್ಕಾಗಿ, ಯೋಜನೆಗಳ ಅನುಷ್ಠಾನಕ್ಕಾಗಿ ವೆಚ್ಚವಾಗಿರುವ ಹಣವೆಷ್ಟು ;

(ಉ) ಈ ಕೇಂದ್ರದಲ್ಲಿ ಮಂಜೂರಾದ ಮತ್ತು ಖಾಲಿ ಇರುವ ಹುದ್ದೆಗಳೆಷ್ಟು ? (ವಿವರ ನೀಡುವುದು)

## ರಾಜ್ಯದ ಪ್ರಮುಖ ನಗರಗಳ ರಸ್ತೆಗಳು ಹದಗೆಟ್ಟಿರುವ ಕುರಿತು

**ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೦೮೮ (೧೧೮೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಹೊರತುಪಡಿಸಿ ರಾಜ್ಯದ ಬಹುತೇಕ ಪ್ರಮುಖ ನಗರಗಳ ರಸ್ತೆಗಳು ತೀರಾ ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ರಸ್ತೆಗಳ ಅಭಿವೃದ್ಧಿಗೆ ಯಾವ ಕ್ರಮ ಕೈಗೊಳ್ಳಲಾಗುತ್ತದೆ ;

(ಆ) ಜಿಲ್ಲಾ ಕೇಂದ್ರಗಳ ಮತ್ತು ಪ್ರಮುಖ ತಾಲ್ಲೂಕು ಕೇಂದ್ರಗಳಲ್ಲಿ ರಸ್ತೆ ಅಭಿವೃದ್ಧಿಯಾಗದೇ ವರ್ಷಗಳೇ ಕಳೆದಿರುವುದು ಸರ್ಕಾರ ಗಮನಿಸಿದೆಯೇ ;

(ಇ) ರಸ್ತೆ ಗುಂಡಿಗಳು ವಾಹನ ಸವಾರರಿಗೆ ತೀವ್ರ ಸಂಕಷ್ಟ ತಂದೊಡ್ಡುತ್ತಿದ್ದು, ಅನೇಕ ಅಪಘಾತಗಳಿಗೆ ಕಾರಣವಾಗಿದ್ದು ಇದಕ್ಕೆ ಶಾಶ್ವತ ಪರಿಹಾರಗಳೇನು ;

(ಈ) ಕಳೆದೆರಡು ವರ್ಷಗಳಿಂದ ರಾಜ್ಯದ ವಿವಿಧ ಮೇಲ್ಸೇತುವೆ, ಸೇತುವೆ ಮತ್ತು ಅಂಡರ್ ಪಾಸ್‌ಗಳಿಗೆ ವ್ಯಯಿಸಲಾದ ಹಣವೆಷ್ಟು ? (ಸಂಪೂರ್ಣ ವಿವರ ನೀಡುವುದು)

## ಪ್ರಸಕ್ತ ಸಾಲಿನಲ್ಲಿ ಹೊಸ ವಸತಿ ಯೋಜನೆಗಳನ್ನು ರೂಪಿಸುವ ಕುರಿತು

**ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೦೮೯ (೧೧೮೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ ಯಾವ ಯಾವ ಯೋಜನೆಗಳ ಮೂಲಕ ಬಡವರಿಗೆ ಮನೆಗಳನ್ನು ಹಂಚುವ ಕಾರ್ಯಕ್ರಮ ರೂಪಿಸಲಾಗಿದೆ ; (ವಿವರ ನೀಡುವುದು)

(ಆ) ಕಳೆದ ಎರಡು ವರ್ಷಗಳಿಂದ ನಿರ್ಮಾಣವಾಗದೇ ಉಳಿದಿರುವ ಮನೆಗಳನ್ನು ಪೂರ್ಣಗೊಳಿಸಲು ಸರ್ಕಾರ ಅಂತಿಮ ಗಡುವು ನಿಗದಿಪಡಿಸಿದೆಯೇ ;

(ಇ) ವಸತಿ ಇಲಾಖೆಯಡಿ ನಿರ್ಮಾಣವಾಗುವ ಮನೆಗಳ ಗುಣಮಟ್ಟದ ಕುರಿತು ಪ್ರಶ್ನೆಗಳು ಎದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಕಳಪೆ ಗುಣಮಟ್ಟದ ಮನೆಗಳನ್ನು ನಿರ್ಮಿಸಿದರೆ ಸಂಬಂಧಪಟ್ಟ ಗುತ್ತಿಗೆದಾರರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಳ್ಳುತ್ತದೆ ?

## ಅರಣ್ಯ ಇಲಾಖೆಯಿಂದ ಕಂದಾಯ ಇಲಾಖೆ ಪಡೆದುಕೊಂಡು ಭೂಮಿ ಕುರಿತು

**ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೦೯೦ (೧೧೮೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಎರಡು ವರ್ಷಗಳಿಂದ ಅರಣ್ಯ ಇಲಾಖೆಯಿಂದ ಕಂದಾಯ ಇಲಾಖೆ ಪಡೆದುಕೊಂಡ ಭೂಮಿ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಅರಣ್ಯ ಇಲಾಖೆಯಿಂದ ಪಡೆದುಕೊಂಡ ಭೂಮಿಯನ್ನು ಕಂದಾಯ ಇಲಾಖೆ ಯಾವ ಉದ್ದೇಶಕ್ಕೆ ಮಾತ್ರ ಬಳಸಿಕೊಳ್ಳಬಹುದು ; (ಸೂಕ್ತ ಮಾನದಂಡದ ಸಹಿತ ವಿವರ ನೀಡುವುದು)

(ಇ) ರಾಜ್ಯದ ತಾಲ್ಲೂಕು ಕಛೇರಿಗಳ ಭೂಮಿ ಕೇಂದ್ರಗಳಲ್ಲಿ ಸಾಫ್ಟ್‌ವೇರ್ ಸಮಸ್ಯೆಯಿಂದಾಗಿ ರೈತರ ಪಹಣಿ ಮತ್ತು ಬೆಳೆ ಎಂಟ್ರಿ ಸಮರ್ಪಕವಾಗಿ ನಡೆಯದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ರಾಜ್ಯದ ಎಲ್ಲಾ ತಾಲ್ಲೂಕು ಕಛೇರಿಗಳ ಭೂಮಿ ಕೇಂದ್ರದ ದಾಖಲೆಗಳ ಡಿಜಿಟಲೀಕರಣವನ್ನು ಖಾಸಗಿ ಸಂಸ್ಥೆಗೆ ವಹಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ಮಹದೇವಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸರ್ಕಾರಿ ಜಮೀನುಗಳ ಅತಿಕ್ರಮಣ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೧೮೯೧ (೧೧೫೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹದೇವಪುರ ವಿಧಾನಸಭೆ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಜಮೀನುಗಳು ಯಾವುವು ; (ಗ್ರಾಮವಾರು, ಸರ್ವೆವಾರು, ವಿಸ್ತೀರ್ಣವಾರು ವಿವರ ನೀಡುವುದು)

(ಆ) ಈ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಜಮೀನುಗಳ ಪ್ರದೇಶಗಳನ್ನು ಭೂಗಳ್ಳರು ಅತಿಕ್ರಮಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಎಷ್ಟು ವಿಸ್ತೀರ್ಣದ ಜಮೀನುಗಳು ಅತಿಕ್ರಮಿಸಲ್ಪಟ್ಟಿವೆ ; (ಗ್ರಾಮವಾರು, ಸರ್ವೇವಾರು, ವಿಸ್ತೀರ್ಣವಾರು ವಿವರ ನೀಡುವುದು) ಅತಿಕ್ರಮಿಸಲ್ಪಟ್ಟ ಸರ್ಕಾರಿ ಸ್ವತ್ತುಗಳನ್ನು ಮರಳಿ ಪಡೆಯಲು ಸರ್ಕಾರದ ಕ್ರಮವೇನು ? (ವಿವರ ನೀಡುವುದು)

## ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿಯಲ್ಲಿ ಬೆಳೆ ವಿಮೆ ಪಡೆಯಲು ರೈತರ ಸಂಕಷ್ಟದ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೧೮೯೨ (೧೧೫೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ರೈತರು ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಲ್ಲಿ ವಿಮಾ ಕಂತುಗಳನ್ನು ತುಂಬಿದ್ದಾರೆ ಮತ್ತು ಎಷ್ಟು ಮೊತ್ತವನ್ನು ಪಾವತಿಸಿದ್ದಾರೆ ; (ಜಿಲ್ಲಾವಾರು, ತಾಲ್ಲೂಕುವಾರು, ಗ್ರಾಮವಾರು ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ತೀವ್ರ ನೆರೆ ಹಾವಳಿ ಮತ್ತು ಆಕಾಲಿಕ ಮಳೆಯಿಂದ ಸಂಪೂರ್ಣ ಬೆಳೆನಾಶವಾಗಿ ಎಷ್ಟು ರೈತರು ಬೆಳೆನಾಶದ ವಿಮೆಗಾಗಿ ಅರ್ಹರಾಗಿರುತ್ತಾರೆ ; (ಜಿಲ್ಲಾವಾರು, ತಾಲ್ಲೂಕುವಾರು, ಗ್ರಾಮವಾರು ಮಾಹಿತಿ ನೀಡುವುದು)

(ಇ) ವಿಮೆ ಕಂತು ಪಾವತಿಸಿದರೂ ಸಹ ಬೆಳೆದ ಬೆಳೆಯು ನಾಶವಾಗಿ ಸರ್ಕಾರದಿಂದ ಬರತಕ್ಕಂತಹ ವಿಮೆಗಾಗಿ ಅರ್ಜಿ ಸಲ್ಲಿಸಿದರೂ ಸಹಾ ಹಲವು ರೈತರಿಗೆ ವಿಮೆ ಪರಿಹಾರ ದೊರಕದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಕಳೆದ ೩ ವರ್ಷಗಳಲ್ಲಿ ಬೆಳೆ ಹಾನಿಯಾಗಿರುವ ರೈತರ ಸಂಖ್ಯೆ ಎಷ್ಟು; ಕೇಂದ್ರ ಸರ್ಕಾರದ ವತಿಯಿಂದ ಬರಬೇಕಾದ ವಿಮೆ ಹಣದ ಮೊತ್ತವೆಷ್ಟು; (ಜಿಲ್ಲಾವಾರು, ತಾಲ್ಲೂಕವಾರು, ಗ್ರಾಮವಾರು ಮಾಹಿತಿ ನೀಡುವುದು)

(ಉ) ಕಳೆದ ೩ ವರ್ಷಗಳಲ್ಲಿ ಎಷ್ಟು ರೈತರಿಗೆ ಬೆಳೆ ಹಾನಿಯಾಗಿರುವ ವಿಮೆಯ ಹಣ ಪಾವತಿಯಾಗಿದೆ; ಎಷ್ಟು ರೈತರಿಗೆ ಬಾಕಿ ವಿಮಾ ಹಣ ಬರಬೇಕಾಗಿದೆ; ಈ ಬಗ್ಗೆ ಸರ್ಕಾರದ ಕ್ರಮವೇನು;

(ಊ) ಬೆಳೆ ಬೆಳೆದ ರೈತ ಹಾಗೂ ಕೃಷಿ ಕಂದಾಯ ಇಲಾಖೆಗಳು ಮತ್ತು ಬ್ಯಾಂಕ್‌ಗಳ ನಡುವೆ ಸಮನ್ವಯತೆ ಕೊರತೆಯಿಂದ ಬೆಳೆ ವಿಮಾ ಪರಿಹಾರಕ್ಕೆ ವಿಳಂಬವಾಗುತ್ತಿರುವ ಬಗ್ಗೆ ಸರ್ಕಾರದ ನಿಲುವೇನು? (ವಿವರ ನೀಡುವುದು)

## ಮಹದೇವಪುರ ವಿಧಾನಸಭಾ ಕ್ಷೇತ್ರದ ಅಲಂಬಿಕ್ ಗ್ಲಾಸ್ ಕಾರ್ಖಾನೆಗೆ ಸರ್ಕಾರದಿಂದ ಭೂಮಿ ಮಂಜೂರು ಮಾಡಿದ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೧೮೦೩ (೧೧೫೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹದೇವಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಇರುವ ಅಲಂಬಿಕ್ ಗ್ಲಾಸ್ ಕಾರ್ಖಾನೆ ನಿರ್ಮಾಣಕ್ಕಾಗಿ ಸರ್ಕಾರದಿಂದ ಭೂಮಿಯನ್ನು ಮಂಜೂರು ಮಾಡಲಾಗಿದೆಯೇ; ಮಾಡಿದ್ದಲ್ಲಿ, ಎಷ್ಟು ಎಕರೆ ಭೂಮಿಯನ್ನು ಸರ್ಕಾರ ಮಂಜೂರು ಮಾಡಿದೆ; (ವಿವರ ನೀಡುವುದು)

(ಆ) ಈ ಹಿಂದೆ ಸದರಿ ಕಾರ್ಖಾನೆಯು ತನ್ನ ಕಾರ್ಮಿಕರ ಶ್ರೇಯೋಭಿವೃದ್ಧಿಯ ಪರವಾಗಿ ಕಾರ್ಮಿಕರಿಗೆ ವಾಸಿಸಲು ಮನೆ ಕಟ್ಟಿಕೊಡುವ ಉದ್ದೇಶದ ಸಲುವಾಗಿ ಸರ್ಕಾರದಿಂದ ಭೂಮಿಯನ್ನು ಮಂಜೂರು ಮಾಡಿಸಿಕೊಂಡಿದೆಯೇ ; ಮಾಡಿಸಿಕೊಂಡಿದ್ದಲ್ಲಿ, ಸಂಪೂರ್ಣ ವಿವರ ನೀಡುವುದು ;

(ಇ) ಕಾರ್ಮಿಕರಿಗೆ ಮನೆ ಕಟ್ಟಿ ಕೊಡುವ ಸಲುವಾಗಿ ಸರ್ಕಾರದಿಂದ ಜಮೀನು ಪಡೆದು ಅನಂತರದಲ್ಲಿ ಬೇರೆ ಉದ್ದೇಶಕ್ಕಾಗಿ ಭೂಮಿಯನ್ನು ಬಳಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಳ್ಳುವ ಕ್ರಮವೇನು ?

## ಬೆಂಗಳೂರು ನಗರ ಜಿಲ್ಲೆಯ ಮಾದನಾಯಕನಹಳ್ಳಿ ಗ್ರಾಮದ ಬಳಿ ಇರುವ ರಸ್ತೆ ಸುಧಾರಣೆ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೧೮೯೪ (೧೧೫೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದ ತುಮಕೂರು ರಸ್ತೆ ಮಾದನಾಯಕನಹಳ್ಳಿ ಗ್ರಾಮದಿಂದ ಕುದುರೆಗೆರೆ ಸಾಸವೆಘಟ್ಟ, ಕುಂಬಾರಹಳ್ಳಿ ಮುಖಾಂತರ ಹಾದು ಹೋಗಿ ಹೆಸರಘಟ್ಟ ಸಂಪರ್ಕ ಕಲ್ಪಿಸುವ ರಸ್ತೆಯು ಮತ್ತು ಬೆಂಗಳೂರು ನಗರದ ಕಡಬರೆಗೆ ಗ್ರಾಮದಿಂದ ಲಕ್ಷ್ಮೀಪುರ, ಬಿನ್ನಮಂಗಲ, ವಡ್ಡರಹಳ್ಳಿ ಮುಖಾಂತರ ಹಾದು ಹೋಗಿ ಮಾದನಾಯಕನಹಳ್ಳಿ–ತುಮಕೂರು ರಸ್ತೆಗೆ ಸಂಪರ್ಕ ಕಲ್ಪಿಸುವ ರಸ್ತೆಯು ಹಾಳಾಗಿ ಸಾರ್ವಜನಿಕ ವಾಹನ ಸಂಚಾರಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ರಸ್ತೆಗಳಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ ಕಳೆದ ಹತ್ತು ವರ್ಷಗಳಲ್ಲಿ ಡಾಂಬರೀಕರಣದ /

ಕಾಂಕ್ರೀಟ್‌ಕರಣ ಮಾಡಿದ ಕಾಮಗಾರಿಗಳಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ರಸ್ತೆಗಳನ್ನು ಸುಸ್ಥಿತಿಗೆ ತರಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ಆರ್ಥಿಕ ನೆರವು ನೀಡಿರುವ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೬೫ (೧೨೧೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಮನಗರ ಜಿಲ್ಲೆಯ ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೆ ಎಷ್ಟು ನಿರುದ್ಯೋಗಿ ಯುವಕರಿಗೆ ಕುರಿ, ಕೋಳಿ ಸಾಕಣೆ, ಹೈನುಗಾರಿಕೆ ಮೊದಲಾದ ಸ್ವಯಂ ಉದ್ಯೋಗ ಕೈಗೊಳ್ಳಲು ನಿಗಮದಿಂದ ಹಣಕಾಸು ನೆರವು ನೀಡಲಾಗಿದೆ ; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೆ ಇದಕ್ಕಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಎಷ್ಟು ಅನುದಾನವನ್ನು ಬಿಡುಗಡೆ ಮಾಡಿರುತ್ತವೆ ; (ಪ್ರತಿ ವರ್ಷದ ವಿವರ ನೀಡುವುದು)

(ಇ) ಈ ಅನುದಾನದಲ್ಲಿ ಬಳಕೆಯಾದ ಅನುದಾನ ಎಷ್ಟು ; ಯಾವ ಯಾವ ಉದ್ದೇಶಗಳಿಗೆ ಹಾಗೂ ಯಾರು ಯಾರಿಗೆ ನೀಡಲಾಗಿದೆ ;

(ಈ) ೨೦೧೮–೧೯ನೇ ಸಾಲಿನಿಂದ ಇಲ್ಲಿಯುವರೆಗೆ ಎಷ್ಟು ಫಲಾನುಭವಿಗಳಿಗೆ ಹಣಕಾಸು ನೆರವನ್ನು ವರ್ಗಾಯಿಸಲಾಗಿದೆ ? (ಪೂರ್ಣ ವಿಳಾಸ ಹಾಗೂ ಸಲ್ಲಿಸಿದ ದಾಖಲೆಗಳೊಂದಿಗೆ ವಿವರವನ್ನು ನೀಡುವುದು)

## ರೈತರಿಗೆ ದರಖಾಸ್ತು ಮೂಲಕ ಮಂಜೂರಾಗಿರುವ ಜಮೀನನ್ನು ಅರಣ್ಯ ಇಲಾಖೆ ವಾಪಸ್ಸು ಕೋರುತ್ತಿರುವ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೯೬ (೧೧೪೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಜಿಲ್ಲಾ ವ್ಯಾಪ್ತಿಯಲ್ಲಿ ದರಖಾಸ್ತು ಮೂಲಕ ಮಂಜೂರಾಗಿರುವ ಹಲವು ಜಮೀನುಗಳು ಅರಣ್ಯ ಜಮೀನುಗಳಾಗಿರುತ್ತವೆಂದು ಸದರಿ ಜಮೀನುಗಳ ಮಂಜುರಾತಿಯನ್ನು ರದ್ದುಪಡಿಸಲು ಕೋರಿ ಅರಣ್ಯ ಇಲಾಖೆಯವರು ಕಂದಾಯ ಇಲಾಖೆಗೆ ಪ್ರಸ್ತಾವನೆ ಸಲ್ಲಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅರಣ್ಯ ಇಲಾಖೆಯವರು ೧೯೧೭, ೧೯೨೦, ೧೯೩೦ ಸ್ವಾತಂತ್ರ್ಯ ಪೂರ್ವದಲ್ಲಿಯೇ ಹೊರಡಿಸಿದ ರಾಜ್ಯ ಪತ್ರದ ಪ್ರತಿಗಳನ್ನು ಕಳುಹಿಸಿ ಈಗ ದರಖಾಸ್ತು ಮೂಲಕ ಮಂಜೂರಾದ ಜಮೀನುಗಳು ಅರಣ್ಯ ಜಮೀನುಗಳೆಂದು ಜಮೀನುಗಳ ಮಂಜೂರಾತಿಯನ್ನು ರದ್ದು ಪಡಿಸಿ ಅರಣ್ಯ ಇಲಾಖೆಗೆ ಹಸ್ತಾಂತರಿಸಲು ಕೋರುತ್ತಿರುವ ಬಗ್ಗೆ ಸರ್ಕಾರದ ನಿಲುವೇನು ;

(ಇ) ದರಖಾಸ್ತು ಮೂಲಕ ಜಮೀನು ಮಂಜೂರಾಗಿ ಈಗ ಅರಣ್ಯ ಜಮೀನೆಂದು ಮಂಜೂರಾತಿ ರದ್ದುಪಡಿಸಿದರೆ ; ಜಮೀನು ಕಳೆದುಕೊಂಡ ಬಡ ರೈತಾಪಿ ಜನರಿಗೆ ಬದಲಿ ಜಮೀನು ನೀಡಲು ಸರ್ಕಾರ ತೀರ್ಮಾನ ಕೈಗೊಳ್ಳುವುದೇ ?

## ಸಾಗುವಳಿ ಚೀಟಿಯಂತೆ ಖಾತಾ ಅಂಗೀಕೃತವಾಗಿರುವ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೧೪೯೭ (೧೧೪೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದರಖಾಸ್ತು ಮೂಲಕ ಒಬ್ಬರಿಗೆ ಎಷ್ಟು ಎಕರೆ ಜಮೀನು ಮಂಜೂರು ಮಾಡಲು ಅವಕಾಶವಿರುತ್ತದೆ ;

(ಆ) ಸರ್ಕಾರಿ ಗೋವಮಾಳದ ಜಮೀನಿನಲ್ಲಿ ಮಂಜೂರಾತಿ–ಯಾಗಿರುವಂತೆ / ಸಾಗುವಳಿ ಚೀಟಿಯಂತೆ ಖಾತಾ ಕ್ರಮ ಜರುಗಿಸಲು ಯಾವ ಯಾವ ಪೂರಕ ದಾಖಲಾತಿಗಳನ್ನು ಪರಿಶೀಲಿಸಬೇಕಾಗಿರುತ್ತದೆ ;

(ಇ) ೨೦೧೯–೨೦ನೇ ಸಾಲಿನಿಂದ ಇಲ್ಲಿಯವರೆಗೆ ಕನಕಪುರ ತಾಲ್ಲೂಕಿಗೆ ಸಂಬಂಧಿಸಿದಂತೆ ಒಟ್ಟು ಎಷ್ಟು ಪ್ರಕರಣಗಳಲ್ಲಿ ಸಾಗುವಳಿ ಚೀಟಿಯಂತೆ ಖಾತ ಅಂಗೀಕೃತವಾಗಿರುತ್ತದೆ ; (ವಿವರ ನೀಡುವುದು)

(ಈ) ಕಳೆದ ೧ ವರ್ಷದ ಅವಧಿಯಲ್ಲಿ ಕನಕಪುರ ತಾಲ್ಲೂಕು ವ್ಯಾಪ್ತಿಯಲ್ಲಿ ಎಷ್ಟು ಸಾಗುವಳಿ ಚೀಟಿಗಳನ್ನು ನೀಡಲಾಗಿದೆ ? (ವಿವರ ನೀಡುವುದು)

## ಆಶ್ರಯ ಮನೆಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೧೪೯೮ (೧೧೪೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೨ ವರ್ಷಗಳಿಂದ ಇಲ್ಲಿಯವರೆಗೆ ನೀಡಿರುವ ಆಶ್ರಯ ಮನೆಗಳು ಎಷ್ಟು; ಇದ್ದಕ್ಕೆ ಬಿಡುಗಡೆಯಾದ ಹಣವೆಷ್ಟು; ಖರ್ಚಾಗಿರುವ ಹಣ ಎಷ್ಟು; (ಪಂಚಾಯ್ತಿವಾರು ವಿವರ ನೀಡುವುದು)

(ಆ) ವಿಜಿಲ್ಯಾಪ್ ಯಾವ ಉದ್ದೇಶಕ್ಕೆ ಮಾಡಲಾಗಿದೆ ;

(ಇ) ಕಳೆದ ೨ ವರ್ಷಗಳಿಂದ ಇಲ್ಲಿಯವರೆಗೆ ಎಷ್ಟು ಮನೆಗಳನ್ನು ನೀಡಲಾಗಿದೆ ;

(ಈ) ಆಶ್ರಯ ಕಮಿಟಿ ಮತ್ತು ಲ್ಯಾಂಡ್ ಗ್ರ್ಯಾಂಟ್ ಕಮಿಟಿಗಳು ರಚನೆ ಆಗಿದೆಯೇ ; (ವಿವರ ನೀಡುವುದು)

(ಉ) ವಸತಿ ಯೋಜನೆಗೆ ಖರೀದಿಸಿರುವ ಜಮೀನು ಎಷ್ಟು ?

## ದರಖಾಸ್ತು ಮೂಲಕ ಜಮೀನು ಮಂಜೂರಾತಿ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೪೯ (೧೧೪೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ನಗರಸಭೆ / ಪುರಸಭೆ / ಪಟ್ಟಣ ಪಂಚಾಯತ್ ವ್ಯಾಪ್ತಿಯಿಂದ ಎಷ್ಟು ಕಿ,ಮೀ. ಅಂತರದ ಒಳಗೆ ದರಖಾಸ್ತು ಮೂಲಕ ಜಮೀನು ಮಂಜೂರಾತಿ ಮಾಡಲು ಅವಕಾಶ ಕಲ್ಪಿಸಲಾಗಿದೆ ;

(ಆ) ಈ ಹಿಂದೆ ನಗರಸಭೆ / ಪುರಸಭೆ ವ್ಯಾಪ್ತಿಗಳಲ್ಲಿ ಅರ್ಜಿ ಸಲ್ಲಿಸಿದ ದಿನಾಂಕ / ಸ್ವೀಕರಿಸಿರುವ ನಮೂನೆ–೫೦, ನಮೂನೆ–೫೩ ನಮೂನೆ–೫೭ರ ಅರ್ಜಿಗಳು ಎಷ್ಟು ;

(ಇ) ಈ ಪೈಕಿ ನಗರಸಭೆ / ಪುರಸಭೆ ವ್ಯಾಪ್ತಿಗೆ ಒಳಪಡುತ್ತದೆ ಎಂಬ ಕಾರಣ ನೀಡಿ ತಿರಸ್ಕರಿಸಿರುವ ಅರ್ಜಿಗಳ ಸಂಖ್ಯೆ ಎಷ್ಟು; ತೀರ್ಮಾನ ಕೈಗೊಳ್ಳದೆ ಉಳಿದಿರುವ ಅರ್ಜಿಗಳ ಸಂಖ್ಯೆ ಎಷ್ಟು;

(ಈ) ರಾಮನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳ ವ್ಯಾಪ್ತಿಯಲ್ಲಿ ನಮೂನೆ–೫೦ ಮತ್ತು ನಮೂನೆ–೫೩ರ ಅರ್ಜಿಗಳನ್ನುಸಮಿತಿಯಲ್ಲಿ ಅನುಮೋದಿಸಿ ಇನ್ನು ಸಾಗುವಳಿ ಚೀಟಿ ನೀಡದಿರುವ ಪ್ರಕರಣಗಳು ಎಷ್ಟು; ಹಾಗೂ ನೀಡದೆ ಇರಲು ಕಾರಣಗಳೇನು ?

## ಡಾ॥ ಬಿ.ಆರ್. ಅಂಬೇಡ್ಕರ್ ನಿಗಮದಿಂದ ಕೊಳವೆಬಾವಿ ಯೋಜನೆ ಕುರಿತು

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೧೧೦೦ (೧೧೫೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ರೈತರಿಗೆ ನೀಡುವ 'ಕೊಳವೆ ಬಾವಿ' ಯೋಜನೆಯಲ್ಲಿ ಕಳೆದ ಐದು ವರ್ಷಗಳಿಂದ ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಫಲಾನುಭವಿಗಳನ್ನು ಆಯ್ಕೆ ಮಾಡಲು ಇರುವ ಮಾನದಂಡಗಳೇನು ;

(ಇ) ಈ ಮಾನದಂಡಗಳನ್ನು ಉಲ್ಲಂಘನೆ ಮಾಡಿ ಆಯ್ಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಇದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಕರ್ನಾಟಕ ವಸತಿ ಶಾಲಾ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆ ಶಿಕ್ಷಕರ ಕುರಿತು

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೧೧೦೧ (೧೧೩೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ವಸತಿ ಶಾಲೆ ಸಂಘದ ಅಧೀನದಲ್ಲಿನ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆ ಆಧಾರದ ಶಿಕ್ಷಕರ ಸಂಖ್ಯೆ ಎಷ್ಟು ;

(ಆ) ಇವರು ಎಷ್ಟು ವರ್ಷಗಳಿಂದ ಕಾರ್ಯವನ್ನು ನಿರ್ವಹಿಸುತ್ತಿದ್ದಾರೆ ; ಇವರಿಗೆ ನೀಡುತ್ತಿರುವ ಗೌರವಧನ ಎಷ್ಟು ; (ವಿವರ ನೀಡುವುದು)

(ಇ) ಕಳೆದ ೫ ತಿಂಗಳಿಂದ ಗೌರವಧನವನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ಶಿಕ್ಷಕರ ಗೌರವಧನವನ್ನು ಬಿಡುಗಡೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಇವರಿಗೆ ಸೇವಾ ಭದ್ರತೆ ನೀಡಿ ಖಾಯಂಗೊಳಿಸಲು ಸರ್ಕಾರ ಆಲೋಚಿಸಿದೆಯೇ ; ಈ ಬಗ್ಗೆ ಸರ್ಕಾರದ ನಿಲುವೇನು ?

## ಮಾಜಿ ಸೈನಿಕರಿಗೆ ಭೂ ಮಂಜೂರಾತಿಯನ್ನು ಮಾಡದೆ ತಾರತಮ್ಯ ಮಾಡಿರುವ ಬಗ್ಗೆ

**ಶ್ರೀ ಎಂ.ಪಿ ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೦೨ (೧೨೬೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಕಳೆದ ಹತ್ತು ವರ್ಷಗಳಿಂದ ಎಷ್ಟು ಮಾಜಿ ಸೈನಿಕರಿಗೆ ಮಾಜಿ ಸೈನಿಕ ಕೋಟಾದಡಿಯಲ್ಲಿ ಭೂಮಿಯ ಮಂಜೂರಾತಿಯನ್ನು ನೀಡಲಾಗಿದೆ ; (ಹೆಸರಿನೊಂದಿಗೆ ಪೂರ್ಣ ವಿವರಗಳನ್ನು ನೀಡುವುದು)

(ಆ) ಸರ್ಕಾರಿ ಜಾಗವನ್ನು ಮಾಜಿ ಸೈನಿಕರ ಕೋಟಾದಡಿಯಲ್ಲಿ ಭೂ ಮಂಜೂರಾತಿಗಾಗಿ ಮನವಿ ಮಾಡಿ ಕಳೆದ ಹತ್ತು ವರ್ಷಗಳಿಂದ ಇಲ್ಲಿಯವರೆಗೆ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಇದರಲ್ಲಿ ವಿಲೇವಾರಿಯಾದ ಅರ್ಜಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ಕೊಡಗು ಜಿಲ್ಲೆಯಲ್ಲಿ ಭೂಮಿ ಇಲ್ಲದ ಮಾಜಿ ಸೈನಿಕರಿಗೆ ಕೃಷಿ ಭೂಮಿಯನ್ನು ಹಂಚಿಕೆ ಮಾಡಲು ಸರ್ಕಾರದ ಕ್ರಮಗಳೇನು ? (ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿ ಮಳೆಹಾನಿಯಿಂದ ಉಂಟಾಗಿರುವ ಸರ್ಕಾರಿ ರಸ್ತೆ / ಕಟ್ಟಡಗಳ ನಿರ್ಮಾಣದ ಬಗ್ಗೆ

**ಶ್ರೀ ಎಂ.ಪಿ ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೦೩ (೧೧೮೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಕೊಡಗು ಜಿಲ್ಲೆಯಲ್ಲಿ ಮಳೆ ಹಾನಿಯಿಂದ ಉಂಟಾದ ನಷ್ಟ ಸರಿಪಡಿಸಲು ಇಲಾಖೆಯ ರಸ್ತೆಗಳ ನಿರ್ಮಾಣ / ದುರಸ್ತಿ ಕಟ್ಟಡಗಳ ನಿರ್ಮಾಣ / ದುರಸ್ತಿ ಕಾಮಗಾರಿಗಳಿಗೆ ಇಲ್ಲಿಯವರೆಗೆ ಬಿಡುಗಡೆಯಾಗಿರುವ ಅನುದಾನ ಎಷ್ಟು; (ಪೂರ್ಣ ಕಾಮಗಾರಿಗಳ ವಿವರಗಳನ್ನು ನೀಡುವುದು)

(ಆ) ಇಲಾಖೆಗೆ ಬಿಡುಗಡೆಯಾದ ಹಣದಲ್ಲಿ ಇಲ್ಲಿಯವರೆವಿಗೂ ಖರ್ಚು ಮಾಡಲಾಗಿರುವ ಹಣ ಎಷ್ಟು? (ಕಾಮಗಾರಿಗಳ ಹೆಸರಿನೊಂದಿಗೆ ವಿವರಗಳನ್ನು ನೀಡುವುದು)

## ರಾಜ್ಯದ ಮುಜರಾಯಿ ದೇವಾಲಯಗಳ ಆಸ್ತಿ ರಕ್ಷಿಸುವ ಬಗ್ಗೆ

**ಶ್ರೀ ಎಂ.ಪಿ ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೦೪ (೧೨೩೬) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಮುಜರಾಯಿ "ಎ" ಗುಂಪಿನ ದೇವಾಲಯಗಳ ಒಟ್ಟು ಸಂಖ್ಯೆ ಹಾಗೂ ಇವುಗಳ ಸ್ಥಿರಾಸ್ತಿ ಆಸ್ತಿ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದ ಮುಜರಾಯಿ ದೇವಾಲಯಗಳಿಗೆ ಸಂಬಂಧಿಸಿದ ಜಮೀನುಗಳು ಒತ್ತುವರಿಯಾಗಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಒತ್ತುವರಿಯಾಗಿರುವ ಜಮೀನುಗಳನ್ನು ತೆರವುಗೊಳಿಸಲು ಸರ್ಕಾರದ ಕ್ರಮಗಳೇನು? (ಮಾಹಿತಿ ನೀಡುವುದು)

## ಮಡಿಕೇರಿಯಲ್ಲಿ ಗುಡ್ಡ / ಬರೆ ಕುಸಿತವಾಗಿರುವ ಬಗ್ಗೆ

**ಶ್ರೀ ಎಂ.ಪಿ ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೦೫ (೧೧೨೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆ ಮಡಿಕೇರಿಯಲ್ಲಿರುವ ಜಿಲ್ಲಾಧಿಕಾರಿಗಳ ಕಛೇರಿ ಪಕ್ಕದಲ್ಲಿನ ಬರೆ / ಗುಡ್ಡವು ಕುಸಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಪರಿಹಾರ ಕ್ರಮಗಳೇನು ; (ವಿವರ ನೀಡುವುದು)

(ಆ) ಸದರಿ ಪ್ರದೇಶವನ್ನು ಸರಿಪಡಿಸಲು ಬಿಡುಗಡೆಯಾದ ಮತ್ತು ಖರ್ಚಾದ ಅನುದಾನ ಎಷ್ಟು ; (ವಿವರ ನೀಡುವುದು)

(ಇ) ಈ ಪ್ರದೇಶದಲ್ಲಿ ಮುಂದೆ ಗುಡ್ಡ ಕುಸಿತಗಳಂತಹ ಪ್ರಕರಣಗಳನ್ನು ತಪ್ಪಿಸಲು ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಉಪ ನೋಂದಣಾಧಿಕಾರಿಗಳ ಕಛೇರಿಗಳ ಬಗ್ಗೆ

**ಶ್ರೀ ಸುನೀಲ್ ವಲ್ಯಾಪೂರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೧೦೬ (೧೯೭೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಯಲ್ಲಿ ಹೊಸ ತಾಲ್ಲೂಕುಗಳಲ್ಲಿ ಉಪ ನೋಂದಣಾಧಿಕಾರಿಗಳ ಕಛೇರಿಗಳು ಪ್ರಾರಂಭವಾಗಿವೆಯೇ ; ಆಗದಿದ್ದಲ್ಲಿ, ಕಾರಣವೇನು ; ಯಾವ ಕಾಲಮಿತಿಯಲ್ಲಿ ಪ್ರಾರಂಭಿಸಲಾಗುವುದು ;

(ಆ) ಕಳೆದ ಮೂರು ವರ್ಷಗಳಿಂದ ನೋಂದಾಯಿತವಾಗಿರುವ ಕಂದಾಯ ನಿವೇಶನಗಳೆಷ್ಟು ; ಇತರೆ ನೋಂದಾಯಿತ ದಾಖಲೆಗಳೆಷ್ಟು ? (ಪೂರ್ಣ ಮಾಹಿತಿ ನೀಡುವುದು)

## ಗೃಹ ಮಂಡಳಿ ಬಡಾವಣೆಗಳ ಬಗ್ಗೆ

**ಶ್ರೀ ಸುನೀಲ್ ವಲ್ಯಾಪೂರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೧೦೭ (೧೯೫೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಖಾಸಗಿ ಸಹಭಾಗಿತ್ವದಲ್ಲಿ ಗೃಹ ಮಂಡಳಿಯಿಂದ ಬಡಾವಣೆ ನಿರ್ಮಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಜಂಟಿ ಯೋಜನೆಗೆ ಹಾಕಿಕೊಂಡಿರುವ ಮಾನದಂಡಗಳೇನು ;

(ಆ) ಗೃಹ ಮಂಡಳಿಯಿಂದ ನಿರ್ಮಿಸಲಾಗುವ ವಸತಿ ಸಮುಚ್ಛಯ ಮತ್ತು ಬಡಾವಣೆಗಳಲ್ಲಿ ಸ್ಥಳೀಯರಿಗೆ ಯಾವ ರೀತಿಯ ಪ್ರಾತಿನಿಧ್ಯ ನೀಡಲಾಗುವುದು ;

(ಇ) ಕಳೆದ ಮೂರು ವರ್ಷಗಳಿಂದ ಕಲ್ಯಾಣ ಕರ್ನಾಟಕ ಜಿಲ್ಲೆಗಳಲ್ಲಿ ವಸತಿ ಇಲಾಖೆಯಿಂದ ಜಾರಿಯಾದ ಕಾರ್ಯಕ್ರಮಗಳು ಯಾವುವು ? (ವಿವರ ಮತ್ತು ಫಲಾನುಭವಿಗಳ ಪಟ್ಟಿ ನೀಡುವುದು)

## ವಿವಿಧ ಯೋಜನೆಗಳ ಫಲಾನುಭವಿಗಳಿಗೆ ಹಣ ಬಿಡುಗಡೆ ಮಾಡುವ ಬಗ್ಗೆ

**ಶ್ರೀ ಸುನೀಲ್ ವಲ್ಯಾಪೂರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೧೦೮ (೧೯೫೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ವಿವಿಧ ಯೋಜನೆಗಳಲ್ಲಿ ಫಲಾನುಭವಿಗಳಿಗೆ ಈವರೆಗೂ ವೃದ್ಧಾಪ್ಯ ವೇತನ, ಮನಸ್ವಿನಿ, ಮೈತ್ರಿ, ವಿಧವಾ ವೇತನ, ಸಂಧ್ಯಾ

ಸುರಕ್ಷಾ ಯೋಜನೆ ಹಾಗೂ ಇನ್ನಿತರ ಯೋಜನೆಗಳಿಗೆ ಹಣ ಬಿಡುಗಡೆಯಾಗದಿರವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಈವರೆವಿಗೂ ಹಣ ಬಿಡುಗಡೆಯಾಗದಿರಲು ಕಾರಣಗಳೇನು ;

(ಇ) ಸರ್ಕಾರವು ಫಲಾನುಭವಿಗಳಿಗೆ ಹಣ ಬಿಡುಗಡೆ ಮಾಡಲು ಕೈಗೊಂಡ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಎಸ್.ಎಲ್.ಆರ್ ಕಂಪನಿಯವರು ಸರ್ಕಾರಿ ಜಮೀನು ಒತ್ತುವರಿ ಬಗ್ಗೆ

**ಶ್ರೀ ಸುನೀಲ್ ವಲ್ಯಾಪೂರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೧೧೯ (೧೧೫೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಲೋಕಪ್ಪನಹೊಲ ಎಸ್.ಎಲ್.ಆರ್ ಕಂಪನಿಯವರು ಅನಧಿಕೃತವಾಗಿ ಸರ್ಕಾರಿ ಜಮೀನು ಒತ್ತುವರಿ ಮಾಡಿಕೊಂಡಿರುವುದು ಕರ್ಸಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಒತ್ತುವರಿ ಭೂಮಿಯನ್ನು ಸರ್ಕಾರ ವಶಕ್ಕೆ ಪಡೆದು ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗಿದೆಯೇ ;

(ಇ) ಹಾಗಿದ್ದಲ್ಲಿ, ತೆರವುಗೊಳಿಸಲು ಆಗುತ್ತಿರುವ ವಿಳಂಬಕ್ಕೆ ಕಾರಣಗಳೇನು ?

## ಅಭಿವೃದ್ಧಿ ನಿಗಮಗಳಲ್ಲಿನ ಸಿಬ್ಬಂದಿಗಳ ಕುರಿತು

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೧೧೦ (೧೨೩೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಅಭಿವೃದ್ಧಿ ನಿಗಮಗಳಲ್ಲಿ ಮಂಜೂರಾದ ಅಧಿಕಾರಿ / ನೌಕರರ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದವಾರು ಮಾಹಿತಿ ನೀಡುವುದು)

(ಆ) ಈ ಪೈಕಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಎಷ್ಟು ವರ್ಷಗಳಿಂದ ಈ ಹುದ್ದೆಗಳು ಖಾಲಿ ಉಳಿದಿವೆ ?

## ಲೋಕೋಪಯೋಗಿ ಇಲಾಖೆಗೆ ಒದಗಿಸಲಾದ ಅನುದಾನದ ಬಗ್ಗೆ

**ಶ್ರೀ ಆರ್.ಬಿ. ತಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೧೧೧ (೧೨೩೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಲೋಕೋಪಯೋಗಿ ಇಲಾಖೆಗೆ ಯಾವ ಶೀರ್ಷಿಕೆಯಡಿ ೨೦೧೪ ರಿಂದ ೨೦೨೦ ರವರೆಗೆ ಎಷ್ಟು ಅನುದಾನವನ್ನು ಒದಗಿಸಲಾಗಿದೆ ; ಇದರಲ್ಲಿ ವಿವಿಧ ಯೋಜನೆಗಳಿಗೆ ಖರ್ಚು ಮಾಡಲಾದ ಹಣವೆಷ್ಟು ; (ವರ್ಷವಾರು, ಜಿಲ್ಲಾವಾರು ಮಾಹಿತಿಯನ್ನು ಒದಗಿಸುವುದು)

(ಆ) ಲೋಕೋಪಯೋಗಿ ಇಲಾಖೆಯ ಗುತ್ತಿಗೆಗಳಲ್ಲಿ ಮೀಸಲಾತಿ ನಿಯಮಗಳನ್ನು ಪಾಲಿಸಲಾಗಿದೆಯೇ ; ಇದರನ್ವಯ ಯಾವ ಯಾವ ಜಿಲ್ಲೆಗಳಲ್ಲಿ ಯಾವ ಯಾವ ಕಾಮಗಾರಿಗಳನ್ನು ಗುತ್ತಿಗೆ ನೀಡಲಾಗಿದೆ ?

## ಕೋವಿಡ್ ಹಿನ್ನೆಲೆಯಲ್ಲಿ ಬಾಗಲಕೋಟೆಗೆ ಬಿಡುಗಡೆ ಮಾಡಲಾದ ಹಣ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೧೧೨ (೧೧೮೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋವಿಡ್ ಹಿನ್ನೆಲೆಯಲ್ಲಿ ಬಾಗಲಕೋಟೆ ಜಿಲ್ಲೆಗೆ ಬಿಡುಗಡೆ ಮಾಡಲಾದ ಹಣವೆಷ್ಟು ; ಈ ಪೈಕಿ ಎಸ್.ಡಿ.ಆರ್.ಎಫ್ ಅಡಿ ಬಿಡುಗಡೆಯಾದ ಹಣವೆಷ್ಟು ;

(ಆ) ಈ ಹಣವನ್ನು ಯಾವ ಯಾವ ಉದ್ದೇಶಗಳಿಗಾಗಿ ಖರ್ಚು ಮಾಡಲಾಗಿದೆ ?

## ಪ್ರವಾಹದಿಂದಾದ ಹಾನಿ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೧೧೩ (೧೧೮೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಜಿಲ್ಲೆಯಲ್ಲಿ ಉಂಟಾದ ಪ್ರವಾಹದಿಂದಾಗಿ ಸಂಭವಿಸಿದ ಹಾನಿಯ ಪ್ರಮಾಣವೆಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಪ್ರವಾಹಕ್ಕೆ ಸಿಲುಕಿದ ಜನರಿಗೆ ಸರ್ಕಾರ ಒದಗಿಸಿದ ಸೌಲಭ್ಯಗಳೇನು;

(ಇ) ಮನೆ, ಜಾನುವಾರುಗಳನ್ನು ಕಳೆದುಕೊಂಡವರಿಗೆ ಸರ್ಕಾರ ಪರಿಹಾರ ನೀಡಿದೆಯೇ ?

## ಮಳೆ ಮತ್ತು ಪ್ರವಾಹದಿಂದ ಸಂಭವಿಸಿದ ನಷ್ಟ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೧೧೪ (೧೧೮೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಸಂಭವಿಸಿದ ಭೀಕರ ಮಳೆ ಮತ್ತು ಪ್ರವಾಹದಿಂದಾಗಿ ಸಂಭವಿಸಿದ ನಷ್ಟದ ಪ್ರಮಾಣವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಭೀಕರ ಮಳೆ ಪ್ರಮಾಹದಿಂದಾಗಿ ನಿರ್ವಸಿತರಾದ ಕುಟುಂಬಗಳ ಸಂಖ್ಯೆ ಎಷ್ಟು ;

(ಇ) ಈ ಕುಟುಂಬಗಳಿಗೆ ಸರ್ಕಾರ ನೀಡಿದ ಪರಿಹಾರವೇನು ?

## ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ ಸ್ಥಳದ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು):–**

೧೧೧೫ (೧೧೨೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯವನ್ನು ೨೦೧೦ರಲ್ಲಿ ಕರ್ನಾಟಕ ವಿಶ್ವವಿದ್ಯಾಲಯದಿಂದ ಪ್ರತ್ಯೇಕಿಸಿ ಸ್ವತಂತ್ರ ವಿಶ್ವವಿದ್ಯಾಲಯವೆಂದು ಸರ್ಕಾರ ಘೋಷಿಸಿದ್ದು, ಈ ವಿಶ್ವವಿದ್ಯಾಲಯ ಅಸ್ತಿತ್ವದಲ್ಲಿರುವ ಭೂತರಾಮನಹಟ್ಟಿಯ ೧೭೬ ಎಕರೆ ಜಮೀನು ಕಾಯ್ದಿರಿಸಿದ ಅರಣ್ಯ (Reserve Forest) ಎಂದು ಕೇಂದ್ರ ಅರಣ್ಯ ಇಲಾಖೆ ಗುರುತಿಸಿರುವುದು ನಿಜವೇ ; ಇದರಿಂದಾಗಿ ಅಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಭವಿಷ್ಯ ಮತ್ತು ಕಟ್ಟಡ ನಿರ್ಮಾಣ ಚಟುವಟಿಕೆಗಳು ಅನಿಶ್ಚಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ವಿಶ್ವವಿದ್ಯಾಲಯವು ಹಿರೇಬಾಗೇವಾಡಿ ಗ್ರಾಮದ ಹತ್ತಿರ ೧೦೦ ಎಕರೆಯಷ್ಟು ಜಾಗ ಗುರುತಿಸಿದ್ದು ಇದನ್ನು ವಿಶ್ವವಿದ್ಯಾಲಯಕ್ಕೆ ವರ್ಗಾಯಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು ?

## ಕೊಡಗು ಜಿಲ್ಲೆಯ ನಾಪಂಡ ಕಾಡು ಬಳಿ ಸೇತುವೆ ನಿರ್ಮಾಣ ಮಾಡುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೧೧೬ (೧೧೭೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯ ಅವಂಡಿ ಗ್ರಾಮದ ನಾಪಂಡ ಕಾಡು ಎಂಬಲ್ಲಿ, ಮುಕ್ಕೋಡ್ಲು ಹೊಳೆಗೆ ಸೇತುವೆ ನಿರ್ಮಾಣವಾಗದಿರುವುದರಿಂದ ಜಿಲ್ಲೆಯಲ್ಲಿ ಸತತವಾಗಿ ಸಂಭವಿಸಿದ ಪ್ರಕೃತಿ ವಿಕೋಪ ಹಾಗೂ ಪ್ರವಾಹದ ಸಂದರ್ಭದಲ್ಲಿ ಆ ಭಾಗದ ಜನರ ಸಂಚಾರಕ್ಕೆ ತೊಂದರೆಯಾಗಿ ಸಾವು–ನೋವುಗಳು ಸಂಭವಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅತ್ಯವಶ್ಯಕವಾಗಿ ಮತ್ತು ತುರ್ತಾಗಿ ಆಗಬೇಕಾದ ಸದರಿ ಸೇತುವೆ ನಿರ್ಮಾಣದ ಬಗ್ಗೆ ಸರ್ಕಾರ ಇದುವರೆಗೂ ಕ್ರಮ ವಹಿಸದಿರಲು ಕಾರಣಗಳೇನು ;

(ಇ) ಯಾವ ಕಾಲಮಿತಿಯೊಳಗೆ ಸದರಿ ಸೇತುವೆ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳಲಾಗುವುದು ?

## ಅತಿವೃಷ್ಟಿಯಿಂದಾಗಿರುವ ಬೆಳೆ ಹಾನಿ ಬಗ್ಗೆ

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೧೧೭ (೧೧೭೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ಕೊಡಗು ಜಿಲ್ಲೆಯಲ್ಲಿ ಸುರಿದ ಧಾರಾಕಾರ ಮಳೆ ಹಾಗೂ ಭೂಕುಸಿತದಿಂದಾಗಿ ಬೆಳೆ ಹಾನಿಯಾಗಿ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಕಳೆದ ೩ ವರ್ಷಗಳಲ್ಲಿ ಎಷ್ಟು ವಿಸ್ತೀರ್ಣದ ಬೆಳೆ ಹಾನಿಗೊಳಗಾಗಿದೆ ಹಾಗೂ ಸದರಿ ನಷ್ಟದ ವಿವರ ನೀಡುವುದು;

(ಇ) ಜಿಲ್ಲೆಯಲ್ಲಿನ ರೈತರಿಗೆ ಕಳೆದ ೩ ವರ್ಷಗಳಲ್ಲಿ ಸರ್ಕಾರದಿಂದ ದೊರೆತಿರುವ ಪರಿಹಾರ, ನೆರವು ಹಾಗೂ ಸೌಲಭ್ಯಗಳೇನು ? (ಸಂಪೂರ್ಣ ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿ ಕಂದಾಯ ಇಲಾಖೆಯ ಕಡತ ವಿಲೇವಾರಿಯಲ್ಲಿ ವಿಳಂಬ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೧೧೮ (೧೧೬೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಕಂದಾಯ ಇಲಾಖೆಯ ಕಡತಗಳ ವಿಲೇವಾರಿಗೆ ಸರ್ವರ್ ನಿಧಾನಗತಿ ಸೇರಿದಂತೆ ಇತರೆ ತಾಂತ್ರಿಕ ಕಾರಣಗಳನ್ನು ನೀಡಿ ಸಾಕಷ್ಟು ವಿಳಂಬ ಮಾಡುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಕುರಿತು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ವಿಳಂಬ ನೀತಿಯಿಂದಾಗಿ ದಲ್ಲಾಳಿಗಳ ಹಾವಳಿ ಹೆಚ್ಚಾಗಿ, ಮಿತಿಮೀರಿದ ಭ್ರಷ್ಟಾಚಾರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ದಲ್ಲಾಳಿಗಳು ಹಾಗೂ ಭ್ರಷ್ಟಾಚಾರದಲ್ಲಿ ತೊಡಗಿದ್ದ ಎಷ್ಟು ನೌಕರರ ವಿರುದ್ಧ ಪ್ರಕರಣಗಳು ದಾಖಲಾಗಿವೆ? (ವಿವರ ನೀಡುವುದು)

## ಡಾ॥ ಬಿ.ಆರ್. ಅಂಬೇಡ್ಕರ್ ಯೋಜನೆ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೧೯ (೧೨೫೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಡಾ॥ ಬಿ.ಆರ್. ಅಂಬೇಡ್ಕರ್ ಯೋಜನೆಗಳಾದ ಐ.ಎ.ಸ್.ಬಿ. (ಉದ್ಯಮ ಶೀಲತೆ ಯೋಜನೆ) ಯೋಜನೆ ಅಡಿ ಎಷ್ಟು ಅರ್ಜಿಗಳು ಬಂದಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಯೋಜನೆಯಡಿ ಸಾಲ ಸೌಲಭ್ಯ ಪಡೆದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಬೀದರ್ ಜಿಲ್ಲೆಯ ಮಿನಿ ವಿಧಾನ ಸೌಧದ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೨೦ (೧೨೫೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ಯಾವ ಯಾವ ತಾಲ್ಲೂಕುಗಳಲ್ಲಿ ಮಿನಿ ವಿಧಾನಸೌಧ ನಿರ್ಮಿಸಲಾಗಿದೆ ; ಸದರಿ ಮಿನಿ ವಿಧಾನ ಸೌಧಗಳ ನಿರ್ಮಾಣಕ್ಕೆ ಖರ್ಚಾದ ಮೊತ್ತ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕೆಲವು ತಾಲ್ಲೂಕುಗಳಲ್ಲಿ ಮಿನಿ ವಿಧಾನ ಸೌಧಗಳನ್ನು ಇನ್ನು ನಿರ್ಮಿಸದೇ ಇರುವುದಕ್ಕೆ ಕಾರಣಗಳೇನು ; ಮಿನಿ ವಿಧಾನಸೌಧ ಕಾಮಗಾರಿ ಯಾವ ಹಂತದಲ್ಲಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೨೧ (೧೨೫೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯಡಿ ಕಳೆದ ಮೂರು ವರ್ಷಗಳಲ್ಲಿ ಮುಂಗಾರು ಮತ್ತು ಹಿಂಗಾರು ಹಂಗಾಮಿನ ಯಾವ ಯಾವ ಬೆಳೆಗಳಿಗೆ ಎಷ್ಟು ಪರಿಹಾರ ನೀಡಲಾಗಿದೆ;

(ಆ) ರೈತರು ಕಟ್ಟಿದ ವಿಮಾ ಕಂತು ಮತ್ತು ಪರಿಹಾರದ ಮೊತ್ತ ಎಷ್ಟು ? (ಮಾಹಿತಿ ನೀಡುವುದು)

## ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮ ನಿರ್ದೇಶನ ಹೊಂದಿದವರು):–**

೧೧೨೨ (೧೧೩೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೦-೨೦೨೧ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಿಂದ ನಡೆಸಲಾಗುತ್ತಿರುವ ವಸತಿ ಶಾಲೆಗಳಲ್ಲಿ ಆಯಾಯ ತಾಲ್ಲೂಕಿನ ವಿದ್ಯಾರ್ಥಿಗಳಿಗೆ ಶೇ.೨೫ ರಷ್ಟು ಸೀಟುಗಳನ್ನು ಹಂಚಿಕೆ ಮಾಡುವುದನ್ನು ಜಾರಿಗೊಳಿಸಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಈವರೆಗೆ ಎಷ್ಟು ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆದಿದ್ದಾರೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಜಾರಿಗೊಳಿಸಲಾಗದಿದ್ದರೆ, ಕಾರಣವೇನು ?

## ರಾಜ್ಯದಲ್ಲಿ ಪ್ರಸ್ತುತ ಜಾರಿಯಲ್ಲಿರುವ ಬೆಳೆ ವಿಮೆ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮ ನಿರ್ದೇಶನ ಹೊಂದಿದವರು):–**

೧೧೨೩ (೧೧೩೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಜಾರಿಯಲ್ಲಿರುವ ಬೆಳೆ ವಿಮೆ ಯಾವುದು; ಅಧಿಸೂಚಿತ ಬೆಳೆಗಳಿಗೆ ನಿಗಧಿಪಡಿಸಿದ ಪ್ರೀಮಿಯಂ ದರಗಳೇನು; ಬೆಳೆ ವಿಮೆಯ ಪರಿಹಾರ ಪಡೆಯಲು ಬೆಳೆ ಸಮೀಕ್ಷೆಗೆ ಯಾವ ತಂತ್ರಜ್ಞಾನ ಬಳಸಲಾಗಿದೆ ; ಇದರಿಂದ ರೈತರಿಗೆ ಉಪಯೋಗವಾಗಿದೆಯೇ ;

(ಆ) ಉಪಯೋಗವಾಗಿದ್ದಲ್ಲಿ, ಈವರೆಗೆ ಎಷ್ಟು ರೈತರು ಬೆಳೆ ವಿಮೆಯನ್ನು ಪಡೆದಿದ್ದಾರೆ ; ಪರಿಹಾರದ ಮೊತ್ತವೆಷ್ಟು ;

(ಇ) ಇತ್ತೀಚೆಗೆ ಬಿಡುಗಡೆ ಮಾಡಿರುವ ಬೆಳೆ ಸಮೀಕ್ಷಾ ತಂತ್ರಜ್ಞಾನವು ರೈತ ಸ್ನೇಹಿಯಾಗಿದೆಯೇ ; ಹಾಗಿದ್ದಲ್ಲಿ, ಬೆಳೆ ಸಮೀಕ್ಷಾ ತಂತ್ರಜ್ಞಾನವನ್ನು ಬಳಸಲಾಗದ ರೈತರಿಗೆ ಸ್ಥಳೀಯವಾಗಿ ತರಬೇತಿಯನ್ನು ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ಮೊಬೈಲ್ ಬಳಕೆ ಮಾಡದ ರೈತರ ಬೆಳೆ ಸಮೀಕ್ಷೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು; ಬೆಳೆ ಸಮೀಕ್ಷೆಯಲ್ಲಿ ಲೋಪ–ದೋಷವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? (ಜಿಲ್ಲಾವಾರು ವರದಿ ನೀಡುವುದು)

## ೨೦೧೯–೨೦ ನೇ ಸಾಲಿನಲ್ಲಿ ನಬಾರ್ಡ್ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಯ ಬಗ್ಗೆ

**ಶ್ರೀ ಯು.ಬಿ. ವೆಂಕಟೇಶ್ (ನಾಮ ನಿರ್ದೇಶನ ಹೊಂದಿದವರು):–**

೧೧೨೪ (೧೨೩೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯–೨೦ನೇ ಸಾಲಿನಲ್ಲಿ ನಬಾರ್ಡ್ ಯೋಜನೆಯಡಿಯಲ್ಲಿ ಕೈಗೊಂಡಿರುವ ರಸ್ತೆ, ಸೇತುವೆ ಮತ್ತು ಕಟ್ಟಡ ಕಾಮಗಾರಿಗಳು ಎಷ್ಟು ; ಇದರಲ್ಲಿ ಎಷ್ಟು ಕಾಮಗಾರಿಗಳು ಪೂರ್ಣಗೊಂಡಿರುತ್ತವೆ; ಉಳಿಕೆ ಕಾಮಗಾರಿಗಳು ಎಷ್ಟು ;

(ಆ) ಕಳೆದ ಮೂರು ವರ್ಷಗಳಿಂದ ನಬಾರ್ಡ್ ಯೋಜನೆಯಡಿಯಲ್ಲಿ ಪೂರ್ಣಗೊಳ್ಳದೆ ಉಳಿದಿರುವ ಕಾಮಗಾರಿಗಳು ಎಷ್ಟು ; ಇವು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಇವುಗಳನ್ನು ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಪೂರ್ಣಗೊಳ್ಳದೆ ಇರುವ ಕಾಮಗಾರಿಗಳಿಂದ ಸರ್ಕಾರಕ್ಕೆ ಆದ ನಷ್ಟ ಎಷ್ಟು ; ಇದನ್ನು ಗುತ್ತಿಗೆದಾರರಿಂದ ವಸೂಲು ಮಾಡಲಾಗುತ್ತಿದೆಯೇ ; ಹಾಗಿದ್ದಲ್ಲಿ, ಈವರೆಗೆ ಎಷ್ಟು ಮೊತ್ತವನ್ನು ವಸೂಲು ಮಾಡಲಾಗಿದೆ ? (ವಿವರವನ್ನು ನೀಡುವುದು)

## ೨೦೧೮-೧೯ರಿಂದ ೨೦೨೦-೨೧ರಲ್ಲಿ ಕೊಡಗಿನಲ್ಲಿ ಪ್ರವಾಹದಿಂದ ಉಂಟಾದ ಹಾನಿಯ ಬಗ್ಗೆ

**ಶ್ರೀ ಯು. ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :-**

೧೧೨೫ (೧೨೩೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೮-೧೯ರಿಂದ ೨೦೨೦-೨೧ನೇ ಸಾಲಿನಲ್ಲಿ ಕೊಡಗಿನಲ್ಲಿ ಉಂಟಾದ ಮಳೆ ಮತ್ತು ಪ್ರವಾಹದಿಂದ ಎಷ್ಟು ಜನರು ಮತ್ತು ಜಾನುವಾರುಗಳು ಸಾವನ್ನಪ್ಪಿದ್ದಾರೆ ;

(ಆ) ಎಷ್ಟು ಮನೆಗಳು, ಕಟ್ಟಡಗಳು, ರಸ್ತೆಗಳು, ಆಸ್ತಿ-ಪಾಸ್ತಿಗಳು ಕೊಚ್ಚಿಕೊಂಡು ಹೋಗಿರುತ್ತವೆ ; ಇದರಿಂದ ಪ್ರತಿ ವರ್ಷ ಉಂಟಾಗುತ್ತಿರುವ ನಷ್ಟದ ಪ್ರಮಾಣವೆಷ್ಟು ;

(ಇ) ಸಂಕಷ್ಟಕ್ಕೆ ಗುರಿಯಾದ ಜನರಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ನೀಡಿರುವ ಮೊತ್ತವೆಷ್ಟು ;

(ಈ) ಯಾರಿಗೆ ಎಷ್ಟು ಮೊತ್ತದ ಪರಿಹಾರ ನೀಡಲಾಗಿದೆ ; (ಗ್ರಾಮ ಪಂಚಾಯಿತಿವಾರು ಮಾಹಿತಿ ನೀಡುವುದು)

(ಉ) ಪರಿಹಾರ ನೀಡದಿದ್ದರೆ, ಕಾರಣಗಳೇನು ?

## ಕೃಷಿ ಯಂತ್ರೋಪಕರಣಗಳನ್ನು ರೈತರಿಗೆ ಒದಗಿಸುವ ಕುರಿತು

**ಶ್ರೀ ಸಿ.ಪಿ. ಯೋಗೇಶ್ವರ್ (ನಾಮನಿರ್ದೇಶನ ಹೊಂದಿದವರು) :-**

೧೧೨೬ (೧೨೬೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೯-೨೦ನೇ ಸಾಲಿನಲ್ಲಿ ರಾಜ್ಯದಲ್ಲಿ ಕೃಷಿ ಯಂತ್ರೋಪಕರಣಗಳನ್ನು ಬಾಡಿಗೆ ಆಧಾರದ ಮೇಲೆ ರೈತರಿಗೆ ಒದಗಿಸಲಾಗುತ್ತಿದೆಯೇ ;

(ಆ) ಹಾಗಿದ್ದಲ್ಲಿ, ರೈತರಿಗೆ ಅನುಕೂಲವಾಗುವಂತೆ ಸದರಿ ಕೃಷಿ ಯಂತ್ರೋಪಕರಣಗಳ ಕೇಂದ್ರಗಳನ್ನು ಕೃಷಿ ಕೇಂದ್ರ ಹೋಬಳಿ, ಗ್ರಾಮ ಪಂಚಾಯಿತಿ ಸ್ಥಾನಗಳಲ್ಲಿ ತೆರೆಯಲಾಗಿದೆಯೇ ;

(ಇ) ಈ ಕೃಷಿ ಯಂತ್ರೋಪಕರಣ ಕೇಂದ್ರಗಳಲ್ಲಿ ರೈತರಿಗೆ ಯಾವ ಯಾವ ಯಾಂತ್ರಿಕ ಸಲಕರಣೆಗಳನ್ನು ಒದಗಿಸಲಾಗಿದೆ ? (ಮಾಹಿತಿ ನೀಡುವುದು)

## ವಸತಿ ಶಾಲೆಗಳ ಕುರಿತು

**ಶ್ರೀ ಸಿ.ಪಿ. ಯೋಗೇಶ್ವರ್ (ನಾಮನಿರ್ದೇಶನ ಹೊಂದಿದವರು) :-**

೧೧೨೭ (೧೨೬೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳ ಸಂಖ್ಯೆ ಎಷ್ಟು ; (ಮಾಹಿತಿ ಒದಗಿಸುವುದು)

(ಆ) ಸದರಿ ಶಾಲೆಗಳಲ್ಲಿ ಮಂಜೂರಾಗಿರುವ ಬೋಧಕ/ಬೋಧಕೇತರ ಹಾಗೂ ಖಾಲಿ ಇರುವ ಬೋಧಕ/ಭೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ; (ವಸತಿ ಶಾಲೆಗಳ ಮಾಹಿತಿ ನೀಡುವುದು)

(ಇ) ಸರ್ಕಾರಿ ಶಾಲೆಗಳಲ್ಲಿನ ಬೋಧಕ/ಬೋಧಕೇತರರಿಗೆ ನೀಡುತ್ತಿರುವ ಸೌಲಭ್ಯಗಳನ್ನು ಮೇಲ್ಕಂಡ ವಸತಿ ಶಾಲೆಗಳಲ್ಲಿ ಖಾಯಂ ಬೋಧಕ/ಬೋಧಕೇತರರಿಗೆ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ವಿಲೀನಗೊಳಿಸಲು ಇರುವ ಕಾನೂನಿನ ತೊಡಕುಗಳೇನು ? (ವಿವರ ನೀಡುವುದು)

## ಉತ್ತರ ಕರ್ನಾಟಕ ಜಿಲ್ಲೆಗಳಲ್ಲಿ ಇತ್ತೀಚೆಗೆ ಪ್ರವಾಹ ಉಂಟಾದ ಕುರಿತು

**ಶ್ರೀ ಸಿ.ಪಿ. ಯೋಗೇಶ್ವರ್ (ನಾಮನಿರ್ದೇಶನ ಹೊಂದಿದವರು) :–**

೧೧೨೮ (೧೨೬೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ ಉತ್ತರ ಕರ್ನಾಟಕ ಜಿಲ್ಲೆಗಳಲ್ಲಿ ಉಂಟಾದ ಜಲ ಪ್ರಳಯದಲ್ಲಿ ಒಟ್ಟು ಎಷ್ಟು ಮನೆಗಳು ಪೂರ್ಣ ಪ್ರಮಾಣದಲ್ಲಿ ನಾಶ ಹೊಂದಿರುತ್ತವೆ ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಪೂರ್ಣ ಪ್ರಮಾಣದಲ್ಲಿ ಮನೆ ಕಳೆದುಕೊಂಡವರಿಗೆ ನೀಡಿದ ಪರಿಹಾರದ ಮೊತ್ತವೆಷ್ಟು ;

(ಇ) ಪರಿಹಾರ ನೀಡಲು ಬಾಕಿ ಇರುವವರ ಸಂಖ್ಯೆ ಎಷ್ಟು ; ಎಷ್ಟು ಜನರಿಗೆ ಪರಿಹಾರ ನೀಡಲಾಗಿದೆ ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಎಷ್ಟು ಮನೆಗಳು ಭಾಗಶಃ ನಾಶವಾಗಿವೆ ; ಈ ಪೈಕಿ ಎಷ್ಟು ಜನರಿಗೆ ಪರಿಹಾರ ನೀಡಲಾಗುವುದು ; ಭಾಗಶಃ ಮನೆ ಕಳೆದುಕೊಂಡವರಿಗೆ ನೀಡಿದ ಪರಿಹಾರ ಮೊತ್ತವೆಷ್ಟು ;

(ಉ) ಭೂಕುಸಿತದಿಂದ ಎಷ್ಟು ಎಕರೆ ರೈತರ ಭೂಮಿ ನಾಶವಾಗಿದೆ ; ಭೂಮಿ ಕಳೆದುಕೊಂಡ ರೈತರಿಗೆ ನೀಡಿದ ಪರಿಹಾರದ ಮೊತ್ತವೆಷ್ಟು ; ಬದಲಿ ಭೂಮಿ ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಊ) ಈ ಜಲ ಪ್ರಳಯಕ್ಕೆ ದಾನಿಗಳಿಂದ ಮತ್ತು ಸಂಘ ಸಂಸ್ಥೆಗಳಿಂದ ಬಂದ ದೇಣಿಗೆ ಎಷ್ಟು ; ಇದನ್ನು ಯಾವ ಯಾವ ಉದ್ದೇಶಕ್ಕೆ ಬಳಸಿಕೊಳ್ಳಲಾಗಿದೆ ; ಜಲ ಪ್ರಳಯದಿಂದ ರಸ್ತೆ, ಸೇತುವೆ, ಸಾರ್ವಜನಿಕ ಕಟ್ಟಡಗಳಿಗೆ ಆಗಿರುವ ಒಟ್ಟು ನಷ್ಟದ ಮೊತ್ತವೆಷ್ಟು ? (ವಿವರ ನೀಡುವುದು)

## ರಾಷ್ಟ್ರೀಯ ಹೆದ್ದಾರಿ ಸುಂಕ ಪಾವತಿ ಕುರಿತು

**ಶ್ರೀ ಸಿ.ಪಿ. ಯೋಗೇಶ್ವರ್ (ನಾಮನಿರ್ದೇಶನ ಹೊಂದಿದವರು) :–**

೧೧೨೯ (೧೨೬೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಷ್ಟ್ರೀಯ ಹೆದ್ದಾರಿ ಸುಂಕ ಪಾವತಿ ಕೇಂದ್ರಗಳಲ್ಲಿ ಮತ್ತು ಇತರೆಡೆಗಳಲ್ಲಿ ಜನಪ್ರತಿನಿಧಿಗಳ ಮತ್ತು ಗಣ್ಯ ವ್ಯಕ್ತಿಗಳಿಗೆ ಕಾರ್‌ಪಾಸ್ ನೀಡಲಾಗಿದ್ದರೂ ಸಹ ಪ್ರತ್ಯೇಕವಾಗಿ ಫಾಸ್ಟ್‌ಟ್ಯಾಗ್ ಅಳವಡಿಸಿಕೊಳ್ಳುವ ಅವಶ್ಯಕತೆ ಇದೆಯೇ ;

(ಆ) ಜನಪ್ರತಿನಿಧಿಗಳು/ಗಣ್ಯವ್ಯಕ್ತಿಗಳು ಗರಿಷ್ಠ ಎಷ್ಟು ವಾಹನಗಳಿಗೆ ಫಾಸ್ಟ್‌ಟ್ಯಾಗ್ / ಹೆದ್ದಾರಿ ಸುಂಕ ವಿನಾಯಿತಿ ಪಾಸ್ ಪಡೆದುಕೊಳ್ಳಬಹುದು ?

# ಕಾರವಾರ ಜಿಲ್ಲೆಯಲ್ಲಿ ಜಿಲ್ಲಾಡಳಿತ ಕಛೇರಿ ಹಾಗೂ ತಾಲ್ಲೂಕು ಕಛೇರಿಯಲ್ಲಿ ಭ್ರಷ್ಟಾಚಾರದ ಬಗ್ಗೆ

**ಶ್ರೀ ಘೊಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೩೦ (೧೧೬೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಕೆಲವೊಂದು ಸಿಬ್ಬಂದಿ ಜನರಿಂದ ಲಕ್ಷಾಂಕರ ರೂಪಾಯಿ ಹಣ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಜೋಯಿಡಾ ತಹಶೀಲ್ದಾರ ಕಛೇರಿಯಲ್ಲಿ ಇದೇ ತರಹದ ವರ್ತನೆ ಮಾಡುತ್ತಿರುವ ಸಿಬ್ಬಂದಿ ಮೇಲೆ ಜನರೇ ಎ.ಸಿ.ಬಿ ಗೆ ದೂರು ನೀಡಿ ದಾಖಲೆ ಸಮೇತ ಹಿಡಿದುಕೊಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಇ) ಈ ರೀತಿ ಪದೇ ಪದೇ ಕಂದಾಯ ಇಲಾಖೆಯಲ್ಲಿ ಆಗುತ್ತಿರುವ ಘಟನೆಗೆ ಯಾರು ಹೊಣೆಗಾರರು ; ಕೆಲವೊಂದು ಸಿಬ್ಬಂದಿ ಈ ರೀತಿ ಅವ್ಯವಹಾರ ಮಾಡುತ್ತಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದ್ದು, ಅನಾವಶ್ಯಕವಾಗಿ ಅಧಿಕಾರಿಗಳ ಹೆಸರು ಹೇಳಿ ಹಣ ವಸೂಲಿ ಮಾಡುವುದು ಅಧಿಕಾರಿಗಳ ಗಮನಕ್ಕೆ ಬಂದಿರುತ್ತದೆಯೇ ; (ವಿವರ ನೀಡುವುದು)

(ಈ) ಇಲಾಖೆಯಲ್ಲಿ ಈ ರೀತಿ ಅವ್ಯವಹಾರ ಮಾಡುತ್ತಿರುವವರು ಯಾರು ; ಇವರ ವಿರುದ್ಧ ಸೂಕ್ತ ತನಿಖೆ ಮಾಡಲಾಗುವುದೇ ; ಈ ಬಗ್ಗೆ ಸೂಕ್ತ ಕ್ರಮ ಕೈಗೊಂಡು ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲಾಗುವುದೇ ? (ವಿವರ ನೀಡುವುದು)

## ಆಧಾರ್ ಕಾರ್ಡ್ ಕೇಂದ್ರ ಸ್ಥಾಪಿಸುವ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೩೧ (೧೨೮೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಆಧಾರ್‌ಕಾರ್ಡ್ ಮಾಡಿಕೊಳ್ಳಲು ಸಾರ್ವಜನಿಕರು/ವಿದ್ಯಾರ್ಥಿಗಳು ಅಲೆದಾಡುತ್ತಿದ್ದು, ಕೆಲವೊಂದು ತಾಲ್ಲೂಕಿನಲ್ಲಿ ಒಂದೇ ಕೇಂದ್ರ ಇರುವುದರಿಂದ ಜನರು ತೊಂದರೆಗೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ ; (ವಿವರ ನೀಡುವುದು)

(ಆ) ಜಿಲ್ಲೆಯ ವಿವಿಧ ತಾಲ್ಲೂಕಿನಲ್ಲಿ ಚಾಲನೆಯಲ್ಲಿರುವ ಆಧಾರ್ ಕಾರ್ಡ್ ಕೇಂದ್ರಗಳಾವುವು ; (ತಾಲ್ಲೂಕುವಾರು/ಜಿಲ್ಲಾವಾರು ವಿವರ ನೀಡುವುದು)

(ಇ) ಸಾರ್ವಜನಿಕ ಹಿತದೃಷ್ಟಿಯಿಂದ ಪ್ರತಿಯೊಂದು ತಾಲ್ಲೂಕಿನಲ್ಲಿ ಕನಿಷ್ಠ ೨ ರಿಂದ ೩ ಆಧಾರ್ ಕಾರ್ಡ್ ಕೇಂದ್ರಗಳನ್ನು ಸ್ಥಾಪನೆ ಮಾಡಲು ಕ್ರಮ ಕೈಗೊಳ್ಳಲಾಗುವುದೇ ?

## ಜೋಯಿಡಾ ತಾಲ್ಲೂಕಿನ ಅಭಿವೃದ್ಧಿ ಕಾಮಗಾರಿಗಳಲ್ಲಿ ಅವ್ಯವಹಾರದ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೩೨ (೧೨೦೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯ ಹಳಿಯಾಳ/ಜೋಯಿಡಾ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಲೋಕೋಪಯೋಗಿ ಇಲಾಖೆಯಿಂದ

೨೦೧೭–೧೮ನೇ ಸಾಲಿನಿಂದ ಇಲ್ಲಿವರೆಗೆ ಬಂದಿರುವ ಅನುದಾನದ ವಿವರ ಶೀರ್ಷಿಕೆವಾರು ನೀಡುವುದು ಹಾಗೂ ಸದರಿ ಅನುದಾನಕ್ಕೆ ಕೈಗೊಂಡ ಕಾಮಗಾರಿಗಳು ಯಾವುವು ; (ವಿವರ ಹಾಗೂ ಆಡಿಟ್ ಪ್ರತಿಯೊಂದಿಗೆ ಕಾಮಗಾರಿಯ ಅಂದಾಜು ಪ್ರತಿ, ಬಿಲ್ ಪ್ರತಿ, ಎಂ.ಬಿ. ಪ್ರತಿ ಹಾಗೂ ಕಾಮಗಾರಿಯ ಫೋಟೋ ಸಮೇತ ತಾಲ್ಲೂಕುವಾರು/ ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಜೋಯಿಡಾ ತಾಲ್ಲೂಕಿನಲ್ಲಿ ಆಗಿರುವ ಕಾಮಗಾರಿಯಲ್ಲಿ ಬಹಳಷ್ಟು ಅವ್ಯವಹಾರಗಳು ಆಗಿರುತ್ತದೆಯೆಂದು ಸಾರ್ವಜನಿಕರು ಪ್ರತಿಭಟನೆ ಮಾಡಿದ್ದು, ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಇಲ್ಲಿಯವರೆಗೆ ಯಾವುದೇ ಕ್ರಮ ಜರುಗಿಸದೇ ನುಣುಚಿಕೊಳ್ಳುವ ಪ್ರವೃತ್ತಿ ತೋರಿಸಿರುವುದರಿಂದ ಸದರಿ ವಿಷಯದಲ್ಲಿ ಸರ್ಕಾರ ಲೋಕಾಯುಕ್ತರಿಂದ ತನಿಖೆ ಮಾಡಿಸುವುದೇ ; (ವಿವರ ನೀಡುವುದು)

(ಇ) ಹಳಿಯಾಳ ತಾಲ್ಲೂಕಿನ ಜನಗಾ, ಗರಡೊಳ್ಳಿ, ಭಾಗವತಿ, ಸಾಂಬ್ರಾಣಿ ಮುಂತಾದ ಕಡೆಗೂ ಆಗಿರುವ ಕಾಮಗಾರಿಯಲ್ಲಿ ಬಹಳಷ್ಟು ಅವ್ಯವಹಾರಗಳು ಆಗಿರುತ್ತದೆಯೆಂದು ತಿಳಿದು ಬಂದಿದ್ದು, ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರೂ ಸರಿಯಾದ ರೀತಿಯಲ್ಲಿ ಸ್ಪಂದಿಸದೆ ಸರ್ಕಾರದಿಂದ ಬಂದ ಕೋಟ್ಯಾಂತರ ರೂಪಾಯಿ ಅವ್ಯವಹಾರವಾಗಿರುವ ಬಗ್ಗೆ ಸೂಕ್ತ ತನಿಖೆ ಮಾಡುವರೇ ? (ವಿವರ ನೀಡುವುದು)

# ರಸ್ತೆ ಕಾಮಗಾರಿಯಲ್ಲಿ ಕೋಟ್ಯಾಂತರ ರೂಪಾಯಿ ಅವ್ಯವಹಾರದ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೩೩ (೧೨೦೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯ ಹಳಿಯಾಳ ತಾಲ್ಲೂಕಿನ ಕೆಸರೊಳ್ಳಿಯಿಂದ ತೇರಗಾಂವ ಗ್ರಾಮದವರಿಗೆ ಮುಖ್ಯ ರಸ್ತೆ ಕಾಮಗಾರಿ ಪ್ರಾರಂಭಗೊಂಡು ಸಂಪೂರ್ಣ ಹಾಳಾಗಿದ್ದು, ಇದಕ್ಕೆ ಕೋಟ್ಯಾಂತರ ರೂಪಾಯಿ ಅವ್ಯವಹಾರವಾಗಿದ್ದು ಸರ್ಕಾರ ಕೂಡಲೇ ಕ್ರಮಕೈಗೊಳ್ಳುವುದೇ ; (ವಿವರ ನೀಡುವುದು)

(ಆ) ಸದರಿ ಕಾಮಗಾರಿಯನ್ನು ನಿರ್ವಹಿಸುತ್ತಿರುವ ಗುತ್ತಿಗೆದಾರರು ಯಾರು ; ಗುತ್ತಿಗೆ ನೀಡುವಲ್ಲಿ ಅನುಸರಿಸಿರುವ ಮಾನದಂಡವೇನು ; ಕಾಮಗಾರಿಯ ಗುಣಮಟ್ಟವನ್ನು ಪರೀಕ್ಷೆ ಮಾಡಲಾಗಿತ್ತೇ ; ಕಾಮಗಾರಿ ಕಳಪೆ ಗುಣಮಟ್ಟದಿಂದ ಕೂಡಿರಲು ಕಾರಣವೇನು ;

(ಇ) ರಸ್ತೆಯ ಗುಣಮಟ್ಟ ಹಾಗೂ ಮಣ್ಣು ಪರೀಕ್ಷೆ ಮಾಡಲಾಗಿದೆಯೇ ; ರಸ್ತೆ ಕಾಮಗಾರಿ ಮುಗಿದ ೧೫ ದಿವಸದಲ್ಲೇ ರಸ್ತೆ ಹಾಳಾಗಲು ಕಾರಣವೇನು ;

(ಈ) ಮಂಜೂರಾದ ಮಾರ್ಗ ಹಾಗೂ ಅಂದಾಜು ಪಟ್ಟಿಯ ಪ್ರಕಾರ ಕಾಮಗಾರಿ ನಡೆದಿದೆಯೇ ; (ಕಾಮಗಾರಿ ಪೂರ್ಣ ವಿವರದ ಮಾಹಿತಿ ನೀಡುವುದು)

(ಉ) ಸದರಿ ಕಾಮಗಾರಿಯಲ್ಲಿ ಕೋಟ್ಯಾಂತರ ರೂಪಾಯಿ ಅವ್ಯವಹಾರ ಆಗಿರುವುದರಿಂದ ಎಷ್ಟು ದಿನದಲ್ಲಿ ಸಂಬಂಧಿಸಿದವರ ಮೇಲೆ ಕ್ರಮ ತೆಗೆದುಕೊಳ್ಳಲಾಗುವುದು ; ಸದರಿ ವಿಷಯದಲ್ಲಿ ನಿಷ್ಕಾಳಜಿ ಮಾಡಿದ್ದಲ್ಲಿ ಮುಂದೆ ಕೋಟ್ಯಾಂತರ ರೂಪಾಯಿಯ ಅಭಿವೃದ್ಧಿ ಕಾಮಗಾರಿಯ ಅನುದಾನ ಇದೇ ರೀತಿ ಅವ್ಯವಹಾರಕ್ಕೆ ಆಸ್ಪದ ಮಾಡಿಕೊಟ್ಟಂತಾಗುವುದಿಲ್ಲವೇ ?

## ಯಾದಗಿರಿಯ ಗುರುಸುಣಗಿ ಬ್ರಿಡ್ಜ್–ಕಂ–ಬ್ಯಾರೇಜ್‌ನಲ್ಲಿ ಮೃತಪಟ್ಟವರ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೩೪ (೧೨೬೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಾದಗಿರಿ ನಗರದ ಹೊರವಲಯದ ಗುರುಸುಣಗಿ ಬ್ರಿಡ್ಜ್–ಕಂ–ಬ್ಯಾರೇಜ್‌ನಲ್ಲಿ ಇತ್ತೀಚಿಗೆ ೪ ಬಾಲಕರು ಮುಳುಗಿ ಮೃತಪಟ್ಟ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮೃತಪಟ್ಟ ೪ ಬಾಲಕರ ಕುಟುಂಬ ವರ್ಗದವರಿಗೆ ಸರ್ಕಾರದಿಂದ ಪರಿಹಾರ ಧನವನ್ನು ನೀಡಲಾಗಿದೆಯೇ ;

(ಇ) ಪ್ರತಿ ಕುಟುಂಬಕ್ಕೂ ಪರಿಹಾರ ರೂಪದಲ್ಲಿ ನೀಡಿದ್ದ ಹಣವೆಷ್ಟು; ಇದುವರೆವಿಗೂ ಪರಿಹಾರ ನೀಡದಿದ್ದಲ್ಲಿ ಶ್ರೀಘ್ರವಾಗಿ ಪರಿಹಾರ ನೀಡಲು ಸರ್ಕಾರ ಕೈಗೊಳ್ಳುವ ಕ್ರಮವೇನು ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಅತಿವೃಷ್ಠಿ/ ಪ್ರವಾಹದ ಪರಿಹಾರದ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೩೫ (೧೨೬೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಆಗಸ್ಟ್ ಮಾಹೆಯಲ್ಲಿ ಅತಿವೃಷ್ಠಿ/ಪ್ರವಾಹದಿಂದ ಜೀವಹಾನಿ, ಬೆಳೆಹಾನಿ ಮನೆ ಹಾನಿಯಾಗಿದ್ದು, ಎಷ್ಟು ಕುಟುಂಬಗಳು ಹಾನಿಗೊಳಗಾಗಿವೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಹಾನಿಗೊಳಗಾದ ಕುಟುಂಬಗಳಿಗೆ ಸರ್ಕಾರದಿಂದ ನೀಡಲಾದ ಪರಿಹಾರವೆಷ್ಟು ? (ವಿವರ ನೀಡುವುದು)

## ಲೋಕೋಪಯೋಗಿ ಇಲಾಖೆಯ ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ. ಕಾಮಗಾರಿಗಳ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೩೬ (೧೨೪೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ಲೋಕೋಪಯೋಗಿ ಇಲಾಖೆಯ ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ ಯೋಜನೆಯಡಿಯಲ್ಲಿ ಬೀದರ್ ಜಿಲ್ಲೆಗೆ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ ;

(ಆ) ಮಂಜೂರಾದ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; (ಕಾಮಗಾರಿಯ ಸ್ಥಳ (ಗ್ರಾಮ), ಕಾಮಗಾರಿಗೆ ತಗುಲಿದ ವೆಚ್ಚ, ಕಾಮಗಾರಿ ನಿರ್ವಹಿಸಿದ ಗುತ್ತಿಗೆದಾರರ ಹೆಸರು, ವಿಧಾನ ಸಭಾ ಕ್ಷೇತ್ರವಾರು, ವರ್ಷವಾರು ಸಂಪೂರ್ಣ ವಿವರ ನೀಡುವುದು)

(ಇ) ಮಂಜೂರಾದ ಕಾಮಗಾರಿಗಳನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಕಾಲೋನಿಗಳಲ್ಲಿ ಕೈಗೊಳ್ಳದೇ ಬೇರೆ ಕಡೆ ಕೈಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದಿಂದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗಿದೆಯೇ ? (ಸ್ಪಷ್ಟ ಮಾಹಿತಿ ನೀಡುವುದು)

## ಭೂ ಚೇತನ ಕಾರ್ಯಕ್ರಮದ ಅನುಷ್ಠಾನ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೩೭ (೧೨೪೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಭೂ ಚೇತನ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಕಳೆದ ೩ ವರ್ಷಗಳ ಅವಧಿಯಲ್ಲಿ ವಿವಿಧ ತಾಲ್ಲೂಕುಗಳಲ್ಲಿ ಖರ್ಚು ಮಾಡಲಾದ ಹಣವೆಷ್ಟು ; ಈ ಯೋಜನೆಯು ಯಾವ ಯಾವ ತಾಲ್ಲೂಕುಗಳಲ್ಲಿ ಜಾರಿಯಲ್ಲಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಅವಧಿಯಲ್ಲಿ ಪ್ರತಿ ತಾಲ್ಲೂಕುಗಳಲ್ಲಿ ಎಷ್ಟೆಷ್ಟು ಹೆಕ್ಟೇರ್‌ಗಳಲ್ಲಿ ಎಷ್ಟೆಷ್ಟೂ ಪ್ರಮಾಣದ ಇಳುವರಿ ಹೆಚ್ಚಳವನ್ನು ಸಾಧಿಸಲಾಗಿದೆ ;

(ಇ) ಪ್ರಸಕ್ತ ಸಾಲಿನಲ್ಲಿ ಈ ಯೋಜನೆಯನ್ನು ಯಾವ ಯಾವ ತಾಲ್ಲೂಕುಗಳಲ್ಲಿ ವಿಸ್ತರಿಸಲಾಗಿದೆ ; ಮತ್ತು ಈ ಆಯವ್ಯಯದಲ್ಲಿ ಈ ಯೋಜನೆಯ ಅನುಷ್ಠಾನಕ್ಕಾಗಿ ನಿಗದಿ ಮಾಡಿರುವ ಹಣವೆಷ್ಟು ?

## ಲೋಕೋಪಯೋಗಿ ಇಲಾಖೆ ರಸ್ತೆ ಮತ್ತು ಕಟ್ಟಡಗಳ ಅಭಿವೃದ್ಧಿ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೩೮ (೧೨೪೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ಪ್ರತಿ ವರ್ಷ ಕೈಗೊಂಡಿರುವ ರಸ್ತೆ ಮತ್ತು ಕಟ್ಟಡ ಕಾಮಗಾರಿಗಳಾವುವು ; (ವಿಧಾನ ಸಭಾ ಕ್ಷೇತ್ರವಾರು ಅಂಕಿ ಅಂಶಗಳೊಂದಿಗೆ ವಿವರ ಒದಗಿಸುವುದು)

(ಆ) ಸದರಿ ಅವಧಿಯಲ್ಲಿ ಜಿಲ್ಲೆಯಲ್ಲಿ ಎಷ್ಟು ಕಿ.ಮೀ. ರಸ್ತೆಯನ್ನು ಅಭಿವೃದ್ಧಿ ಪಡಿಸಲಾಯಿತು ; ಎಷ್ಟು ಕಿ.ಮೀ. ರಸ್ತೆಯನ್ನು ಹೊಸದಾಗಿ ನಿರ್ಮಿಸಲಾಯಿತು ; ಎಷ್ಟು ಕಿ.ಮೀ. ರಸ್ತೆಯನ್ನು ಮೇಲ್ದರ್ಜೆಗೆ ಏರಿಸಲಾಯಿತು ; ಯಾವ ಯಾವ ಕಟ್ಟಡಗಳು ಮತ್ತು ಸೇತುವೆಗಳನ್ನು ನಿರ್ಮಿಸಲಾಯಿತು ; (ವಿಧಾನಸಭಾ ಕ್ಷೇತ್ರವಾರು ವಿವರಗಳನ್ನು ಒದಗಿಸುವುದು)

(ಇ) ಮೇಲ್ಕಂಡ ಕಾಮಗಾರಿಗಳಿಗೆ ಪ್ರತಿ ವರ್ಷ ವೆಚ್ಚ ಮಾಡಿದ ಹಣವೆಷ್ಟು; ಈ ಪೈಕಿ ರಾಜ್ಯ ಸರ್ಕಾರದ ಹಣವೆಷ್ಟು, ಕೇಂದ್ರ ಸರ್ಕಾರದ ಹಣವೆಷ್ಟು ;

(ಈ) ಈ ಕಾಮಗಾರಿಗಳನ್ನು ನಿರ್ವಹಿಸಿದ ಗುತ್ತಿಗೆದಾರರು ಯಾರು ಮತ್ತು ಕಾಮಗಾರಿಗಳನ್ನು ಎಷ್ಟು ಕಾಲಮಿತಿಯೊಳಗೆ ನಿರ್ಮಿಸಲಾಗಿದೆ ; ನಿರ್ಮಿಸದೇ ತಡೆಹಿಡಿಯಲಾದ ಕಾಮಗಾರಿಗಳೆಷ್ಟು ? (ಅವುಗಳ ಸಾದಕ ಬಾದಕಗಳು ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು)

## ಪಿ.ಡಬ್ಲ್ಯೂ.ಡಿ ಮೂಲಕ ಕೈಗೊಳ್ಳುವ ಆದ್ಯತಾ ಕಾಮಗಾರಿಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೪೯ (೧೨೩೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಿ.ಡಬ್ಲ್ಯೂ.ಡಿ ಇಲಾಖೆಯ ಮೂಲಕ ಕೈಗೊಳ್ಳುವ ಆದ್ಯತಾ ಕಾಮಗಾರಿಗಳು ಯಾವುವು ; ಈ ಆದ್ಯತಾ ಕಾಮಗಾರಿಗಳನ್ನು ಯಾವ ಆಧಾರದಲ್ಲಿ ನಿರ್ಧರಿಸಲಾಗುತ್ತದೆ ; ಆದ್ಯತಾ ಕಾಮಗಾರಿಗಳನ್ನು ಗುರುತಿಸಲು ಸರ್ಕಾರವು ಯಾವ ರೀತಿಯ ನಿಯಮಾವಳಿಗಳನ್ನು, ಮಾರ್ಗಸೂಚಿಗಳನ್ನು ಹೊರಡಿಸಿದೆ ; (ಸದರಿ ನಿಯಮಾವಳಿ, ಮಾರ್ಗಸೂಚಿ, ಆದೇಶದ ಪ್ರತಿಯನ್ನು ಒದಗಿಸುವುದು)

(ಆ) ಹಾಸನ ಜಿಲ್ಲೆಯಲ್ಲಿ ಕಳೆದ ಆರು ವರ್ಷಗಳಲ್ಲಿ ಪಿ.ಡಬ್ಲ್ಯೂ.ಡಿ ಇಲಾಖೆಯ ಮೂಲಕ ಕೈಗೊಂಡ ಆದ್ಯತಾ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸಿರುವ ಗುತ್ತಿಗೆದಾರರ ವಿವರ ಒದಗಿಸುವುದು ?

(ಸದರಿ ಆದ್ಯತಾ ಕಾಮಗಾರಿಗಳಿಗೆ ನಿಗದಿಪಡಿಸಿದ ಮೊತ್ತ, ಕಾಮಗಾರಿ ಪೂರ್ಣಗೊಂಡಾಗ ಆದ ವೆಚ್ಚ, ಆದ್ಯತಾ ಕಾಮಗಾರಿ ಪೂರ್ಣಗೊಂಡ ದಿನಾಂಕ, ಸದರಿ ಕಾಮಗಾರಿಗೆ ಅಂತಿಮ ಬಿಲ್ಲು ಪಾವತಿಸಿದ ದಿನಾಂಕದೊಂದಿಗೆ ವಿವರ ನೀಡುವುದು)

## ಬಾಕಿ ಹಣ ಬಿಡುಗಡೆಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೪೦ (೧೨೧೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಲೋಕೋಪಯೋಗಿ ಇಲಾಖೆಯಲ್ಲಿ ಜೇಷ್ಠತೆಯಲ್ಲಿ ಪರಿಗಣಿಸದೆ ೩೦೫ ಕೋಟಿ ಮೊತ್ತದ ಕಾಮಗಾರಿಗಳ ಬಾಕಿ ಹಣವನ್ನು ಪಾವತಿ ಮಾಡಿರುವ ಕುರಿತು ಪತ್ರಿಕೆಗಳಲ್ಲಿ ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಾಮಗಾರಿಗಳ ಬಾಕಿ ಹಣವನ್ನು ಪಾವತಿ ಮಾಡುವಲ್ಲಿ ಭ್ರಷ್ಟಾಚಾರ ಆಗಿರುವ ಕುರಿತು ಸರ್ಕಾರದ ನಿಲುವೇನು ;

(ಆ) ಲೋಕೋಪಯೋಗಿ ಇಲಾಖೆಯಲ್ಲಿ ೩೦೫ ಕೋಟಿ ಮೊತ್ತದ ಕಾಮಗಾರಿಗಳ ಬಾಕಿ ಹಣವನ್ನು ಪಾವತಿ ಮಾಡಲು ಹಣ ಬಿಡುಗಡೆ ಮಾಡುವಾಗ ಯಾವ ಜಿಲ್ಲೆಗೆ ಎಷ್ಟು ಮೊತ್ತವನ್ನು ಬಿಡುಗಡೆ ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಹಾಸನ ಜಿಲ್ಲೆಗೆ ಬಿಡುಗಡೆ ಮಾಡಲಾದ ಮೊತ್ತವೆಷ್ಟು ; ಸದರಿ ಮೊತ್ತವನ್ನು ಯಾವ ಕಾಮಗಾರಿಗಳ ಬಾಕಿ ಹಣವನ್ನು ಪಾವತಿ ಮಾಡಲು ಬಳಸಿಕೊಳ್ಳಲಾಗಿದೆ ; (ಕಾಮಗಾರಿಯ ವಿವರ, ಸದರಿ

ಕಾಮಗಾರಿ ಆರಂಭಗೊಂಡ ದಿನಾಂಕ, ಕಾಮಗಾರಿ ಮುಕ್ತಾಯಗೊಂಡ ದಿನಾಂಕ, ಅಂತಿಮ ಬಾಕಿ ಮೊತ್ತದ ಬಿಲ್ಲು ಪಾವತಿ ಮಾಡಲಾದ ದಿನಾಂಕ, ಗುತ್ತಿಗೆದಾರರ ವಿವರದೊಂದಿಗೆ ಮಾಹಿತಿ ನೀಡುವುದು)

(ಈ) ಲೋಕೋಪಯೋಗಿ ಇಲಾಖೆಯಲ್ಲಿ ಕಾಮಗಾರಿಗಳ ಬಾಕಿ ಹಣವನ್ನು ಪಾವತಿ ಮಾಡುವ ಸಮಯದಲ್ಲಿ ಹಾಸನ ಜಿಲ್ಲೆಯಲ್ಲಿ ಜೇಷ್ಠತೆಯ ಆಧಾರದಲ್ಲಿ ಗುತ್ತಿಗೆದಾರರಿಗೆ ಪಾವತಿಸಿದ ಮೊತ್ತ ಹಾಗೂ ಆದ್ಯತೆಯ ಆಧಾರದಲ್ಲಿ ಗುತ್ತಿಗೆದಾರರಿಗೆ ಪಾವತಿಸಿದ ಮೊತ್ತವೆಷ್ಟು ? (ಗುತ್ತಿಗೆದಾರರ ಹೆಸರಿನೊಂದಿಗೆ ಮಾಹಿತಿ ನೀಡುವುದು)

## ಮಾರ್ಗಸೂಚಿ ದರಕ್ಕಿಂತ ಕಡಿಮೆ ದರಕ್ಕೆ ಸ್ಥಿರಾಸ್ಥಿ ನೋಂದಣಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೪೧ (೧೨೧೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೯ನೇ ಸಾಲಿನಲ್ಲಿ ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಸ್ಥಿರಾಸ್ಥಿಗಳ ಮಾರಾಟ/ಖರೀದಿ ನೋಂದಣಿಯನ್ನು ಎಷ್ಟು ಸಮಯದವರೆಗೆ ನಿಷೇಧಿಸಲಾಗಿತ್ತು ; ಮತ್ತು ಯಾವ ಕಾರಣಕ್ಕೆ ನಿಷೇಧಿಸಲಾಗಿತ್ತು ;

(ಆ) ಮಾರ್ಚ್ ೨೦೧೮ಕ್ಕೆ ಕೊನೆಗೊಂಡ ಆರ್ಥಿಕ ವರ್ಷಕ್ಕೆ ಸಂಬಂಧಿಸಿದ ಸಿಎಜಿ ವರದಿಯಲ್ಲಿ ಬೆಂಗಳೂರು ನಗರ ಜಿಲ್ಲೆ ಮತ್ತು ಗ್ರಾಮಾಂತರ ಜಿಲ್ಲಾ ವ್ಯಾಪ್ತಿಯ ಉಪ ನೋಂದಣಾಧಿಕಾರಿಗಳ ಕಛೇರಿಯಲ್ಲಿ ಮಾರ್ಗಸೂಚಿ ದರಕ್ಕಿಂತ

ಕಡಿಮೆ ದರಕ್ಕೆ ಸ್ಥಿರಾಸ್ಥಿ ವ್ಯಾರಾಟ/ಖರೀದಿ ನೋಂದಣಿ ಮಾಡಿರುವುದರಿಂದ ಮುದ್ರಾಂಕ ಮತ್ತು ನೋಂದಣಿ ಶುಲ್ಕದಲ್ಲಿ ೪೫೦ ಕೋಟಿಗೂ ಹೆಚ್ಚು ಮೊತ್ತ ಸರ್ಕಾರಕ್ಕೆ ನಷ್ಟವಾಗಿರುವ ಬಗ್ಗೆ ವರದಿಯಾಗಿದ್ದು, ಈ ಅವ್ಯವಹಾರದಲ್ಲಿ ಪಾಲ್ಗೊಂಡ ಉಪ ನೋಂದಣಾಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಸ್ಥಿರಾಸ್ಥಿಗಳನ್ನು ನೋಂದಣಿ ಮಾಡಲು ಇರುವ ನೋಂದಣಿ ಕಛೇರಿಗಳ ಸಂಖ್ಯೆ ಎಷ್ಟು ; (ವಿಳಾಸದೊಂದಿಗೆ ವಿವರ ನೀಡುವುದು)

(ಈ) ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೋಂದಣಾಧಿಕಾರಿಯವರು ಎಷ್ಟು ವರ್ಷಗಳಿಂದ ಬೆಂಗಳೂರು ನಗರದಲ್ಲೇ ಕರ್ತವ್ಯ ನಿರ್ವಹಿಸುತ್ತಿದ್ದಾರೆ ; ೧೦ ವರ್ಷಗಳಿಗೂ ಅಧಿಕ ವರ್ಷದಿಂದ ಬೆಂಗಳೂರಿನಲ್ಲೇ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳ ಸಂಖ್ಯೆ ಎಷ್ಟು ? (ಹೆಸರಿನೊಂದಿಗೆ ಮಾಹಿತಿ ನೀಡುವುದು)

## ಕೃಷಿ ಹೊಂಡಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೪೨ (೧೨೧೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ನಿರ್ಮಾಣಗೊಂಡಿರುವ ಕೃಷಿ ಹೊಂಡಗಳ ಸಂಖ್ಯೆ ಎಷ್ಟು ; (ವರ್ಷವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕೃಷಿ ಹೊಂಡಗಳನ್ನು ನಿರ್ಮಿಸಲು ಕಳೆದ ಮೂರು ವರ್ಷಗಳಲ್ಲಿ ಸರ್ಕಾರವು ಮಾಡಿರುವ ವೆಚ್ಚ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸರ್ಕಾರದ ಸಹಾಯಾನುದಾನದಿಂದ ಕೃಷಿ ಹೊಂಡಗಳನ್ನು ನಿರ್ಮಿಸಿರುವ ಕೃಷಿಕರ ಹೆಸರು ಮತ್ತು ವಿಳಾಸ ಹಾಗೂ ಎಷ್ಟು ಕೃಷಿ ಹೊಂಡಗಳನ್ನು ನಿರ್ಮಿಸಿರುತ್ತಾರೆ ಎಂಬುದರ ಕುರಿತು ಜಿಲ್ಲಾವಾರು ಮಾಹಿತಿ ನೀಡುವುದು ;

(ಈ) ಒಂದು ಕೃಷಿ ಹೊಂಡ ನಿರ್ಮಿಸಲು ಆಗುವ ವೆಚ್ಚ ಎಷ್ಟು ; ಸರ್ಕಾರದ ಸಹಾಯ ಧನವೆಷ್ಟು ; ಕೃಷಿ ಹೊಂಡ ನಿರ್ಮಿಸಲು ಯಾವ ಯಾವ ಸಂಸ್ಥೆಗಳಿಗೆ ದರ ಕರಾರಿನ್ವಯ ಅವಕಾಶ ಕಲ್ಪಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಕೃಷಿ ಹೊಂಡಗಳ ನಿರ್ಮಾಣದಲ್ಲಿ ಅವ್ಯವಹಾರ ಆಗಿರುವ ಕುರಿತು ಸರ್ಕಾರದ ನಿಲುವೇನು ?

## ಗುತ್ತಿಗೆದಾರರಿಗೆ ಬಿಲ್ಲುಗಳ ಪಾವತಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೧೪೩ (೧೨೩೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಿ.ಡಬ್ಲ್ಯೂ.ಡಿ. ಇಲಾಖೆಯಲ್ಲಿ ಎಷ್ಟು ಮೊತ್ತದ ಬಿಲ್ಲುಗಳು ಗುತ್ತಿಗೆದಾರರಿಗೆ ಪಾವತಿಯಾಗಲು ಬಾಕಿ ಇವೆ ; (ಜಿಲ್ಲಾವಾರು ಮತ್ತು ಯಾವ ವರ್ಷದ ಬಿಲ್ಲುಗಳು ಪಾವತಿಸಲು ಬಾಕಿ ಇವೆ ಎಂಬುದರ ಕುರಿತು ವರ್ಷವಾರು ಮಾಹಿತಿ ನೀಡುವುದು)

(ಆ) ಕಳೆದ ಎರಡು ವರ್ಷಗಳಲ್ಲಿ ಗುತ್ತಿಗೆದಾರರಿಗೆ ಪಾವತಿಸಲು ಬಿಡುಗಡೆಗೊಂಡ ಮೊತ್ತವೆಷ್ಟು ; ಯಾವ ಗುತ್ತಿಗೆದಾರರಿಗೆ ಎಷ್ಟು ಮೊತ್ತವನ್ನು ಪಾವತಿಸಲಾಗಿದೆ ; (ತಿಂಗಳವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಗುತ್ತಿಗೆದಾರರು ಕೆಲಸವನ್ನು ಪೂರ್ಣಗೊಳಿಸಿದ ಎಷ್ಟು ಸಮಯದ ಬಳಿಕ ಗುತ್ತಿಗೆದಾರರಿಗೆ ಬಾಕಿ ಮೊತ್ತದ ಬಿಲ್ಲುಗಳ ಪಾವತಿಯಾಗುತ್ತಿದೆ; ಸರ್ಕಾರದಿಂದ ವಿಳಂಬ ಪಾವತಿಗೆ ಬಡ್ಡಿ ನೀಡಲಾಗುತ್ತಿದೆಯೇ ; ಇದುವರೆಗೆ ಎಷ್ಟು ಗುತ್ತಿಗೆದಾರರಿಗೆ ಬಡ್ಡಿ ಪಾವತಿಸಲಾಗಿದೆ ;

(ಈ) ಗುತ್ತಿಗೆದಾರರಿಗೆ ಬಾಕಿ ಮೊತ್ತವನ್ನು ಪಾವತಿಸಲು ಸರ್ಕಾರವು ಯಾವ ರೀತಿಯ ನಿಯಮಗಳನ್ನು ಅನುಸರಿಸುತ್ತದೆ ; ಸಮರ್ಪಕ ಮಾರ್ಗ ಸೂಚಿಗಳನ್ನು ಹೊರಡಿಸಲಾಗಿದೆಯೇ ? (ಮಾರ್ಗಸೂಚಿಯ ಪ್ರತಿ ಒದಗಿಸುವುದು)

## ಜಿಲ್ಲಾಧಿಕಾರಿಗಳ ಕೋವಿಡ್ ಆಸ್ಪತ್ರೆ ಭೇಟಿ ಕುರಿತು

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೪೪ (೧೨೨೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ವಿವಿಧ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಪೈಕಿ ಕೋವಿಡ್–೧೯ ಆಸ್ಪತ್ರೆಗಳಿಗೆ ಭೇಟಿ ಮಾಡಿ ಕಾರ್ಯಗಳನ್ನು ಪರಿಶೀಲನೆ ಮಾಡಿದವರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಇವರಲ್ಲಿ ಎಷ್ಟು ಮಂದಿ ತಾಲ್ಲೂಕು ಮಟ್ಟದಲ್ಲಿರುವ ಕೋವಿಡ್–೧೯ ಆಸ್ಪತ್ರೆಗಳಿಗೆ ಭೇಟಿ ಮಾಡಿದ್ದಾರೆ ? (ಮಾಹಿತಿ ಒದಗಿಸುವುದು)

## ಚಾಮರಾಜನಗರ ಹೆದ್ದಾರಿಯಲ್ಲಿರುವ ಬೆಂದರವಾಡಿ ಕೆರೆ ಏರಿಯನ್ನು ಅಗಲೀಕರಣಗೊಳಿಸುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೪೫ (೧೨೪೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು–ಚಾಮರಾಜನಗರ ಹೆದ್ದಾರಿಯಲ್ಲಿ ಬರುವ ಬೆಂಡರವಾಡಿ ಕೆರೆ ಏರಿಯ ಮೇಲಿನ ರಸ್ತೆಯು ಕಿರಿದಾಗಿ, ತಿರುವಿನಿಂದ ಕೂಡಿರುವುದರಿಂದ ದ್ವಿಮುಖ ವಾಹನ ಸಂಚಾರಕ್ಕೆ ಅಡಚಣೆ ಉಂಟಾಗಿದ್ದು, ಈ ಕೆರೆ ಏರಿಯ ಮೇಲೆ ಸಂಚರಿಸುವ ವಾಹನಗಳಿಗೆ ಅಪಾಯ ಸಂಭವಿಸಬಹುದಾದ ಪರಿಸ್ಥಿತಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರಾಷ್ಟ್ರೀಯ ಹೆದ್ದಾರಿಯಲ್ಲಿ ವಾಹನ ಸಂಚಾರ ದಿನೇ ದಿನೇ ಅಧಿಕವಾಗುತ್ತಿರುವುದರಿಂದ, ಈ ಏರಿಯನ್ನು ಅಗಲೀಕರಣಗೊಳಿಸಿ ರಸ್ತೆಯನ್ನು ವಿಸ್ತರಿಸಿ, ವಾಹನಗಳ ಸುಗಮ ಸಂಚಾರಕ್ಕೆ ಅವಕಾಶ ಕಲ್ಪಿಸಿಕೊಡಲು ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದೇ ?

## ನಂಜನಗೂಡು ಪಟ್ಟಣ ವ್ಯಾಪ್ತಿಯಲ್ಲಿ ರಾಷ್ಟ್ರೀಯ ಹೆದ್ದಾರಿ ದುರಸ್ಥಿ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೪೬ (೧೨೩೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಂಜನಗೂಡು ಪಟ್ಟಣದ ಸುಜಾತಪುರಂ ರೈಲ್ವೆ ಲೆವೆನ್ ಕ್ರಾಸಿಂಗ್‌ನಿಂದ ಗೋಳೂರುವರೆಗೆ ಇರುವ ಹೆದ್ದಾರಿಯು ಕಿತ್ತುಹೋಗಿ ಹಳ್ಳಬಿದ್ದು ವಾಹನ ಸಂಚಾರಕ್ಕೆ ಅನಾನುಕೂಲ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹೆದ್ದಾರಿಯ ಈ ಭಾಗವನ್ನು (ಸ್ಟ್ರೆಚ್) ಕೂಡಲೇ ದುರಸ್ಥಿಗೊಳಿಸಿ ಸುಗಮ ಸಂಚಾರಕ್ಕೆ ಅನುಕೂಲ ಕಲ್ಪಿಸಲಾಗುವುದೇ ?

## ಲೋಕೋಪಯೋಗಿ ಇಲಾಖೆಯಿಂದ ಅನುದಾನ ಹಂಚಿಕೆ ಕುರಿತು

**ಶ್ರೀ ಸುನೀಲ್ ಗೌಡ ಬಸನಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೪೭ (೧೧೬೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಲೋಕೋಪಯೋಗಿ ಇಲಾಖೆಯಿಂದ ೨೦೧೮ ಏಪ್ರಿಲ್ ೧ ರಿಂದ ಪ್ರಸ್ತುತ ದಿನಾಂಕದವರೆಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು; (ವಿಧಾನ ಸಭಾ ಕ್ಷೇತ್ರವಾರು ಮತ್ತು ಯೋಜನೆವಾರು ವಿವರಗಳನ್ನು ನೀಡುವುದು)

(ಆ) ಸದರಿ ಅನುದಾನ ಬಿಡುಗಡೆ ಮಾಡಲು ಅನುಸರಿಸಿದ ಮಾನದಂಡಗಳು ಯಾವುವು ? (ಮಾನದಂಡಗಳ ಪ್ರತಿ ಒದಗಿಸುವುದು)

## ಬಸವ ವಸತಿ ಯೋಜನೆಯಡಿ ಮನೆಗಳ ಹಂಚಿಕೆ ಕುರಿತು

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೪೮ (೧೧೬೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೮–೧೯ ಮತ್ತು ೨೦೧೯–೨೦ನೇ ಸಾಲಿನಲ್ಲಿ ಬಸವ ವಸತಿ ಯೋಜನೆಯಡಿ ಮನೆ ಹಂಚಿಕೆ ಮಾಡದೇ ಇರುವುದರಿಂದ ನಿವೇಶನ/ಮನೆ ರಹಿತ ಫಲಾನುಭವಿಗಳು ವಸತಿ ಸೌಲಭ್ಯದಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಬಸವ ವಸತಿ ಯೋಜನೆಯಡಿ ೨೦೧೮–೧೯ ಮತ್ತು ೨೦೧೯–೨೦ನೇ ಸಾಲಿನಲ್ಲಿ ನಿವೇಶನ/ಮನೆ ಹಂಚಿಕೆ ಆಗದಿರಲು ಕಾರಣವೇನು ;

(ಇ) ಅರ್ಹ ಫಲಾನುಭವಿಗಳಿಗೆ ನಿವೇಶನ/ಮನೆ ಹಂಚಿಕೆಗಾಗಿ ಸರ್ಕಾರವು ಕ್ರಮ ಕೈಗೊಳ್ಳುವುದೇ ?

## ಅತಿವೃಷ್ಠಿ/ಪ್ರವಾಹ ನೆರೆ ಸಂತ್ರಸ್ಥರಿಗೆ ಪುನರ್ ವಸತಿ ಕಲ್ಪಿಸುವ ಕುರಿತು

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೪೯ (೧೧೫೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೯–೨೦ ನೇ ಸಾಲಿನ ಬೆಳಗಾವಿ ಜಿಲ್ಲೆಯಲ್ಲಿ ಸಂಭವಿಸಿದ ಅತಿವೃಷ್ಠಿ / ಪ್ರವಾಹದಿಂದ ಮನೆ ಕಳೆದುಕೊಂಡ ನೆರೆ ಸಂತ್ರಸ್ಥರ ಸಂಖ್ಯೆ ಎಷ್ಟು ;

(ಆ) ಈ ಪೈಕಿ ಸಂಪೂರ್ಣ ಹಾಗೂ ಭಾಗಶ: ಹಾನಿಯಾದ ಮನೆಗಳ ಸಂತ್ರಸ್ಥರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ನೆರೆ ಸಂತ್ರಸ್ಥರ ಪುನರ್ ವಸತಿ ಯೋಜನೆಯಡಿ ಸದರಿ ಸಂತ್ರಸ್ಥರ ಮನೆ ನಿರ್ಮಾಣಕ್ಕಾಗಿ ಬಿಡುಗಡೆಯಾದ ಅನುದಾನ ಎಷ್ಟು ? (ಸಂಪೂರ್ಣ ಹಾಗೂ ಭಾಗಶ: ಹಾನಿಯಾದ ಮನೆಗಳ ನಿರ್ಮಾಣಕ್ಕಾಗಿ ಬಿಡುಗಡೆಯಾದ ಅನುದಾನದ ವಿವರವನ್ನು ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 057/20 ಪ್ರತಿಗಳು/24–09–2020